ನಿಮ್ಮೂರು ಸುದ್ದಿ

ಕನ್ನಡ ದಿನ ಪತ್ರಿಕೆ NIMMURU SUDDI

ಸಂಪಾದಕರು: ಸುಂದರ್ Editor : Sundar

ಏಕ ಕಾಲಕ್ಕೆ ಬಳ್ಳಾರಿ, ಕೊಪ್ಪಳ, ಯಾದಗಿರಿ, ರಾಯಚೂರು, ಕಲಬುರ್ಗಿ, ಬೀದರ, ವಿಜಯನಗರ ಜಿಲ್ಲೆಗಳಲ್ಲಿ ಪ್ರಕಟ

Volume: 01, Issue: 109 RNI Number : KNKAN/25/A2770 28-04-2026 Tuesday Page 04, Price 2/- suddinimmuru@gmail.com Mob:-8660146563

ಸಂಪುಟ :01 ಸಂಚಿಕೆ :109 ರಾಯಚೂರು 28-04-2026 ಮಂಗಳವಾರ ಪುಟ 04 ಬೆಲೆ ರೂ.2/- ಮೊ:8660146563

ಶಿಕ್ಷಕರ ನೇಮಕಾತಿಯನ್ನು ನಾಲ್ಕೈದು ತಿಂಗಳಲ್ಲಿ ಮುಕ್ತಾಯ ಮಾಡಲಾಗುವುದು: ಸಚಿವ ಎಸ್. ಮಧು ಬಂಗಾರಪ್ಪ

ಶಿವಮೊಗ್ಗ,ಏ.27-

ಶಿಕ್ಷಕರ ನೇಮಕಾತಿಯನ್ನು ನಾಲ್ಕೈದು ತಿಂಗಳಲ್ಲಿ ಮಾಡಲಾಗುವುದು ಎಂದು ಶಿಕ್ಷಣ ಸಚಿವ ಎಸ್. ಮಧು ಬಂಗಾರಪ್ಪ ಅವರು ತಿಳಿಸಿದರು.

ಇಂದು ಶಿವಮೊಗ್ಗದ ತಮ್ಮ ಕಚೇರಿಯಲ್ಲಿ ಮಾಧ್ಯಮಗೋಷ್ಠಿಯಲ್ಲಿ ಮಾತನಾಡಿದ ಅವರು, 'ಒಳ ಮೀಸಲಾತಿ ಘೋಷಣೆಯಾದ ನಂತರ ಶುಕ್ರವಾರ ನೇಮಕಾತಿ ಕುರಿತು ಪ್ರಥಮ ಸಭೆ ನಡೆಸಲಾಗಿದೆ. ನಂತರ ಎರಡು ದಿನ ರಜೆ ಇತ್ತು. ಈಗ ಕೆಲಸದ ಮೊದಲ ದಿನವಾಗಿದೆ. ಒಳ ಮೀಸಲಾತಿ ಸಮಸ್ಯೆ ಬಗೆಹರಿದಿದೆ. ಶಿಕ್ಷಕರ ನೇಮಕಾತಿಯ ಸಿಇಟಿ ಆದಷ್ಟು ಬೇಗ ಮಾಡುತ್ತೇವೆ' ಎಂದರು.

'ಕಳೆದ ವರ್ಷ 6 ತಿಂಗಳ ಒಳಗೆಯೇ ಮಾಡಿ ಮುಗಿಸಬೇಕೆಂದುಕೊಂಡಿದ್ದೆವು. ಈಗ ಒಳ ಮೀಸಲಾತಿ ಮುಗಿದಿದೆ. ಇದನ್ನು ನಾಲ್ಕೈದು ತಿಂಗಳಲ್ಲಿ ಮಾಡಿ ಮುಗಿಸಬೇಕೆಂದು ತೀರ್ಮಾನಿಸಿದ್ದೇವೆ. ಜೂನ್‌ನಲ್ಲಿಯೇ ಶಿಕ್ಷಕರ ನೇಮಕ ಮಾಡಬೇಕು ಅಂದುಕೊಂಡಿದ್ವಿ. ನಂತರ ಜುಲೈನಲ್ಲಿ ಅಂದುಕೊಂಡಿದ್ದೆವು. ಎರಡು ಮೂರು ತಿಂಗಳಲ್ಲಿ ಮ್ಯಾಜಿಕ್ ಮಾಡಲು ಆಗಲ್ಲ, ಆದಷ್ಟು ಬೇಗ ಮಾಡಿ ಮುಗಿಸುತ್ತೇವೆ' ಎಂದು ಹೇಳಿದರು.

'ಯಾರು ಯಾರು ಓದಿಕೊಂಡಿದ್ದಾರೆ. ಅವರ ಕಷ್ಟ ನನಗೆ ಗೊತ್ತಿದೆ. ನನಗೂ



ಕೂಡ ಅವಶ್ಯಕತೆ ಇದೆ. ನನ್ನ ಇಲಾಖೆಯಲ್ಲಿಯೇ ಅತಿ ಹೆಚ್ಚು ನೇಮಕಾತಿ ಮಾಡಿಕೊಡಬೇಕಿದೆ. ಕೆಲವರು ನಮ್ಮ ಬಳಿ ದುಡ್ಡಿಲ್ಲ ಅಂತ ಹೇಳಿದ್ದಾರೆ. ನಮ್ಮಲ್ಲಿ ದುಡ್ಡಿಲ್ಲ ಅನ್ನುವವರಿಗೆ ತಲೆಯಲ್ಲಿ ಬುದ್ಧಿಯೇ ಇಲ್ಲ' ಎಂದು ಟೀಕಿಸಿದರು.

'ಸರ್ಕಾರದಿಂದ ವಿವಿಧ ಹುದ್ದೆಗಳಿಗೆ ನೇಮಕಾತಿ ಮಾಡಿಕೊಳ್ಳಲು ಕೋರ್ಟ್‌ನಲ್ಲಿ ವ್ಯಾಜ್ಯ ಇರುವುದರಿಂದ ನೇಮಕಾತಿ ತಡವಾಗುತ್ತಿದೆ. ರಾಜ್ಯದಲ್ಲಿ ಅತಿ ಹೆಚ್ಚು ನೇಮಕಾತಿ ಇರುವುದು ನಮ್ಮ ಇಲಾಖೆಯಲ್ಲಿ. ನಮ್ಮ ಇಲಾಖೆಯ ಟಿಇಟಿ ಪರೀಕ್ಷೆ ಮುಗಿದಿದೆ. ಈಗ ಸಿಇಟಿ ಪರೀಕ್ಷೆ ಆಗಬೇಕಿದೆ. ಈಗ ಒಳ ಮೀಸಲಾತಿ ಘೋಷಣೆ ಆಗಿರುವುದರಿಂದ ನೇಮಕಾತಿ ಹಾದಿ ಸುಗಮವಾಗಿದೆ' ಎಂದು ಹೇಳಿದರು.

'ನನಗೆ ಮೊದಲನೇ ವರ್ಷ ಇಲಾಖೆ ಬಗ್ಗೆ ತಿಳಿದುಕೊಳ್ಳಲು ಕಷ್ಟಕರವಾಗಿತ್ತು. ಫಲಿತಾಂಶದ ಬಗ್ಗೆ ಮಾತನಾಡುವವರು ಅವರ ಬಗ್ಗೆಯೇ ಅವರು ಟೀಕೆ ಮಾಡಿಕೊಂಡಂತೆ' ಎಂದರು.

ಹೆಚ್. ವಿಶ್ವನಾಥ್‌ಗೆ ವಯಸ್ಸಾಗಿದೆ ಅವರನ್ನು ಕ್ಷಮಿಸೋಣ : ಹೆಚ್. ವಿಶ್ವನಾಥ್ ಅವರು ಫಲಿತಾಂಶ ಹೆಚ್ಚಾಗಿರುವ ಬಗ್ಗೆ ಹೇಳಿಕೆ ನೀಡಿದ್ದಕ್ಕೆ ಪ್ರತಿಕ್ರಿಯಿಸಿದ ಸಚಿವರು, ಹೆಚ್ ವಿಶ್ವನಾಥ್ ಅವರು ದೇಶದ ಭವಿಷ್ಯಕ್ಕೆ, ತಂದೆ ತಾಯಿಗೆ, ಅವರ ಶಿಕ್ಷಕರಿಗೆ ಮಾಡಿದ ಅವಮಾನವಾಗಿದೆ. ಅವರು ಕಾಪಿ ಹೊಡೆಯಿಸಿ ಪಾಸ್ ಮಾಡಿದ್ದರೆಂದು ಹೇಳಿದ್ದಾರೆ. ಆದರೆ ಹಿಂದೆ ಅಂಬಿ ನಿಂಗೆ ವಯಸ್ಸಾಯ್ತು ಎಂಬ ಫಿಲಂ ಮಾಡಿದ್ದರು. ಅದೇ ರೀತಿ ವಿಶ್ವನಾಥ್ ಅವರಿಗೆ ವಯಸ್ಸಾಗಿದೆ ಅಂತ ಹೇಳಬಹುದು. ಅವರ ಬಗ್ಗೆ ನಾನು ಹೆಚ್ಚು

4 ನೇ ಪುಟಕ್ಕೆ...

ಅಧಿಕೃತವಾಗಿ ಬಿಜೆಪಿ ಸದಸ್ಯರಾದ ಎಎಪಿಯ 7 ರಾಜ್ಯಸಭಾ ಸಂಸದರು



ನವದೆಹಲಿ, ಏ. 27 -

ರಾಜ್ಯಸಭಾ ಅಧ್ಯಕ್ಷರೂ ಆಗಿರುವ ಉಪರಾಷ್ಟ್ರಪತಿ ಸಿ ಪಿ ರಾಧಾಕೃಷ್ಣನ್ ಅವರು, ಬಿಜೆಪಿಯೊಂದಿಗೆ ಆಮ್ ಆದ್ಮಿ ಪಕ್ಷದ (ಎಎಪಿ) ಏಳು ಸಂಸದರ ವಿಲೀನವನ್ನು ಅಧಿಕೃತವಾಗಿ ಒಪ್ಪಿಕೊಂಡಿದ್ದಾರೆ.

ಇದರಿಂದಾಗಿ ಅರವಿಂದ್ ಕೇಜ್ರಿವಾಲ್ ಅವರ ಪಕ್ಷದ ಬಲವು ಮೇಲ್ಮನೆಯಲ್ಲಿ ಮೂರಕ್ಕೆ ಇಳಿದಿದೆ.ಈ ಪರಿವರ್ತನೆಯ ನಂತರ, ಮೇಲ್ಮನೆಯಲ್ಲಿ ಬಿಜೆಪಿಯ ಬಲವು 113 ಕ್ಕೆ ಏರಿದೆ. ರಾಘವ್ ಚಡ್ಡಾ, ಅಶೋಕ್ ಮಿತ್ತಲ್, ಹರ್ಭಜನ್ ಸಿಂಗ್, ಸಂದೀಪ್ ಪಾಠಕ್, ವಿಕ್ರಮ್‌ಜಿತ್

4 ನೇ ಪುಟಕ್ಕೆ...

ಎಸ್.ಎಸ್.ಎಲ್.ಸಿ.ಯಲ್ಲಿ ಸಾಧನೆಗೈದ ವಿದ್ಯಾರ್ಥಿಗಳಿಗೆ ಸನ್ಮಾನ

ವಿದ್ಯಾರ್ಥಿಗಳು ನಿರಂತರ ಅಧ್ಯಯನಶೀಲರಾಗಬೇಕು: ಜಿಲ್ಲಾಧಿಕಾರಿ ನಿತೀಶ್ ಕೆ. ಸಲಹೆ

ರಾಯಚೂರು ಏ.27-

ವಿದ್ಯಾರ್ಥಿಗಳು ನಿರಂತರ ಅಧ್ಯಯನಶೀಲರಾದಾಗ ಮಾತ್ರ ಪರೀಕ್ಷೆಯಲ್ಲಿ ಉತ್ತಮ ಅಂಕ ಪಡೆದು ಉನ್ನತ ಜೀವನ ನಡೆಸಲು ಸಹಕಾರಿಯಾಗುತ್ತದೆ ಎಂದು ಜಿಲ್ಲೆಯ ಜಿಲ್ಲಾಧಿಕಾರಿಗಳಾದ ನಿತೀಶ್ ಕೆ. ಅವರು ವಿದ್ಯಾರ್ಥಿಗಳಿಗೆ ಸಲಹೆ ನೀಡಿದರು. ಏಪ್ರಿಲ್ 27ರ ಸೋಮವಾರ ದಂದು ನಗರದ ನೂತನ ಜಿಲ್ಲಾಧಿಕಾರಿಗಳ ಕಚೇರಿಯ ಸಭಾಂಗಣದಲ್ಲಿ ಎಸ್.ಎಸ್.ಎಲ್.ಸಿ ವಾರ್ಷಿಕ ಪರೀಕ್ಷೆಯಲ್ಲಿ ಅತಿಹೆಚ್ಚು ಅಂಕ ಗಳಿಸಿದ ವಿದ್ಯಾರ್ಥಿಗಳಿಗೆ ವಿಶೇಷ ಸನ್ಮಾನ ಕಾರ್ಯಕ್ರಮಕ್ಕೆ ಚಾಲನೆ ನೀಡಿ ಅವರು ಮಾತನಾಡಿದರು.

ಎಸ್.ಎಸ್.ಎಲ್.ಸಿ.



ಫಲಿತಾಂಶವನ್ನು ಹೆಚ್ಚಿಸಲು ಜಿಲ್ಲೆಯ ಜಿಲ್ಲಾ ಮಟ್ಟದಿಂದ ಗ್ರಾಮೀಣ ಮಟ್ಟದವರೆಗೂ ವಿಶೇಷವಾದ ತಂಡಗಳನ್ನು ರಚಿಸಲಾಗಿತ್ತು. ಜೊತೆಗೆ ಪ್ರತಿ ತಾಲೂಕಿಗೆ ನೋಡೆಲ್ ಅಧಿಕಾರಿಗಳನ್ನು ನೇಮಕ ಮಾಡಿ, ಅಭ್ಯಾಸದಲ್ಲಿ ಹಿಂದುಳಿದ ವಿದ್ಯಾರ್ಥಿಗಳನ್ನು ಆಯ್ಕೆ ಮಾಡಿ, ಅವರಿಗೆ ವಿಶೇಷವಾದ ಕಲಿಕಾ ಚಟುವಟಿಕೆಗಳನ್ನು ನಡೆಸಿ, ಜಿಲ್ಲೆಯ ಫಲಿತಾಂಶವನ್ನು ಸುಧಾರಿಸಲಾಗಿದೆ. ಮತ್ತು ಕಲಿಕೆಯಲ್ಲಿ ಹಿಂದುಳಿದ ವಿದ್ಯಾರ್ಥಿಗಳನ್ನು ಉತ್ತೀರ್ಣಗೊಳಿಸುವ ನಿಟ್ಟಿನಲ್ಲಿ ಶಿಕ್ಷಕರು, ಶಿಕ್ಷಣ ಇಲಾಖೆಯ ಅಧಿಕಾರಿಗಳು ಅತ್ಯಂತ ಹೆಚ್ಚಿನ ಶ್ರಮ ವಹಿಸಿ ಕಾರ್ಯ ನಿರ್ವಹಿಸಿದ್ದಾರೆ ಎಂದರು.

ರಾಜ್ಯಕ್ಕೆ 21ನೇ ಸ್ಥಾನದಲ್ಲಿದ್ದೇವೆ ಎಂದು ನಮ್ಮನ್ನು ನಾವು ಬೆನ್ನು ತಟ್ಟಿಕೊಳ್ಳದೇ, ಜಿಲ್ಲೆಯ ಶೈಕ್ಷಣಿಕ ಪರಿಸ್ಥಿತಿಯನ್ನು ಸುಧಾರಿಸಲು ಇಂದಿನಿಂದಲೇ ರೂಪು ರೇಷೆಗಳನ್ನು ಹಾಕಿಕೊಳ್ಳಬೇಕಾಗಿದೆ. ಅದಕ್ಕಾಗಿ ಪ್ರತಿಯೊಬ್ಬ ವಿದ್ಯಾರ್ಥಿಗೆ ಶೈಕ್ಷಣಿಕ ಪ್ರೋತ್ಸಾಹ ನೀಡುವುದು ಅತ್ಯಗತ್ಯವಾಗಿದೆ. ಬೇರೆ ಜಿಲ್ಲೆಗಳಿಗೆ ಹೋಲಿಸಿದರೇ ನಮ್ಮಲ್ಲಿ ಶಿಕ್ಷಕರ ಕೊರತೆ ಇದ್ದು, ಈ ಸವಾಲಿನ ಮಧ್ಯೆಯೂ ಈ ಬಾರಿ ಶೈಕ್ಷಣಿಕ ಪ್ರಗತಿಯನ್ನು ಉತ್ತಮವಾಗಿ ಸಾಧಿಸಿದ್ದೇವೆ. ಇದೇ ರೀತಿ ನಿರಂತರವಾಗಿ ಶೈಕ್ಷಣಿಕ ಪ್ರಗತಿ ಹೆಚ್ಚಳಕ್ಕೆ ಎಲ್ಲಾ ಅಧಿಕಾರಿಗಳು ಶ್ರಮಿಸಬೇಕು ಎಂದರು.

ಎಸ್.ಎಸ್.ಎಲ್.ಸಿ. ಎಂದರೇ ಕೇವಲ ಪ್ರೌಢ ಶಿಕ್ಷಕ್ಕೆ ಮಾತ್ರ ಸೀಮಿತವಾಗಿರುವುದಿಲ್ಲ. ಇದು ಮುಂದಿನ ಸ್ಪರ್ಧಾತ್ಮಕ ಪರೀಕ್ಷೆಗಳಿಗೂ ಸಹಕಾರಿಯಾಗುತ್ತದೆ. ಎಸ್.ಎಸ್.ಎಲ್.ಸಿಯಲ್ಲಿ ವಿದ್ಯಾರ್ಥಿಗಳು ಕಷ್ಟ ಪಟ್ಟು ಅಭ್ಯಾಸ ಮಾಡಿದರೆ ಮುಂದಿನ ಭವಿಷ್ಯ ಉತ್ತಮವಾಗಿರುತ್ತದೆ ಎಂದು ಸಲಹೆ ನೀಡಿದರು. ವಿದ್ಯಾರ್ಥಿಗೆ ಶತೃವೆಂದರೇ ಅದು ಮೊಬೈಲ್ ಫೋನ್

4 ನೇ ಪುಟಕ್ಕೆ...

ವಿಶ್ವ ಮಲೇರಿಯಾ ದಿನ: ತರಬೇತಿ ಕಾರ್ಯಾಗಾರ

ಸಾರ್ವಜನಿಕರು ಯಾವುದೇ ಜ್ವರವಿರಲಿ, ತಕ್ಷಣ ರಕ್ತಲೇಪನ ಪರೀಕ್ಷೆ ಮಾಡಿಸಿ, ಮಲೇರಿಯಾ ತಡೆಗೆ ಸಹಕರಿಸಿ: ಡಾ.ಶಾಕೀರ್



ರಾಯಚೂರು ಏ.27-

ಸಾರ್ವಜನಿಕರು ಯಾವುದೇ ಜ್ವರವಿರಲಿ, ಮೊದಲು ರಕ್ತಲೇಪನ ಪರೀಕ್ಷೆ ಮಾಡಿಸಬೇಕು. ಇದರಿಂದ ಮಲೇರಿಯಾ ಸೇರಿದಂತೆ ಸೋಂಕಿತ ಸೊಳ್ಳೆಗಳ ಕಚ್ಚುವಿಕೆಯಿಂದ ಹರಡುವ ರೋಗಗಳ ನಿಯಂತ್ರಣಕ್ಕೆ ಸಾಧ್ಯವಾಗುವುದು ಎಂಬುದನ್ನು ವ್ಯಾಪಕ ಜನಜಾಗೃತಿಗಾಗಿ ಜಿಲ್ಲಾ ಕ್ಷಯರೋಗ ನಿರ್ಮೂಲನಾಧಿಕಾರಿ ಹಾಗೂ ಪಾಲಿಕೆ ಆರೋಗ್ಯಾಧಿಕಾರಿ ಡಾ ಮಹಮ್ಮದ್ ಶಾಕೀರ್ ಮನವಿ ಮಾಡಿದರು.

ಇತ್ತೀಚೆಗೆ ನಗರದ ಮಹಾನಗರ ಪಾಲಿಕೆಯ ಸಭಾಂಗಣದಲ್ಲಿ ಜಿಲ್ಲಾಡಳಿತ, ಜಿಲ್ಲಾ ಪಂಚಾಯತ, ಮಹಾನಗರ ಪಾಲಿಕೆ, ಜಿಲ್ಲಾ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಇಲಾಖೆ, ತಾಲೂಕಾ ಆರೋಗ್ಯಾಧಿಕಾರಿಗಳ ಕಾರ್ಯಾಲಯ ರಾಯಚೂರು ಇವರ ವತಿಯಿಂದ ಹಮ್ಮಿಕೊಳ್ಳಲಾಗಿದ್ದ ವಿಶ್ವ ಮಲೇರಿಯಾ ದಿನದ ಜಾಗೃತಿ ಕಾರ್ಯಕ್ರಮದ ಸಭೆಯ ಅಧ್ಯಕ್ಷತೆ ವಹಿಸಿ ಅವರು ಮಾತನಾಡಿದರು.

ನಗರದ ಎಲ್ಲ ಪ್ರದೇಶಗಳಲ್ಲಿ

4 ನೇ ಪುಟಕ್ಕೆ...

ಕೊಡಗು: 2,000 ಅಕ್ರಮ ಹೋಮ್ ಸ್ಟೇಗಳ ವಿರುದ್ಧ ಕ್ರಮ ಕೈಗೊಳ್ಳುವಂತೆ ರೆಸಾರ್ಟ್ ಮಾಲೀಕರ ಒತ್ತಾಯ

ಮಡಿಕೇರಿ,ಏ.27-

ಕೊಡಗಿನ ಹೋಂಸ್ಟೇ ಮಾಲೀಕರು ಜಿಲ್ಲೆಯಲ್ಲಿ ಕಾರ್ಯನಿರ್ವಹಿಸುತ್ತಿರುವ 2,000 ಕ್ಕೂ ಹೆಚ್ಚು ಅಕ್ರಮ ಹೋಂಸ್ಟೇಗಳ ವಿರುದ್ಧ ತಕ್ಷಣ ಕ್ರಮ ಕೈಗೊಳ್ಳಬೇಕೆಂದು ರಾಜ್ಯ ಸರ್ಕಾರವನ್ನು ಒತ್ತಾಯಿಸಿದ್ದಾರೆ.

ಕುಟ್ಟದಲ್ಲಿರುವ ನೋಂದಾಯಿತ ಹೋಂಸ್ಟೇಯಲ್ಲಿ ಅಮೆರಿಕದ ಪ್ರವಾಸಿ ಮೇಲೆ ನಡೆದ ಲೈಂಗಿಕ ದೌರ್ಜನ್ಯದ ಹಿನ್ನೆಲೆಯಲ್ಲಿ ಈ ಬೇಡಿಕೆ ಬಂದಿದ್ದು, ಪ್ರವಾಸಿಗರ ಸುರಕ್ಷತೆಯ ಬಗ್ಗೆ ಗಂಭೀರ ಕಳವಳವನ್ನು ಹುಟ್ಟುಹಾಕಿದೆ.

ಭಾನುವಾರ ಮಾಧ್ಯಮ ಪ್ರತಿನಿಧಿಗಳೊಂದಿಗೆ ಮಾತನಾಡಿದ ಕೊಡಗು ಜಿಲ್ಲಾ ಹೋಂಸ್ಟೇ ಅಸೋಸಿಯೇಷನ್‌ನ ಸದಸ್ಯರು ಪ್ರವಾಸೋದ್ಯಮ ಇಲಾಖೆಯಲ್ಲಿ ಖಾಲಿ ಇರುವ ಉಪ ನಿರ್ದೇಶಕರ ಹುದ್ದೆಯನ್ನು ಭರ್ತಿ ಮಾಡುವಂತೆ ರಾಜ್ಯ ಸರ್ಕಾರವನ್ನು



ಒತ್ತಾಯಿಸಿದರು.

ಸರಿಯಾದ ಆಡಳಿತದ ಕೊರತೆಯಿಂದಾಗಿ ಅನೇಕ ಪ್ರವಾಸೋದ್ಯಮ ನಿರ್ವಾಹಕರು ಮಾರ್ಗದರ್ಶನವಿಲ್ಲದೆ ಉಳಿದಿದ್ದಾರೆ. ಈ ವಲಯದಲ್ಲಿ ಕಾನೂನುಬಾಹಿರ ಚಟುವಟಿಕೆಗಳಿಗೆ ಕಾರಣವಾಗಿದೆ ಎಂದು ಸಂಘದ ಅಧ್ಯಕ್ಷೆ ಮೊಂತಿ ಗಣೇಶ್ ಹೇಳಿದರು.

ಜಿಲ್ಲೆಯು ಸಾವಿರಾರು ಹೋಂಸ್ಟೇಗಳು ಮತ್ತು ಹಲವಾರು ರೆಸಾರ್ಟ್‌ಗಳನ್ನು ಹೊಂದಿರುವ ಪ್ರಮುಖ ಪ್ರವಾಸಿ ಕೇಂದ್ರವಾಗಿದೆ. ಆದರೂ, ಉಪ ನಿರ್ದೇಶಕರ ಹುದ್ದೆ ಹಲವಾರು ತಿಂಗಳುಗಳಿಂದ ಖಾಲಿಯಾಗಿದೆ, ಇದು ಸರಿಯಾದ ನಿಯಂತ್ರಣಕ್ಕೆ ಅಡ್ಡಿಯಾಗಿದೆ ಎಂದು ಗಣೇಶ್ ಹೇಳಿದರು. ಸಂದರ್ಶಕರ ಸುರಕ್ಷತೆಯನ್ನು ಖಚಿತಪಡಿಸಿಕೊಳ್ಳಲು ಪೊಲೀಸ್ ಕ್ರಮ ಸೇರಿದಂತೆ ಅಕ್ರಮ ಹೋಂಸ್ಟೇಗಳ ವಿರುದ್ಧ ಕಠಿಣ ಜಾರಿ ಅತ್ಯಗತ್ಯ ಎಂದು ಅವರು ಒತ್ತಿ ಹೇಳಿದರು.

2,470 ಹೋಂಸ್ಟೇಗಳು ಅಧಿಕೃತವಾಗಿ ನೋಂದಾಯಿಸಲ್ಪಟ್ಟಿದ್ದರೂ, 2,000 ಕ್ಕೂ ಹೆಚ್ಚು ಹೋಂಸ್ಟೇಗಳು ಅನುಮತಿಯಿಲ್ಲದೆ ಕಾರ್ಯನಿರ್ವಹಿಸುತ್ತಿವೆ ಎಂದು ಸಂಘದ ಸದಸ್ಯ ಕೆ.ಎಂ. ಕರುಂಬಯ್ಯ ಬಹಿರಂಗಪಡಿಸಿದರು. ಬಸ್ ನಿಲ್ದಾಣಗಳು ಮತ್ತು ಇತರ ಸಾರ್ವಜನಿಕ ಸ್ಥಳಗಳ ಬಳಿ ಇರುವ ದಲ್ಲಾಳಿಗಳು ಪ್ರವಾಸಿಗರನ್ನು ದಾರಿ ತಪ್ಪಿಸುತ್ತಿದ್ದಾರೆ. ಕುಟ್ಟಾದ ದೇವಿ ವಿಲ್ಲಾ ಹೋಂಸ್ಟೇಯಲ್ಲಿ ಇತ್ತೀಚೆಗೆ ನಡೆದ ದಾಳಿಯನ್ನು ಖಂಡಿಸಿದ ಗಣೇಶ್, ಈ ಸೌಲಭ್ಯವನ್ನು ಪ್ರವಾಸೋದ್ಯಮ ಇಲಾಖೆಯಲ್ಲಿ ನೋಂದಾಯಿಸಲಾಗಿದೆ ಎಂದು ಹೇಳಿದರು. ಪ್ರಕರಣವು ಇನ್ನೂ ತನಿಖೆಯಲ್ಲಿರುವ ಕಾರಣ, ಉಪ ಆಯುಕ್ತರು ಪರವಾನಗಿಯನ್ನು ರದ್ದುಗೊಳಿಸುವ ಬದಲು ಅದನ್ನು

4 ನೇ ಪುಟಕ್ಕೆ...



ಸೋಮವಾರಪೇಟೆದ ಶಿಲಾಮಂಟಪ ಕಾಮಗಾರಿಗೆ ಚಾಲನೆ

ರಾಯಚೂರು,ಏ.27-

ಸೋಮವಾರಪೇಟೆ ಹಿರೇಮಠದ ಶಿಲಾ ಮಂಟಪ ಕಾಮಗಾರಿಪ್ರಾರಂಭನಗರದ ಸೋಮವಾರಪೇಟೆ ಹಿರೇಮಠದಲ್ಲಿ ಶ್ರೀಮದ್ ಜಗದ್ಗುರು ಪಂಚಾಚಾರ್ಯರ, ಶ್ರೀಮಠದ ಹಿರಿಯ ಶ್ರೀಗಳಾದ ಲಿಂ. ರಾಚೋಟಿ ಶಿವಾಚಾರ್ಯ ಮಹಾಸ್ವಾಮಿಗಳವರ ಹಾಗೂ ವೀರತಪಸ್ವಿ ವೀರಭದ್ರ ಶಿವಾಚಾರ್ಯ ಮಹಾಸ್ವಾಮಿಗಳವರ ಕೃಪಾಶೀರ್ವಾದದಿಂದ ಮತ್ತು ಶ್ರೀಮಠದ ಹಿರಿಯ ಶ್ರೀಗಳ ಸಂಕಲ್ಪ ಮತ್ತು ಕನಸು ಹಾಗೂ ಶ್ರೀಮಠದ ಸರ್ವ ಸದ್ಭಕ್ತರ ತನು, ಮನ ಹಾಗೂ ಧನಾದಿ ತ್ರೀಕರಣ ಸೇವೆಯೊಂದಿಗೆ ಶ್ರೀಮಠದ ಇತಿಹಾಸದಲ್ಲಿ ಸಹಸ್ರ ಸಹಸ್ರ ಕಾಲದವರೆಗೆ ಪ್ರಶಿದ್ಧ ಹೊಂದುವಂತೆ ನಿರ್ಮಿಸಲಾಗುತ್ತಿರುವ 25 ಶಿಲಾಗಂಬಗಳನ್ನೊಳಗೊಂಡ ಶಿಲಾ ಮಂಟಪದ ಕಾಮಗಾರಿಯನ್ನು ಶ್ರೀಮಠದ ಪೀಠಾಧಿಪತಿಗಳಾದ ಪೂಜ್ಯಶ್ರೀ ಅಭಿನವ ರಾಚೋಟಿ ವೀರ ಶಿವಾಚಾರ್ಯ ಮಹಾಸ್ವಾಮಿಗಳು ಇಟಾಚಿ ವಾಹನಕ್ಕೆ ಸಂಕ್ಷಿಪ್ತ ಪೂಜೆ ಸಲ್ಲಿಸಿ ಅಕ್ಷತಿ ಪ್ರೋಕ್ಷಣ ಮಾಡುವ ಮೂಲಕ ಚಾಲನೆ ನೀಡಿದರು.

4 ನೇ ಪುಟಕ್ಕೆ...

ಶಹಬಾಝ್ ಪಠಾಣ್ ಹತ್ಯೆ ಪ್ರಕರಣ: ನಾಲ್ವರಿಗೆ ಜೀವಾವಧಿ ಶಿಕ್ಷೆ




ಬೆಳಗಾವಿ,ಏ.27-

ನಗರದ ಶಿವಬಸವ ನಗರದಲ್ಲಿ ಐದು ವರ್ಷಗಳ ಹಿಂದೆ ನಡೆದ ಶಹಬಾಝ್ ಪಠಾಣ್ ಹತ್ಯೆ ಪ್ರಕರಣಕ್ಕೆ ಸಂಬಂಧಿಸಿದಂತೆ ನಾಲ್ವರು ಆರೋಪಿಗಳಿಗೆ ಬೆಳಗಾವಿಯ ಎರಡನೇ ಜಿಲ್ಲಾ ಮತ್ತು ಸತ್ರ ನ್ಯಾಯಾಲಯ ಜೀವಾವಧಿ ಶಿಕ್ಷೆ ವಿಧಿಸಿದೆ.

ನ್ಯಾಯಾಧೀಶ ಗಂಗಾಧರ ಕೆ. ತೀರ್ಪು ಪ್ರಕಟಿಸಿದ್ದಾರೆ. ಪ್ರಕರಣದಲ್ಲಿ ದೂರುದಾರರ ಪರವಾಗಿ

4 ನೇ ಪುಟಕ್ಕೆ...



ರಾಯಚೂರು ನಗರದ ಸಿಯಾತಲಾಬ್ ನಲ್ಲಿರುವ ಚಿತ್ರಗಾರ ಸಮಾಜದ ಶ್ರೀ ನಿಮಿಷಾಂಭ ದೇವಿ ದೇವಸ್ಥಾನದಲ್ಲಿ ರವಿವಾರ ನಿಮಿಷಾಂಬ ಜಯಂತಿಯ ಶ್ರದ್ಧಾ ಭಕ್ತಿ ಯೊಂದಿಗೆ ಸಂಭ್ರಮದಿಂದ ಆಚರಿಸಲಾಯಿತು ದೇವಿಯ ವಿಶೇಷ ಪೂಜಾ ಕಾರ್ಯಕ್ರಮ ಹಮ್ಮಿಕೊಳ್ಳಲಾಗಿತ್ತು ವಿಶೇಷ ಬೆಳ್ಳಿಯ ಕವಚದ ಅಲಂಕಾರ ಮಾಡಲಾಗಿತ್ತು ಸಂಜೆ ದೇವಿಯ ಪಲ್ಲಕ್ಕಿ ಹಾಗೂ ನಗರ ಪ್ರದಕ್ಷಿಣೆ ಕೈಗೊಳ್ಳಲಾಯಿತು ಈ ಕಾರ್ಯಕ್ರಮದಲ್ಲಿ ಸಮಾಜದ ಗಣ್ಯರು ,ಮಹಿಳೆಯರು ಮಕ್ಕಳು ಹೆಚ್ಚಿನ ಸಂಖ್ಯೆಯಲ್ಲಿ ಭಾಗವಹಿಸಿದ್ದರು.

ರಾಹುಲ್‌ಗಾಂಧಿಗೆ ಪಪ್ಪು ಎನ್ನುವುದರಲ್ಲಿ ತಪ್ಪಿಲ್ಲ ; ಟಿಎಂಸಿ ನಾಯಕ ಘೋಷ್



ಕೋಲ್ಕತ್ತಾ, ಏ.27 -

ಕಾಂಗ್ರೆಸ್ ಪಕ್ಷದ ನಾಯಕ ರಾಹುಲ್ ಗಾಂಧಿ ಪರೋಕ್ಷವಾಗಿ ಬಿಜೆಪಿಯ ಗೆಲುವಿಗೆ ಕೆಲಸ ಮಾಡುತ್ತಿದ್ದಾರೆ ಎಂದು ಟಿಎಂಸಿ ಪಕ್ಷದ ಹಿರಿಯ ನಾಯಕ ಕುನಾಲ್ ಘೋಷ್ ಆರೋಪಿಸಿದ್ದಾರೆ. ಕೋಲ್ಕತ್ತಾದಲ್ಲಿ ಚುನಾವಣಾ ಪ್ರಚಾರದ ಸಂದರ್ಭದಲ್ಲಿ ಮಾಧ್ಯಮಗಳೊಂದಿಗೆ ಮಾತನಾಡಿದ ಕುನಾಲ್ ಘೋಷ್ ಅವರು, ರಾಹುಲ್ ಗಾಂಧಿ ಅವರ ನಾಯಕತ್ವದ ಸಾಮರ್ಥ್ಯವನ್ನೇ ಪ್ರಶ್ನಿಸಿದ್ದಾರೆ.

ಮಹಾರಾಷ್ಟ್ರ, ದೆಹಲಿ, ಹರಿಯಾಣ ಮತ್ತು ಬಿಹಾರದಂತಹ ಪ್ರಮುಖ ರಾಜ್ಯಗಳಲ್ಲಿ ಬಿಜೆಪಿಯ ವಿಜಯಯಾತ್ರೆಯನ್ನು ತಡೆಯುವ ಜವಾಬ್ದಾರಿ ರಾಹುಲ್ ಗಾಂಧಿ ಮೇಲಿತ್ತು. ಆದರೆ ಅವರು ಅಲ್ಲಿ ಸಂಪೂರ್ಣವಾಗಿ ವಿಫಲರಾಗಿದ್ದಾರೆ. ತಮ್ಮ ಜವಾಬ್ದಾರಿಯಿಂದ ನುಣುಚಿಕೊಂಡು ಈಗ ಪಶ್ಚಿಮ ಬಂಗಾಳಕ್ಕೆ ಬಂದು ಬಿಜೆಪಿಗೆ ಅನುಕೂಲ ಮಾಡಿಕೊಡುತ್ತಿದ್ದಾರೆ ಎಂದು ಘೋಷ್ ದೂರಿದರು.

ಟಿಎಂಸಿ ಬಲವಾಗಿರುವ ಕ್ಷೇತ್ರಗಳಿಗೆ ರಾಹುಲ್ ಗಾಂಧಿ ಭೇಟಿ ನೀಡುತ್ತಿರುವುದರ ಹಿಂದೆ ಸಂಚಿದೆ ಎಂದು ಘೋಷ್ ಆರೋಪಿಸಿದರು. ರಾಹುಲ್ ಗಾಂಧಿ ಪಶ್ಚಿಮ ಬಂಗಾಳಕ್ಕೆ ಬರುವುದು ಕೇವಲ ವಿರೋಧ ಪಕ್ಷಗಳ ಮತಗಳನ್ನು ವಿಭಜಿಸಲು ಮಾತ್ರ. ಆ ಮೂಲಕ ಅವರು ನೇರವಾಗಿ ಬಿಜೆಪಿಗೆ ಸಹಾಯ ಮಾಡುತ್ತಿದ್ದಾರೆ. ಟಿಎಂಸಿ ವಿರೋಧಿ ಮತಗಳನ್ನು ಸೆಳೆಯುವ ಮೂಲಕ ಬಿಜೆಪಿಯ ಗೆಲುವಿನ ಹಾದಿಯನ್ನು

4 ನೇ ಪುಟಕ್ಕೆ...



ಒಂಟಿ ಮಹಿಳೆಯರ ರಕ್ಷಣೆಗೆ ಸಮಗ್ರ ವಿಶೇಷ ಯೋಜನೆ ಅಗತ್ಯ: ಬಿ.ಮಾಳಮ್ಮ

ಕಲಬುರಗಿ,ಏ.27-

ಒಂಟಿ ಮಹಿಳೆಯರು ಸಮಾಜದಲ್ಲಿ ಎದುರಿಸುತ್ತಿರುವ ಅನ್ಯಾಯ, ಅವಮಾನ ಹಾಗೂ ಆರ್ಥಿಕ ಸಂಕಷ್ಟಗಳನ್ನು ಗಮನದಲ್ಲಿಟ್ಟುಕೊಂಡು ಸರ್ಕಾರವು ತಕ್ಷಣ ಸಮಗ್ರ ಪುನರ್ವಸತಿ ಹಾಗೂ ರಕ್ಷಣಾ ಯೋಜನೆ ಜಾರಿಗೆ ತರಬೇಕು ಎಂದು ಕರ್ನಾಟಕ ರಾಜ್ಯ ಒಂಟಿ ಮಹಿಳೆಯರ ಸಂರಕ್ಷಣ ಸಂಘದ ರಾಜ್ಯ ಪ್ರಧಾನ ಕಾರ್ಯದರ್ಶಿ ಬಿ. ಮಾಳಮ್ಮ ಆಗ್ರಹಿಸಿದರು.

ನಗರದ ಸ್ಟೇಷನ್ ಬಜಾರ್ ಪ್ರದೇಶದ ಹಮಾಲವಾಡಿಯ ಮಹ್ಮದ ಹಸಖಾನ್ ಭವನದಲ್ಲಿ ಆಯೋಜಿಸಲಾದ ಒಂಟಿ ಮಹಿಳೆಯರ ಪ್ರಥಮ ಸಮಾವೇಶದಲ್ಲಿ ಮಾತನಾಡಿದ ಅವರು, ಒಂಟಿ ಮಹಿಳೆಯರು ಲಿಂಗ ತಾರತಮ್ಯಕ್ಕಷ್ಟೇ ಸೀಮಿತವಾಗದೆ ಜಾತಿ, ಧರ್ಮ ಹಾಗೂ ಸಂಪ್ರದಾಯದ ಹೆಸರಿನಲ್ಲಿ ಶೋಷಣೆಗೆ ಒಳಗಾಗುತ್ತಿದ್ದಾರೆ ಎಂದು ಹೇಳಿದರು.

ಅವಿವಾಹಿತರು, ಗಂಡ ಬಿಟ್ಟವರು, ವಿಧವೆಯರು ಹಾಗೂ ದೇವದಾಸಿ ಪದ್ಧತಿಗೆ ಬಲಿಯಾದ ಮಹಿಳೆಯರು ಸಮಾಜದಲ್ಲಿ ನಿರಂತರ ಅವಮಾನ, ನಿಂದನೆ ಮತ್ತು ದೌರ್ಜನ್ಯ ಅನುಭವಿಸುತ್ತಿದ್ದಾರೆ ಎಂದು ವಿಷಾದ ವ್ಯಕ್ತಪಡಿಸಿದರು.

ಪುರುಷರಿಗೆ ಮರುಮದುವೆಗೆ ಬೆಂಬಲ ಸಿಗುತ್ತಿದ್ದರೂ, ಮಹಿಳೆಯರಿಗೆ ಅದೇ ಹಕ್ಕು ನಿರಾಕರಿಸಲಾಗುತ್ತಿದೆ. ಗಂಡನನ್ನು ಕಳೆದುಕೊಂಡ ಮಹಿಳೆಯರನ್ನು ಹೀನಾಯವಾಗಿ ಕಾಣುವುದು, ಶುಭಕಾರ್ಯಗಳಿಂದ ದೂರ ಇಡುವುದು ಹಾಗೂ ಸಂಪ್ರದಾಯದ ಹೆಸರಿನಲ್ಲಿ ಕಟ್ಟಳೆಗಳನ್ನು ಹೇರುವುದು ಇಂದಿಗೂ ಮುಂದುವರಿದಿದೆ ಎಂದು ಟೀಕಿಸಿದರು.

ಆರ್ಥಿಕ ಅಸಮಾನತೆ, ಆಸ್ತಿ ಹಕ್ಕಿನ ನಿರಾಕರಣೆ, ಉದ್ಯೋಗಾವಕಾಶಗಳ ಕೊರತೆ ಹಾಗೂ ಲೈಂಗಿಕ ದೌರ್ಜನ್ಯಗಳು ಒಂಟಿ ಮಹಿಳೆಯರ ಜೀವನವನ್ನು ಸಂಕಷ್ಟಮಯವಾಗಿಸುತ್ತಿವೆ. ದೇವದಾಸಿ ಪುನರ್ವಸತಿ ಮಾದರಿಯಲ್ಲಿ ದೇವದಾಸಿಯೇತರ ಒಂಟಿ ಮಹಿಳೆಯರನ್ನೂ ಗುರುತಿಸಿ ಅವರಿಗೆ ಸಮರ್ಪಕ ಸೌಲಭ್ಯಗಳನ್ನು ಒದಗಿಸಬೇಕು ಎಂದು ಒತ್ತಾಯಿಸಿದರು.

ಸಮಾವೇಶದಲ್ಲಿ ಹಲವು ಬೇಡಿಕೆಗಳನ್ನು ಮಂಡಿಸಲಾಯಿತು. ಮಾಸಿಕ ಕನಿಷ್ಠ 6,000 ರೂ. ಸಹಾಯಧನ, ಉಚಿತ ವಸತಿ, ಬಿಪಿಎಲ್ ಸೌಲಭ್ಯ, ಸ್ವಯಂ ಉದ್ಯೋಗ ತರಬೇತಿ, ಬಡ್ಡಿರಹಿತ ಸಾಲ, ಕೃಷಿ ಜಮೀನು ಹಂಚಿಕೆ, ಮಕ್ಕಳಿಗೆ ಶಿಕ್ಷಣ ಹಾಗೂ ಉದ್ಯೋಗ ಸಹಾಯ, ವೃದ್ಧಾಶ್ರಮಗಳ ಸ್ಥಾಪನೆ ಸೇರಿದಂತೆ ಸರ್ಕಾರದ ಬಜೆಟ್‌ನಲ್ಲಿ ಶೇ.33ರಷ್ಟು ಅನುದಾನವನ್ನು ಒಂಟಿ ಮಹಿಳೆಯರ ಕಲ್ಯಾಣಕ್ಕಾಗಿ ಮೀಸಲಿಡಬೇಕು ಎಂದು ಆಗ್ರಹಿಸಲಾಯಿತು.

ಈ ಸಂದರ್ಭದಲ್ಲಿ ಸಂಚಾಲಕಿ ಚಂದಮ್ಮ ಗೋಳಾ, ಮೀನಾಕ್ಷಿ ದನ್ನಿ, ಶೋಭಾ ಭೋಪಾಲ್ ತೆಗನೂರ, ಭೀಮ್ ಬಾಯಿ ಬೈರಾಮಡಗಿ, ಮಪುರಿ ಗೊಬ್ಬುರ್ ಪುತಳಿ ಬಾಯಿ, ರಾಜಶ್ರೀ, ಅಶ್ವಿನಿ ಲತಾ, ಗೌರಮ್ಮ ಧನ್ನಿ, ಸುಧಾಮ ಧನ್ನಿ ಸೇರಿದಂತೆ ಹಲವರು ಉಪಸ್ಥಿತರಿದ್ದರು.

ಸಂಡೂರು ಸಂಕಲ್ಪ ಸಮರ್ಪಣಾ ಸಮಾವೇಶ-2

ಮುಂದಿನ ದಿನಗಳಲ್ಲಿ ಹೊಸ ಕನಿಷ್ಠ ವೇತನ ಜಾರಿಗೆ ಪ್ರಯತ್ನ-ಸಚಿವ ಸಂತೋಷ್ ಎಸ್.ಲಾಡ್

ಬಳ್ಳಾರಿ,ಏ.27-

ಸುಪ್ರೀಂ ಕೋರ್ಟ್ ಮಾರ್ಗಸೂಚಿಯಂತೆ, ಕಾರ್ಮಿಕರ ಆಹಾರ, ಬಟ್ಟೆ ಮತ್ತು ವಸತಿ ಅಗತ್ಯತೆಗಳನ್ನು ಪರಿಗಣಿಸಿ, ಚರ್ಚಿಸಿ ಮುಂದಿನ ದಿನಗಳಲ್ಲಿ ರಾಜ್ಯದಲ್ಲಿ ಹೊಸ ಕನಿಷ್ಠ ವೇತನ ಜಾರಿಗೆ ತರಲು ಪ್ರಯತ್ನಿಸಲಾಗುವುದು ಎಂದು ಕಾರ್ಮಿಕ ಸಚಿವ ಸಂತೋಷ್ ಎಸ್.ಲಾಡ್ ಅವರು ಹೇಳಿದರು.

ಸಂಡೂರು ತಾಲ್ಲೂಕು ಆಡಳಿತ, ತಾಲ್ಲೂಕು ಪಂಚಾಯಿತಿ, ಕಾರ್ಮಿಕ ಇಲಾಖೆ ಹಾಗೂ ವಿವಿಧ ಇಲಾಖೆಗಳ ಸಂಯುಕ್ತಾಶ್ರಯದಲ್ಲಿ ಸಂಡೂರು ತಾಲ್ಲೂಕಿನ ತಾಳೂರು ಗ್ರಾಮದ ಸರ್ಕಾರಿ ಪ್ರೌಢಶಾಲೆ ಆವರಣದಲ್ಲಿ ಭಾನುವಾರ ಏರ್ಪಡಿಸಿದ್ದ ಸಂಡೂರು ಸಂಕಲ್ಪ ಸಮರ್ಪಣಾ ಸಮಾವೇಶ-2 ಕಾರ್ಯಕ್ರಮ ಉದ್ಘಾಟಿಸಿ ಅವರು ಮಾತನಾಡಿದರು.

ಕರ್ನಾಟಕ ರಾಜ್ಯ ಸರ್ಕಾರವು ಅಸಂಘಟಿತ ವಲಯದ ಕಾರ್ಮಿಕರ ಏಳಿಗೆಗೆ ಬದ್ಧವಾಗಿದ್ದು, ಅಂಬೇಡ್ಕರ್ ಸಹಾಯಹಸ್ತ ಕಾರ್ಯಕ್ರಮದ ಮೂಲಕ ವಿವಿಧ ಅಸಂಘಟಿತ ವಲಯಗಳ ಜನರನ್ನು ಮುಖ್ಯವಾಹಿನಿಗೆ ತರಲಾಗುತ್ತಿದೆ ಎಂದರು.

ಅಮೆಜಾನ್, ಜೊಮ್ಯಾಟೊ, ಸ್ವಿಗ್ಗಿ ಮುಂತಾದ ಆನ್‌ಲೈನ್ ಕಂಪನಿಗಳಲ್ಲಿ ಕೆಲಸ ಮಾಡುವ ಡೆಲಿವರಿ ಬಾಯ್‌ಗಳ ಹಿತರಕ್ಷಣೆಗಾಗಿ ಭಾರತದಲ್ಲೇ ಮೊದಲ ಬಾರಿಗೆ ಕರ್ನಾಟಕದಲ್ಲಿ ಗಿಗ್ ವರ್ಕರ್ಸ್ ಬಿಲ್ ಕಾನೂನು ತರಲಾಗಿದೆ. ಚಾಲಕರು ಮತ್ತು ಕ್ಲೀನರ್‌ಗಳ ಹಿತದೃಷ್ಟಿಯಿಂದ ಸ್ಮಾರ್ಟ್ ಕಾರ್ಡ್ ವಿತರಿಸುವ ಟ್ರಾನ್ಸ್ಪೋರ್ಟ್ ಬಿಲ್ ಯೋಜನೆ ಜಾರಿಯಲ್ಲಿದೆ. ಅದರಂತೆ ಚಿತ್ರರಂಗದ ಕಾರ್ಮಿಕರು ಹಾಗೂ ಮನೆಗೆಲಸ ಮಾಡುವ ಮಹಿಳೆಯರ ಸಾಮಾಜಿಕ ಭದ್ರತೆಗಾಗಿ ಸಿನಿ ಬಿಲ್ ಮತ್ತು ಡೊಮೆಸ್ಟಿಕ್ ಬಿಲ್ ನಂತಹ ಹೊಸ ಕಾನೂನುಗಳನ್ನು ರೂಪಿಸಲಾಗುತ್ತಿದೆ ಎಂದು ತಿಳಿಸಿದರು.

ಇಡೀ ದೇಶದಲ್ಲೇ ಇಂತಹ ಬೃಹತ್ ಜನಪರ ಯೋಜನೆಗಳು ಎಲ್ಲಿಯೂ ಇಲ್ಲ. ಗ್ಯಾರಂಟಿ ಯೋಜನೆಗಳಿಗಾಗಿ ವರ್ಷಕ್ಕೆ ಸುಮಾರು 60,000 ಕೋಟಿ ರೂಪಾಯಿಗಳನ್ನು ವ್ಯಯಿಸಲಾಗುತ್ತಿದೆ. ಐದು ವರ್ಷಕ್ಕೆ ಇದು ಸುಮಾರು 3 ಲಕ್ಷ ಕೋಟಿ ರೂಪಾಯಿಗಳಾಗುತ್ತದೆ ಎಂದು ತಿಳಿಸಿದರು.

ನಾವು ನಮ್ಮ ಮಕ್ಕಳಿಗೆ ಸ್ಥಳೀಯ ಮಾತ್ರವಲ್ಲದೆ, ಬೇರೆ ಬೇರೆ ಕಡೆಗಳಲ್ಲಿ ಉದ್ಯೋಗ ಅವಕಾಶಗಳನ್ನು ಹುಡುಕಬೇಕು. ಸ್ಥಳೀಯರಿಗೆ ಉದ್ಯೋಗ ಕೊಡಿಸುವಲ್ಲಿ ನಾವು ನಮ್ಮ ಪ್ರಯತ್ನವನ್ನು ಮುಂದುವರಿಸುತ್ತೇವೆ. ಅಗತ್ಯವಾದಲ್ಲಿ ಈ ಭಾಗದಲ್ಲಿ ಬೃಹತ್ ಉದ್ಯೋಗ ಮೇಳ ಆಯೋಜಿಸಲಾಗುವುದು ಎಂದು ಸಚಿವರು ಹೇಳಿದರು.

ಸಂಡೂರು ವಿಧಾನಸಭೆ ಕ್ಷೇತ್ರದ ಶಾಸಕರಾದ ಈ.ಅನ್ನಪೂರ್ಣ ಅವರು ಅಧ್ಯಕ್ಷತೆ ವಹಿಸಿ ಮಾತನಾಡಿ, ಸಂಡೂರು ತಾಲ್ಲೂಕಿನಲ್ಲಿ ಶಿಕ್ಷಣಕ್ಕೆ ಹೆಚ್ಚಿನ ಒತ್ತು ನೀಡಿದ್ದು, ತಾಲೂಕಿನ ಒಟ್ಟು 175 ಶಾಲೆಗಳ ಪೈಕಿ 65 ಶಾಲೆಗಳನ್ನು ಮಾದರಿ ಶಾಲೆ'ಗಳನ್ನಾಗಿ ರೂಪಿಸಲಾಗಿದೆ. ಉಳಿದ 110 ಶಾಲೆಗಳ ಅಭಿವೃದ್ಧಿಗಾಗಿ ಈಗಾಗಲೇ ರೂಪರೇಷೆಗಳನ್ನು ಸಿದ್ಧಪಡಿಸಲಾಗಿದೆ. ಅಂಗನವಾಡಿಯಿದ ಸ್ನಾತಕೋತ್ತರ ಪದವಿಯವರೆಗೆ ಗುಣಮಟ್ಟದ ಶಿಕ್ಷಣ ನೀಡಲು ಅಗತ್ಯ ಸೌಲಭ್ಯಗಳನ್ನು ಒದಗಿಸಲಾಗಿದೆ ಎಂದು ಹೇಳಿದರು.

ತಾಳೂರು ಗ್ರಾಮದ ಶಾಲೆಯನ್ನು ಪಿಯು ಕಾಲೇಜಿಗೆ ಮೇಲ್ದರ್ಜೆಗೇರಿಸಲಾಗಿದ್ದು, ಈ ಶೈಕ್ಷಣಿಕ ವರ್ಷದಿಂದಲೇ ತರಗತಿಗಳು ಆರಂಭವಾಗಿವೆ. ಮುಂದಿನ ವರ್ಷದಿಂದ ನಂದಿಹಳ್ಳಿ ಸ್ನಾತಕೋತ್ತರ ಕೇಂದ್ರದಲ್ಲಿ ಮೈನಿಂಗ್ ಡಿಪ್ಲೊಮಾ' ಕಾಲೇಜು ಹಾಗೂ ಸಂಡೂರಿನಲ್ಲಿ ಹೊಸದಾಗಿ ನರ್ಸಿಂಗ್ ಕಾಲೇಜು ಪ್ರಾರಂಭವಾಗಲಿದೆ. ಶೈಕ್ಷಣಿಕ ಸುಧಾರಣೆಯ ಫಲವಾಗಿ ಸಂಡೂರು ತಾಲೂಕು ಎಸ್‌ಎಸ್‌ಎಲ್‌ಸಿ ಫಲಿತಾಂಶದಲ್ಲಿ ಬಳ್ಳಾರಿ ಜಿಲ್ಲೆಗೆ ಪ್ರಥಮ ಸ್ಥಾನ ಹಾಗೂ ಕಲ್ಯಾಣ ಕರ್ನಾಟಕ



ಭಾಗದಲ್ಲಿ ಮೂರನೇ ಸ್ಥಾನ ಪಡೆದಿದೆ ಎಂದು ಹರ್ಷ ವ್ಯಕ್ತಪಡಿಸಿದರು.

ತಾಲ್ಲೂಕಿನ ಸುಶೀಲಾನಗರ, ದರೋಜಿ, ಯಶವಂತನಗರ ಮತ್ತು ಕುರೆಕುಪ್ಪ ಗ್ರಾಮಗಳಲ್ಲಿ ನೂತನ ಪ್ರಾಥಮಿಕ ಆರೋಗ್ಯ ಕೇಂದ್ರಗಳನ್ನು ಸ್ಥಾಪಿಸಲಾಗಿದೆ. ತೋರಣಗಲ್ಲು ಮತ್ತು ಚೋರನೂರು ಕೇಂದ್ರಗಳನ್ನು ಸಮುದಾಯ ಆರೋಗ್ಯ ಕೇಂದ್ರಗಳನ್ನಾಗಿ ಮೇಲ್ದರ್ಜೆಗೇರಿಸಲಾಗಿದೆ. ತಾಲೂಕಿನ ಎಲ್ಲಾ ಹಳ್ಳಿಗಳಿಗೆ ಉತ್ತಮ ರಸ್ತೆ ಸಂಪರ್ಕ ಕಲ್ಪಿಸುವ ಮೂಲಕ ಸಾಮಾಜಿಕ ಬದಲಾವಣೆಗೆ ದಾರಿ ಮಾಡಿಕೊಡಲಾಗಿದೆ ಎಂದರು.

ಸಡೂರಿನ ಅಭಿವೃದ್ಧಿಯ ಹಿಂದೆ ಮುಖ್ಯಮಂತ್ರಿ ಸಿದ್ದರಾಮಯ್ಯ ಹಾಗೂ ಉಪಮುಖ್ಯಮಂತ್ರಿ ಡಿ.ಕೆ. ಶಿವಕುಮಾರ್ ಅವರ ಮಾರ್ಗದರ್ಶನ ಮತ್ತು ಕಾರ್ಮಿಕ ಸಚಿವ ಸಂತೋಷ್ ಲಾಡ್, ಸಂಸದ ತುಕಾರಾಮ್ ಸಹಕಾರವಿದೆ. ಸಂಡೂರನ್ನು ಹಿಂದುಳಿದ ತಾಲೂಕು' ಎಂಬ ಹಣೆಪಟ್ಟಿಯಿಂದ ಮುಕ್ತಗೊಳಿಸಿ ಅಭಿವೃದ್ಧಿ ಪಥದಲ್ಲಿ ಕೊಂಡೊಯ್ಯುವ ಸಂಕಲ್ಪವನ್ನು ಹೊಂದಲಾಗಿದೆ ಎಂದು ಒತ್ತಿ ಹೇಳಿದರು.

ಬಳ್ಳಾರಿ ಲೋಕಸಭೆ ಕ್ಷೇತ್ರದ ಸಂಸದ ಈ.ತುಕಾರಾಮ್ ಅವರು ಮಾತನಾಡಿ, ಎರಡನೇ ಸಂಡೂರು ಸಂಕಲ್ಪ ಸಮರ್ಪಣಾ ಸಮಾವೇಶ ಈ ಕಾರ್ಯಕ್ರಮವು ಪ್ರಜಾಪ್ರಭುತ್ವದ ಮೌಲ್ಯಗಳು, ಸಂವಿಧಾನದ ವ್ಯವಸ್ಥೆ ಮತ್ತು ಕಳೆದ ಎರಡು ದಶಕಗಳಲ್ಲಿ ಸಂಡೂರು ತಾಲ್ಲೂಕಿನಲ್ಲಿ ನಡೆದ ಅಭಿವೃದ್ಧಿ ಪಥವನ್ನು ಬಿಂಬಿಸುವ ಉದ್ದೇಶ ಹೊಂದಿದೆ ಎಂದು ಹೇಳಿದರು.

ಸಂಡೂರಿನ ಸರ್ವತೋಮುಖ ಅಭಿವೃದ್ಧಿಗೆ 2004ರಲ್ಲಿಯೇ ಅಡಿಪಾಯ ಹಾಕಲಾಯಿತು. 2004ರಲ್ಲಿ ಮೊದಲ ಬಾರಿಗೆ ಶಾಸಕರಾದ ನಂತರ, ಸಂಡೂರಿನ ಮೂಲಭೂತ ಸೌಕರ್ಯಗಳಾದ ಶಿಕ್ಷಣ, ಆರೋಗ್ಯ, ರಸ್ತೆ ಮತ್ತು ನೀರಾವರಿ ಕ್ಷೇತ್ರಗಳಿಗೆ ಹೊಸ ಚೈತನ್ಯ ನೀಡಿದರು. ಕ್ಷೇತ್ರದ ಅಭಿವೃದ್ಧಿಯನ್ನು ನಂದಾದೀಪ ಮತ್ತು ನಾಂದಿಯತೆ ಮುಂದುವರಿಸಿಕೊಡು ಬರಲಾಗುತ್ತಿದೆ. ಶಾಸಕರಾದ ಅನ್ನಪೂರ್ಣ ಅವರು ಸಹ ಇದೇ ಹಾದಿಯಲ್ಲಿ ಶ್ರಮಿಸುತ್ತಿದ್ದಾರೆ ಎಂದು ತಿಳಿಸಿದರು. ಆರೋಗ್ಯ ಸೇವೆಗಳು ತಲುಪಿಸಲು ಕ್ಲಿನಿಕ್ ಆನ್ ವೀಲ್ಸ್ ಮೂಲಕ ದೇಶದಲ್ಲೇ ಮೊದಲ ಬಾರಿಗೆ ಎನ್ನಬಹುದಾದ ರೀತಿಯಲ್ಲಿ, 13 ಸಂಚಾರಿ ವಾಹನಗಳ ಮೂಲಕ ಜನರ ಮನೆಬಾಗಿಲಿಗೆ ಚಿಕಿತ್ಸೆ ನೀಡಲಾಗುತ್ತಿದೆ. 2020 ರಿಂದ ಈವರೆಗೆ ಸುಮಾರು 8,30,000 ಜನರಿಗೆ ಉಚಿತ ವೈದ್ಯಕೀಯ ಚಿಕಿತ್ಸೆ ಒದಗಿಸಲಾಗಿದೆ. ವಾರ್ಷಿಕವಾಗಿ ಸರಾಸರಿ 1.60 ಲಕ್ಷ ಜನರು ಇದರ ಪ್ರಯೋಜನ ಪಡೆಯುತ್ತಿದ್ದಾರೆ ಎಂದರು.

ಈ ಭಾಗದ ಕೋಡಾಲು, ಭುಜಂಗನಗರ ಮತ್ತು ಸುತ್ತಮುತ್ತಲಿನ ಗ್ರಾಮಗಳಿಗೆ ಶಾಶ್ವತ ಕುಡಿಯುವ ನೀರು ಒದಗಿಸಲು 76 ಕೋಟಿ ರೂ. ವೆಚ್ಚದ ಯೋಜನೆ ಜಾರಿಯಲ್ಲಿದೆ. ತೋರಣಗಲ್ಲು ಮತ್ತು ದರೋಜಿ ಭಾಗದ ಗ್ರಾಮಗಳಿಗೆ ತುಂಗಭದ್ರಾ ನದಿಯಿಂದ ನೀರು ತರಲು 125 ಕೋಟಿ ರೂ. ವೆಚ್ಚದ ಕಾಮಗಾರಿ ನಡೆಯುತ್ತಿದೆ. ಬನ್ನಹಟ್ಟಿ ಮತ್ತು ವಿಠಲಾಪುರ ಭಾಗದಲ್ಲಿ ಚೆಕ್ ಡ್ಯಾಂ ನಿರ್ಮಾಣ ಮತ್ತು ಕೆರೆ ತುಂಬಿಸುವ ಯೋಜನೆಗಳಿಗಾಗಿ ಒಟ್ಟು 250 ಕೋಟಿ ರೂ. ವ್ಯಯಿಸಲಾಗಿದೆ. ನಾರಾಯಣಪುರ - ರಾಜಾಪುರ ರಸ್ತೆ ಸುಮಾರು 32 ಕೋಟಿ ರೂ. ವೆಚ್ಚದಲ್ಲಿ ಈ ಭಾಗದ ರಸ್ತೆಗಳನ್ನು ಮೇಲ್ದರ್ಜೆಗೇರಿಸಲಾಗಿದೆ. ವಡ್ಡು ಬೈಪಾಸ್ ರಸ್ತೆ ರೈಲ್ವೆ ಗೇಟ್ ಸಮಸ್ಯೆ ನಿವಾರಿಸಲು 65 ಕೋಟಿ ರೂ. ವೆಚ್ಚದಲ್ಲಿ ಬೈಪಾಸ್ ರಸ್ತೆ ನಿರ್ಮಿಸಲಾಗುತ್ತಿದ್ದು, ಮುಂದಿನ ಎರಡು ತಿಂಗಳಲ್ಲಿ ಟೆಂಡರ್ ಪ್ರಕ್ರಿಯೆ ಪೂರ್ಣಗೊಳ್ಳಲಿದೆ ಎಂದು ಸಮಗ್ರ ಅಭಿವೃದ್ಧಿ ಕಾಮಗಾರಿಗಳ ಚಿತ್ರಣ ಬಿಚ್ಚಿಟ್ಟರು.

ರಾಜ್ಯ ಸರ್ಕಾರದ ಐದು ಗ್ಯಾರಂಟಿ ಯೋಜನೆಗಳಡಿ ಸಂಡೂರು ತಾಲೂಕಿಗೆ ಮಾತ್ರ ಸುಮಾರು 660 ಕೋಟಿ ರೂ. ಅನುದಾನ ಬಿಡುಗಡೆಯಾಗಿದ್ದು, ಇದು ಜನರ ಆರ್ಥಿಕ ಸ್ಥಿತಿಯನ್ನು ಸುಧಾರಿಸುತ್ತಿದೆ. ನಂಜುಡಪ್ಪ ವರದಿ ಮತ್ತು ಗೋಪಾಲ್ ಗೌಡರ ಸಮಿತಿಯ ಆಶಯದಂತೆ ಶೈಕ್ಷಣಿಕ, ಆರ್ಥಿಕ ಮತ್ತು ಸಾಮಾಜಿಕವಾಗಿ ಸಂಡೂರನ್ನು ಮೊದಲ ಸ್ಥಾನಕ್ಕೆ ತರುವ ಸಂಕಲ್ಪ ಮಾಡಲಾಗಿದೆ ಎಂದರು.

ಕಲಬುರಗಿ ಪ್ರಾದೇಶಿಕ ಉಪ ಕಾರ್ಮಿಕ ಆಯುಕ್ತ ಡಾ.ವೆಂಕಟೇಶ್ ಅ.ಶಿಂಧಿಹಟ್ಟಿ ಅವರು ಪ್ರಾಸ್ತಾವಿಕವಾಗಿ ಮಾತನಾಡಿ, ರಾಜ್ಯದ ಅಭಿವೃದ್ಧಿಯಲ್ಲಿ ಪ್ರಮುಖ ಪಾತ್ರ ವಹಿಸುತ್ತಿರುವ ಅಸಂಘಟಿತ ವಲಯದ ಕಾರ್ಮಿಕರ ಕ್ಷೇಮಾಭಿವೃದ್ಧಿಗಾಗಿ ಸರ್ಕಾರವು ಹತ್ತು ಹಲವು ಯೋಜನೆಗಳನ್ನು ಜಾರಿಗೆ ತಂದಿದೆ. ಕಾರ್ಮಿಕ ಸಚಿವರ ನೇತೃತ್ವದಲ್ಲಿ ಅಸಂಘಟಿತ ಕಾರ್ಮಿಕ ಕಲ್ಯಾಣ ಮಂಡಳಿಯು ಕಾರ್ಮಿಕರ ಕನಸುಗಳಿಗೆ ಆಸರೆಯಾಗಿ ನಿಂತಿದೆ ಎಂದು ಹೇಳಿದರು.

ಕಾರ್ಯಕ್ರಮದಲ್ಲಿ ಕರ್ನಾಟಕ ರಾಜ್ಯ ಮೋಟಾರ್ ಸಾರಿಗೆ ಮತ್ತು ಸಂಬಧಿತ ಕಾರ್ಮಿಕರ ಸಾಮಾಜಿಕ ಭದ್ರತಾ ಮತ್ತು ಕ್ಷೇಮಾಭಿವೃದ್ಧಿ ಮಂಡಳಿಯಲ್ಲಿ ನೋಂದಾಯಿತ ಕಾರ್ಮಿಕರಿಗೆ ಸ್ಮಾರ್ಟ್ ಕಾರ್ಡ್ ವಿತರಿಸಲಾಯಿತು ಹಾಗೂ ಸಂಡೂರು ತಾಲೂಕಿನ ವಿವಿಧ ಅಭಿವೃದ್ಧಿ ಕಾಮಗಾರಿಗಳ ಉದ್ಘಾಟನೆಗೊಳಿಸಲಾಯಿತು. ಫಲಾನುಭವಿಗಳಿಗೆ ಸೌಲಭ್ಯ ಹಂಚಿಕೆ ಮತ್ತು ವಿವಿಧ ಸಾಧಕರಿಗೆ ಸನ್ಮಾನಿಸಲಾಯಿತು.

★ಆಕರ್ಷಿಸಿದ ಮಾಹಿತಿ ಮಳಿಗೆಗಳು:★

ಕಾರ್ಯಕ್ರಮದ ಆವರಣದಲ್ಲಿ ವಿವಿಧ ಇಲಾಖೆಗಳ ಯೋಜನೆಗಳು ಹಾಗೂ ಸರ್ಕಾರಿ ಕಾರ್ಯಕ್ರಮಗಳ ಕುರಿತ ಮಾಹಿತಿ ನೀಡುವ ಮಳಿಗೆಗಳನ್ನು ಹಾಕಲಾಗಿತ್ತು. ವೇದಿಕೆಯಲ್ಲಿ ಸಂಡೂರು ತಾಲ್ಲೂಕಿನ ಸಮಗ್ರ ಅಭಿವೃದ್ಧಿಗೆ ಬಹುಗ್ರಾಮ ಕುಡಿಯುವ ನೀರು, ಶಿಕ್ಷಣ, ವಸತಿ, ರಸ್ತೆ ಸೇರಿದಂತೆ ಹಲವು ಕಾಮಗಾರಿಗಳಿಗೆ ಬಿಡುಗಡೆಯಾದ ಅನುದಾನ, ಕೈಗೊಂಡ ಯೋಜನೆಗಳ ಅಭಿವೃದ್ಧಿ ಕಾಮಗಾರಿಗಳ ಸಮಗ್ರ ಚಿತ್ರಣ ಒಳಗೊಂಡ ವಿಡಿಯೋ ತುಣುಕು ಪ್ರದರ್ಶಿಸಲಾಯಿತು. ಬಳಿಕ ಸಂವಿಧಾನ ಪ್ರಸ್ತಾವನೆ ಬೋಧಿಸಲಾಯಿತು.

ಈ ಸಂದರ್ಭದಲ್ಲಿ ಕರ್ನಾಟಕ ರಾಜ್ಯ ಖನಿಜ ನಿಗಮ ನಿಯಮಿತದ ಉಪಾಧ್ಯಕ್ಷ ಹೆಚ್.ಲಕ್ಷ್ಮಣ್, ಮಾಜಿ ವಿಧಾನಪರಿಷತ್ ಸದಸ್ಯ ಕೆ.ಎಸ್.ಎಲ್. ಸ್ವಾಮಿ, ವಿಜಯನಗರ ಪ್ರದೇಶಾಭಿವೃದ್ಧಿ ಪ್ರಾಧಿಕಾರದ ಅಧ್ಯಕ್ಷ ಅಕ್ಷಯ ಲಾಡ್, ಬಳ್ಳಾರಿ ಜಿಲ್ಲಾ ಗ್ಯಾರಂಟಿ ಯೋಜನೆಗಳ ಅನುಷ್ಠಾನ ಪ್ರಾಧಿಕಾರದ ಅಧ್ಯಕ್ಷ ಕೆ.ಇ.ಚಿದಾನಂದಪ್ಪ, ಉಪಾಧ್ಯಕ್ಷೆ ಆಶಾಲತಾ ಸೋಮಪ್ಪ, ಸಂಡೂರು ತಾಲ್ಲೂಕು ಗ್ಯಾರಂಟಿ ಯೋಜನೆಗಳ ಅನುಷ್ಠಾನ ಪ್ರಾಧಿಕಾರದ ಅಧ್ಯಕ್ಷ ನೂರುದ್ದೀನ್.ಎಸ್., ಸಂಡೂರು ತಹಶೀಲ್ದಾರ ಅನಿಲ್ ಕುಮಾ.ರ್‌ಜಿ, ಸಂಡೂರು ತಾಪಂ ಇಓ ಮಡಗಿನ ಬಸಪ್ಪ, ಬಳ್ಳಾರಿ ಉಪವಿಭಾಗದ ಕಾರ್ಮಿಕ ಅಧಿಕಾರಿ ಎಸ್.ಜಿ.ಖೈನೂರು ಸೇರಿದಂತೆ ಜನಪ್ರತಿನಿಧಿಗಳು, ಸಾರ್ವಜನಿಕರು ಹಾಗೂ ಇತರರು ಉಪಸ್ಥಿತರಿದ್ದರು.

ಕಂಪ್ಲಿ ನ್ಯಾಯಾಲಯಕ್ಕೆ 25 ಕೋಟಿ ರೂ. ಅನುದಾನ ತರಲು ಪ್ರಯತ್ನ: ಶಾಸಕ ಜೆ.ಎನ್.ಗಣೇಶ್?

ಬಳ್ಳಾರಿ / ಕಂಪ್ಲಿ,ಏ.27-

ಸುಸಜ್ಜಿತ ನ್ಯಾಯಾಲಯ ನಿರ್ಮಾಣಕ್ಕಾಗಿ ಈಗಾಗಲೇ 3.13 ಎಕರೆ ಜಾಗ ಮೀಸಲಿಟ್ಟಿದ್ದು, ಸುಮಾರು 25 ಕೋಟಿ ರೂ. ಅನುದಾನ ತರಲು ಸರ್ಕಾರದ ಮಟ್ಟದಲ್ಲಿ ಪ್ರಾಮಾಣಿಕ ಪ್ರಯತ್ನ ಮಾಡಲಾಗುವುದು ಎಂದು ಶಾಸಕ ಜೆ.ಎನ್.ಗಣೇಶ್? ಹೇಳಿದರು. ಪಟ್ಟಣದ ಶಿಬಿರದಿನ್ನಿ (ಮಾರುತಿನಗರ)ಯಲ್ಲಿ ನೂತನ ಸಿವಿಲ್ ಮತ್ತು ಜೆಎಂಎಫ್?ಸಿ ನ್ಯಾಯಾಲಯ ಉದ್ಘಾಟನಾ ಸಮಾರಂಭದ ಅಧ್ಯಕ್ಷತೆ ವಹಿಸಿ ಮಾತನಾಡಿದ



ಅವರು, ಕಂಪ್ಲಿಯಲ್ಲಿ ನ್ಯಾಯಾಲಯ ಸ್ಥಾಪಿಸುವುದು ಬಹುಕಾಲದ ಕನಸಾಗಿದ್ದು, ಇದೀಗ ಅದು ನನಸಾಗಿದೆ ಎಂದು ಸಂತಸ ವ್ಯಕ್ತಪಡಿಸಿದರು.

ಈ ನ್ಯಾಯಾಲಯ ಆರಂಭಗೊಂಡಿರುವುದರಿಂದ ಕಕ್ಷಿದಾರರಿಗೆ ಹೆಚ್ಚಿನ ಅನುಕೂಲವಾಗಲಿದ್ದು, ಮುಂದಿನ ದಿನಗಳಲ್ಲಿ ಹಂತ ಹಂತವಾಗಿ ಅಗತ್ಯ ಮೂಲಭೂತ ಸೌಕರ್ಯಗಳನ್ನು ಒದಗಿಸಲಾಗುವುದು ಎಂದು ಹೇಳಿದರು.

ಉದ್ಯೋಗ, ರೈತರ ವಿಷಯದಲ್ಲಿ ಕೇಂದ್ರ ವಿಫಲ : ಸಚಿವ ಸಂತೋಷ್ ಲಾಡ್

ಸಂಡೂರು/ಬಳ್ಳಾರಿ,ಏ.27-

ಪ್ರಧಾನಿ ನರೇಂದ್ರ ಮೋದಿ ನೇತೃತ್ವದ ಕೇಂದ್ರ ಸರ್ಕಾರ ದೇಶವನ್ನು ಸಾಲದ ಸುಳಿಗೆ ತಳ್ಳಿದ್ದು, ಉದ್ಯೋಗ, ರೈತರ ಹಿತ ಹಾಗೂ ಮಹಿಳಾ ಮೀಸಲಾತಿ ಸೇರಿದಂತೆ ಹಲವು ವಿಷಯಗಳಲ್ಲಿ ಜನರಿಗೆ ಸುಳ್ಳು ಭರವಸೆ ನೀಡುತ್ತಿದೆ ಎಂದು ಕಾರ್ಮಿಕ ಸಚಿವ ಸಂತೋಷ್ ಎಸ್.ಲಾಡ್ ತೀವ್ರ ವಾಗ್ದಾಳಿ ನಡೆಸಿದರು.

ತಾಳೂರು ಗ್ರಾಮದಲ್ಲಿ ನಡೆದ ಸಂಡೂರು ಸಂಕಲ್ಪ ಸಮರ್ಪಣಾ ಸಮಾವೇಶ-2 ಬಳಿಕ ಮಾಧ್ಯಮಗಳೊಂದಿಗೆ ಮಾತನಾಡಿದ ಅವರು, ದೇಶದ ಮೇಲೆ ಅಪಾರ ಸಾಲ ಬಿದ್ದಿದ್ದು, ಯುವಕರಿಗೆ ಉದ್ಯೋಗ ನೀಡುವಲ್ಲಿ ಕೇಂದ್ರ ಸರ್ಕಾರ ವಿಫಲವಾಗಿದೆ ಎಂದು ಟೀಕಿಸಿದರು.



ದೊಡ್ಡ ಉದ್ಯಮಿಗಳ ಸಾಲ ಮನ್ನಾ ಮಾಡಲಾಗುತ್ತಿದ್ದು, ರೈತರು ಮಾತ್ರ ಸಂಕಷ್ಟದಲ್ಲಿ ಸಿಲುಕಿದ್ದಾರೆ. ದೇಶದ ಆಸ್ತಿ ಕೆಲವೇ ಮಂದಿಯ ಕೈಗಳಲ್ಲಿ ಕೇಂದ್ರೀಕೃತವಾಗುತ್ತಿದೆ ಎಂದು ಆರೋಪಿಸಿದರು.

ಕರ್ನಾಟಕ ಸರ್ಕಾರ ಜನಪರ ಯೋಜನೆಗಳ ಮೂಲಕ ಅಭಿವೃದ್ಧಿಯತ್ತ ಮುನ್ನಡೆಯುತ್ತಿದೆ. ಇತರೆ ರಾಜ್ಯಗಳು ಹಿಂದುಳಿದಿವೆ ಎಂದು ಅವರು ಹೇಳಿದರು.

ಬಿಜೆಪಿ ವಿರುದ್ಧ ವಾಗ್ದಾಳಿ : ಬಿಜೆಪಿ ಜಾತಿ ಆಧಾರಿತ ರಾಜಕೀಯ ನಡೆಸಿ ಸಮಾಜದಲ್ಲಿ ಭಿನ್ನತೆ ಉಂಟುಮಾಡುತ್ತಿದೆ. ದೇಶವನ್ನು ಒಡೆಯುವ ರಾಜಕೀಯ ನಡೆಯುತ್ತಿದೆ ಎಂದು ಆರೋಪಿಸಿದರು. ಮಹಿಳಾ ಮೀಸಲಾತಿ : ಮಹಿಳಾ ಮೀಸಲಾತಿ ಮಸೂದೆ ಕುರಿತು ಪ್ರಶ್ನಿಸಿದ ಅವರು, ಶೇ.33 ಮೀಸಲಾತಿಯನ್ನು ನೇರವಾಗಿ ಜಾರಿಗೆ ತರುವ ಬದಲು ಡಿಲಿಮಿಟೇಶನ್‌ಗೆ ಯಾಕೆ ಕೊಂಡಿ ಹಾಕಲಾಗಿದೆ ಎಂದು ಪ್ರಶ್ನಿಸಿದರು.

ಸಚಿವ ಸಂಪುಟ ವಿಸ್ತರಣೆ : ಸಚಿವ ಸಂಪುಟ ವಿಸ್ತರಣೆ ಹೈಕಮಾಂಡ್ ನಿರ್ಧಾರವಾಗಿದ್ದು, ಶೀಘ್ರದಲ್ಲೇ ನಡೆಯುವ ಸಾಧ್ಯತೆ ಇದೆ ಎಂದು ತಿಳಿಸಿದರು.

ಮುಸ್ಲಿಂ ಸಮುದಾಯ ಕಾಂಗ್ರೆಸ್ ಪಕ್ಷದ ಬೆನ್ನೆಲುಬು ಎಂದ ಅವರು, ಸಿಎಂ ಬದಲಾವಣೆ ಕುರಿತಂತೆ ಪ್ರತಿಕ್ರಿಯಿಸಲು ನಿರಾಕರಿಸಿದರು. ದಾವಣಗೆರೆ ಉಪಚುನಾವಣೆಯ ಅಸಮಾಧಾನಗಳು ಈಗ ನಿವಾರಣೆಯಾಗಿದ್ದು, ಕಾಂಗ್ರೆಸ್ ಗೆಲ್ಲುವ ವಿಶ್ವಾಸವಿದೆ ಎಂದರು.

ಮೇ ತಿಂಗಳಲ್ಲಿ ಪ್ಯಾನ್-ಐಐಟಿ ಬೆಂಗಳೂರು ಸಮಿಟ್ 2026 ಆಯೋಜನೆ

ಬಳ್ಳಾರಿ,ಏ.27-

ಪ್ಯಾನ್ ಐಐಟಿ ಅಲ್ಯೂಮ್ನಿ ಇಂಡಿಯಾ ಅಸೋಸಿಯೇಷನ್ ಮತ್ತು ಕರ್ನಾಟಕ ಸರ್ಕಾರದ ಸಹಯೋಗದಲ್ಲಿ, ಮೇ 16ರಂದು ಬೆಂಗಳೂರಿನಲ್ಲಿ ''ಪ್ಯಾನ್-ಐಐಟಿ ಬೆಂಗಳೂರು ಸಮಿಟ್ 2026'' ಆಯೋಜಿಸಲಾಗಿದೆ.

''ತಂತ್ರಜ್ಞಾನದಲ್ಲಿನ ಸ್ವಾಯತ್ತತೆ'' ಎಂಬ ವಿಷಯದಡಿ ಈ ಸಮಿಟ್ ನಡೆಯಲಿದೆ ಎಂದು ಕರ್ನಾಟಕ ಸರ್ಕಾರದ ಇ-ಆಡಳಿತ ಇಲಾಖೆಯ ಪ್ರಧಾನ ಕಾರ್ಯದರ್ಶಿ ಪಂಕಜ್ ಕುಮಾರ್ ಪಾಂಡೆ ಅವರು ಇಂದು ನಡೆದ ಪತ್ರಿಕಾಗೋಷ್ಠಿಯಲ್ಲಿ ತಿಳಿಸಿದ್ದಾರೆ.

ಕರ್ನಾಟಕ, ವಿಶೇಷವಾಗಿ ಬೆಂಗಳೂರು, ಇಂದು ಭಾರತದ ತಂತ್ರಜ್ಞಾನ ಮಹತ್ವಾಕಾಂಕ್ಷೆಯ ಕೇಂದ್ರಬಿಂದುವಾಗಿ ಹೊರಹೊಮ್ಮಿದೆ. ದೇಶದ ಪ್ರಮುಖ ಜಿಡಿಪಿ ಕೊಡುಗೆ ನೀಡುವ ನಗರಗಳಲ್ಲಿ ಬೆಂಗಳೂರು ಒಂದಾಗಿದ್ದು, ವೆಂಚರ್ ಕ್ಯಾಪಿಟಲ್ ಹೂಡಿಕೆಗಳ ಪ್ರಮುಖ ಕೇಂದ್ರವಾಗಿಯೂ ಗುರುತಿಸಿಕೊಂಡಿದೆ. ಸ್ಟಾರ್ಟ್‌ಅಪ್‌ಗಳ ನಿಧಿ ಸಂಗ್ರಹ ಹಾಗೂ ನವೀನ ಚಟುವಟಿಕೆಗಳಲ್ಲಿ ಮಹತ್ತರ ಪಾತ್ರವಹಿಸಿರುವುದು, ಸಾವಿರಾರು ಇಂಜಿನಿಯರಿಂಗ್ ಕಾಲೇಜುಗಳು ಹಾಗೂ ವಿಶ್ವದ ಅತಿ ದೊಡ್ಡ ಪ್ರತಿಭಾ ಸಂಪನ್ಮೂಲಗಳಲ್ಲಿ ಒಂದನ್ನು ಹೊಂದಿರುವುದುಈ ಎಲ್ಲ ಕಾರಣಗಳಿಂದ ಬೆಂಗಳೂರು ''ಪೂರ್ವದ ಸಿಲಿಕಾನ್ ವ್ಯಾಲಿ'' ಎಂಬ ಹೆಗ್ಗಳಿಕೆಗೆ ಪಾತ್ರವಾಗಿದೆ ಎಂದು ಅವರು ಹೇಳಿದರು.

ಸಾರ್ವಜನಿಕ ವಲಯ ಮತ್ತು ತಾಂತ್ರಿಕ ಕಂಪನಿಗಳ ಮೂಲಕ ಏರೋಸ್ಪೇಸ್, ರಕ್ಷಣಾ ಹಾಗೂ ಮೂಲ ಇಂಜಿನಿಯರಿಂಗ್ ಕ್ಷೇತ್ರಗಳಲ್ಲಿ ಕರ್ನಾಟಕವು ಬಲವಾದ ನೆಲೆ ನಿರ್ಮಿಸಿತು. ಬಳಿಕ ಇನ್ಫೋಸಿಸ್, ಟಿಸಿಎಸ್, ಎಚ್‌ಸಿಎಲ್ ಮತ್ತು ವಿಪ್ರೋ ಮುಂತಾದ ಐಟಿ ದಿಗ್ಗಜಗಳ ಉದಯದೊಂದಿಗೆ ಭಾರತವನ್ನು



ಜಾಗತಿಕ ತಂತ್ರಜ್ಞಾನ ನಕ್ಷೆಯಲ್ಲಿ ಸ್ಥಾಪಿಸುವಲ್ಲಿ ಮಹತ್ವದ ಪಾತ್ರವಹಿಸಿದೆ ಎಂದು ಅವರು ವಿವರಿಸಿದರು.

ಪ್ರಸ್ತುತ ದೇಶವು ಡೀಪ್ ಟೆಕ್, ಕೃತಕ ಬುದ್ಧಿಮತ್ತೆ ಮತ್ತು ವೈಜ್ಞಾನಿಕ ನವೀನತೆಯ ಹಂತಕ್ಕೆ ಸಾಗುತ್ತಿದೆ. ಈ ಹಂತದಲ್ಲಿ ಅಕಾಡೆಮಿಯಾ, ಕೈಗಾರಿಕೆ ಮತ್ತು ಸರ್ಕಾರಗಳ ನಡುವಿನ ಗಟ್ಟಿಯಾದ ಸಹಕಾರ ಅತ್ಯವಶ್ಯಕವಾಗಿದೆ. ತಂತ್ರಜ್ಞಾನ ಸ್ವಾಯತ್ತತೆಯನ್ನು ಸಾಧಿಸಲು ಇದು ಪ್ರಮುಖ ಹಂತವಾಗಿದ್ದು, ಈ ಹಿನ್ನೆಲೆಯಲ್ಲಿ ಪ್ಯಾನ್-ಐಐಟಿ ಬೆಂಗಳೂರು ಸಮಿಟ್ 2026 ರೂಪುಗೊಂಡಿದೆ ಎಂದು ತಿಳಿಸಿದರು.

ಪ್ಯಾನ್ ಐಐಟಿ ಅಧ್ಯಕ್ಷರಾದ ಪ್ರಭಾತ್ ಕುಮಾರ್ (ಐ.ಆರ್.ಎಸ್) ಅವರು ಮಾತನಾಡಿ, ಸಮಿಟ್‌ನಲ್ಲಿ ಉನ್ನತ ಮಟ್ಟದ ಪ್ಲೀನರಿ ಸೆಷನ್‌ಗಳು, ಆಳವಾದ ಪ್ಯಾನೆಲ್ ಚರ್ಚೆಗಳು ಹಾಗೂ ಎಐ, ರಕ್ಷಣಾ, ಸೆಮಿಕಂಡಕ್ಟರ್, ಇಂಧನ, ಮೊಬೈಲಿಟಿ ಮತ್ತು ಆರೋಗ್ಯ ಕ್ಷೇತ್ರಗಳಲ್ಲಿ ಸಮಾಂತರ ಚರ್ಚೆಗಳು ನಡೆಯಲಿವೆ ಎಂದು ಹೇಳಿದರು.

ಆಯ್ದ ಪಿಚ್-ಹ್ಯಾಕಥಾನ್ ಮೂಲಕ ಹೆಚ್ಚಿನ ಸಾಧ್ಯತೆ ಹೊಂದಿರುವ ಸ್ಟಾರ್ಟ್‌ಅಪ್‌ಗಳನ್ನು 200ಕ್ಕೂ ಹೆಚ್ಚು ವೆಂಚರ್ ಕ್ಯಾಪಿಟಲಿಸ್ಟ್‌ಗಳೊಂದಿಗೆ ಸಂಪರ್ಕಿಸಲಾಗುವುದು. ಜೊತೆಗೆ, 10,000 ಮಂದಿ ಭಾಗವಹಿಸುವ ಹ್ಯಾಕಥಾನ್‌ನಲ್ಲಿ ಕರ್ನಾಟಕ ಸರ್ಕಾರ ನೀಡಿದ ನೈಜ ಸಮಸ್ಯೆಗಳಿಗೆ ಪರಿಹಾರಗಳನ್ನು ಕಂಡುಹಿಡಿಯಲಾಗುವುದು ಎಂದರು.

ಭಾರತವು ಜಾಗತಿಕ ತಂತ್ರಜ್ಞಾನ ಸ್ಪರ್ಧೆಯಲ್ಲಿ ಮುನ್ನಡೆಯಲು ಆಳವಾದ ವಿಜ್ಞಾನ ಮತ್ತು ಮೂಲ ತಂತ್ರಜ್ಞಾನ ಕ್ಷೇತ್ರಗಳಲ್ಲಿ ಹೂಡಿಕೆ ಮಾಡುವ ಅಗತ್ಯವಿದೆ. ಪ್ಯಾನ್ ಐಐಟಿ ಸಮುದಾಯವು ಅಪಾರ ಬೌದ್ಧಿಕ ಸಂಪತ್ತು ಮತ್ತು ಜಾಗತಿಕ ಪ್ರಭಾವ ಹೊಂದಿರುವುದರಿಂದ, ಈ ಸಮಿಟ್ ರಾಷ್ಟ್ರೀಯ ಆದ್ಯತೆಗಳನ್ನು ಜಾಗತಿಕ ಆಶಯಗಳೊಂದಿಗೆ ಹೊಂದಿಸಲು ವೇದಿಕೆಯಾಗಲಿದೆ ಎಂದು ಅವರು ಹೇಳಿದರು.

23 ಐಐಟಿಗಳ 5 ಲಕ್ಷಕ್ಕೂ ಹೆಚ್ಚು ಅಲ್ಯೂಮ್ನಿಗಳ ಸಂಯುಕ್ತ ಚಿಂತನೆಯ ಫಲವಾಗಿರುವ ಈ ಸಮಿಟ್, ಜಾಗತಿಕ ಮಟ್ಟದಲ್ಲಿ ತಂತ್ರಜ್ಞಾನ, ವ್ಯವಹಾರ ಮತ್ತು ನೀತಿ ರೂಪಣೆಯಲ್ಲಿ ಸಕ್ರಿಯ ಸಮುದಾಯವನ್ನು ಒಂದೇ ವೇದಿಕೆಗೆ ತರಲಿದೆ. ನವೀನತೆ, ಉದ್ಯಮಶೀಲತೆ ಮತ್ತು ರಾಷ್ಟ್ರ ನಿರ್ಮಾಣದ ಮುಂದಿನ ಹಂತವನ್ನು ಉತ್ತೇಜಿಸುವ ದಿಕ್ಕಿನಲ್ಲಿ ಇದು ಮಹತ್ವದ ಹೆಜ್ಜೆಯಾಗಿದೆ.

ದಿನಪೂರ್ತಿ ನಡೆಯುವ ಈ ಸಮಿಟ್‌ನಲ್ಲಿ ಮುಖ್ಯ ಭಾಷಣಗಳು, ಪ್ಯಾನೆಲ್ ಚರ್ಚೆಗಳು, ಸಿಎಕ್ಸ್‌ಓ ರೌಂಡ್‌ಟೇಬಲ್, ಅಗ್ರಗಣ್ಯ ಸ್ಟಾರ್ಟ್‌ಅಪ್‌ಗಳ ಪ್ರದರ್ಶನ, ಹ್ಯಾಕಥಾನ್ ಹಾಗೂ ಇನೋವೇಶನ್ ಪ್ರದರ್ಶನಗಳು ನಡೆಯಲಿವೆ.

ಈ ಸಮಿಟ್‌ನಲ್ಲಿ ಆರ್ಟ್ ಆಫ್ ಲಿವಿಂಗ್ ಸಂಸ್ಥಾಪಕರಾದ ಗುರುದೇವ ರವಿ ಶಂಕರ್, ಕರ್ನಾಟಕ ಸರ್ಕಾರದ ಮುಖ್ಯ ಕಾರ್ಯದರ್ಶಿ ಡಾ. ಶಾಲಿನಿ ರಜನೀಶ್, ಭಾರತ ಸರ್ಕಾರದ ಮುಖ್ಯ ಆರ್ಥಿಕ ಸಲಹೆಗಾರ ಡಾ. ವಿ. ಅನಂತ ನಾಗೇಶ್ವರನ್, ಎಎನ್‌ಆರ್‌ಎಫ್ ಸಿಇಒ ಶಿವಕುಮಾರ್ ಕಲ್ಯಾಣರಾಮನ್, ಇಂಡಿಯಾ ಎಐ ಮಿಷನ್‌ನ ಮಾಜಿ ಸಿಇಒ ಅಭಿಷೇಕ್ ಸಿಂಗ್, ತೇಜಸ್ ವಿಮಾನದ ಮುಖ್ಯ ವಿನ್ಯಾಸಕರಾದ ಡಾ. ಕೋಟಾ ಹರಿನಾರಾಯಣ, ಕರ್ನಾಟಕ ಸರ್ಕಾರದ ಹೆಚ್ಚುವರಿ ಮುಖ್ಯ ಕಾರ್ಯದರ್ಶಿ (ಇಂಧನ) ಗೌರವ್ ಗುಪ್ತಾ, ಹೆಚ್ಚುವರಿ ಮುಖ್ಯ ಕಾರ್ಯದರ್ಶಿ (ನಗರಾಭಿವೃದ್ಧಿ ಮತ್ತು ಗೃಹ) ತುಷಾರ್ ಗಿರಿ ನಾಥ್, ಇ-ಆಡಳಿತ ಇಲಾಖೆಯ ಪ್ರಧಾನ ಕಾರ್ಯದರ್ಶಿ ಪಂಕಜ್ ಕುಮಾರ್ ಪಾಂಡೆ, ಟ್ಯಾಲಿ ಸೊಲ್ಯೂಶನ್ಸ್ ಸಂಸ್ಥಾಪಕರಾದ ಭಾರತ್ ಗೋಯಂಕಾ, ಮೈಕ್ರೋಸಾಫ್ಟ್ ರಿಸರ್ಚ್ ಇಂಡಿಯಾದ ವ್ಯವಸ್ಥಾಪಕ ನಿರ್ದೇಶಕರಾದ ವೆಂಕಟ್ ಪದ್ಮನಾಭನ್, ಮೀಶೋ ಸಹ ಸಂಸ್ಥಾಪಕ ಹಾಗೂ ಸಿಇಒ ವಿದಿತ್ ಆತ್ರೇಯ್, ಗ್ರೋವ್ ಸಹ ಸಂಸ್ಥಾಪಕ ಹಾಗೂ ಸಿಒಒ ಹರ್ಷ್ ಜೈನ್, ಅಥರ್ ಎನರ್ಜಿ ಸಹ ಸಂಸ್ಥಾಪಕ ಹಾಗೂ ಸಿಇಒ ತರುಣ್ ಮೆಹ್ತಾ, ಸ್ವಿಗ್ಗಿ ಸಹ ಸಂಸ್ಥಾಪಕ ಫಣಿ ಕಿಶನ್ ಅಡ್ಡೆಪಳ್ಳಿ, ಪಿಡಬ್ಲ್ಯೂಸಿ ಗ್ಲೋಬಲ್ ಕ್ಯಾಪೆಬಿಲಿಟಿ ಸೆಂಟರ್ ಮುಖ್ಯಸ್ಥ ರಾಜೇಶ್ ಓಜಾ ಹಾಗೂ ಎಸ್‌ಎಪಿ ಗ್ಲೋಬಲ್ ಡೆಲಿವರಿ ಮುಖ್ಯಸ್ಥ ರಜನೀಶ್ ಪ್ರಸಾದ್ ಸೇರಿದಂತೆ ಅನೇಕ ಗಣ್ಯರು ಭಾಗವಹಿಸಲಿದ್ದಾರೆ.



ಮಹಿಳಾ ಮೀಸಲಾತಿ ಮಸೂದೆ ಕುರಿತು ಬಿಜೆಪಿ ವಿರುದ್ಧ ಕಾಂಗ್ರೆಸ್ ಆಕ್ರೋಶ

ಹೊಸಪೇಟೆ/ವಿಜಯನಗರ,ಏ.27-

ಲೋಕಸಭೆಯಲ್ಲಿ ಮಹಿಳಾ ಮೀಸಲಾತಿ ಮಸೂದೆ ವಿಚಾರದಲ್ಲಿ ಕಾಂಗ್ರೆಸ್ ವಿರುದ್ಧ ಕೇಂದ್ರ ಸಚಿವರು ಹಾಗೂ ಬಿಜೆಪಿ ಮುಖಂಡರು ಮಾಡುತ್ತಿರುವ ಅಪಪ್ರಚಾರ ಮತ್ತು ಸುಳ್ಳು ಆರೋಪಗಳನ್ನು ಖಂಡಿಸಿ ವಿಜಯನಗರ ಜಿಲ್ಲಾ ಮಹಿಳಾ ಕಾಂಗ್ರೆಸ್ ಸಮಿತಿಯವರು ನಗರದ ಪತ್ರಿಕಾ ಭವನದಲ್ಲಿ ಪತ್ರಿಕಾ ಗೋಷ್ಠಿ ನಡೆಸಿದರು. ಕೆಪಿಸಿಸಿ ಅಧ್ಯಕ್ಷ ಡಿ.ಕೆ.ಶಿವಕುಮಾರ್ ಅವರ ಆದೇಶ ಹಾಗೂ ಜಿಲ್ಲಾ ಕಾಂಗ್ರೆಸ್ ಸಮಿತಿ ಅಧ್ಯಕ್ಷ ಸಿರಾಜ್ ಶೇಖ್ ಅವರ ನಿರ್ದೇಶನದ ಮೇರೆಗೆ ಈ ಗೋಷ್ಠಿ ಆಯೋಜಿಸಲಾಗಿತ್ತು.

ಈ ಸಂದರ್ಭದಲ್ಲಿ ಮಾತನಾಡಿದ ಕೆಪಿಸಿಸಿ ವಕ್ತಾರೆ ವೀಣಾ ಮಹಾಂತೇಶ್ ಅವರು, ಮಹಿಳಾ ಮೀಸಲಾತಿ ವಿಚಾರದಲ್ಲಿ ಕಾಂಗ್ರೆಸ್ ಪಕ್ಷದ ನಿಲುವು ಸದಾ ಸ್ಪಷ್ಟವಾಗಿದ್ದು, ಮಹಿಳೆಯರ ರಾಜಕೀಯ ಸಬಲೀಕರಣಕ್ಕೆ ಪಕ್ಷ ಬದ್ಧವಾಗಿದೆ ಎಂದು ಹೇಳಿದರು.

''ಮಹಿಳೆಯರಿಗೆ ಸಮಾನ ರಾಜಕೀಯ ಅವಕಾಶ ಕಲ್ಪಿಸುವ ಹೋರಾಟವನ್ನು ಕಾಂಗ್ರೆಸ್ ದಶಕಗಳಿಂದ ನಡೆಸುತ್ತಿದೆ. ಆದರೆ ಬಿಜೆಪಿ ಸರ್ಕಾರ ತನ್ನ ವೈಫಲ್ಯಗಳನ್ನು ಮರೆಮಾಚಲು ಕಾಂಗ್ರೆಸ್ ವಿರುದ್ಧ ಸುಳ್ಳು ಆರೋಪಗಳನ್ನು ಮಾಡುತ್ತಿದೆ. ಬೆಲೆ ಏರಿಕೆ, ನಿರುದ್ಯೋಗ, ಮಹಿಳೆಯರ ಸುರಕ್ಷತೆ ಸೇರಿದಂತೆ ಜನರ ಮೂಲಭೂತ ಸಮಸ್ಯೆಗಳಿಂದ ಗಮನ ಬೇರೆಡೆಗೆ ತಿರುಗಿಸುವ ಪ್ರಯತ್ನ ನಡೆಯುತ್ತಿದೆ,'' ಎಂದು ಆರೋಪಿಸಿದರು.

ಕೆಪಿಸಿಸಿ ಮಹಿಳಾ ಘಟಕದ ರಾಜ್ಯ ಕಾರ್ಯದರ್ಶಿ ಕವಿತಾ ಈಶ್ವರ ಸಿಂಗ್ ಮಾತನಾಡಿ, ಮಹಿಳಾ ಮೀಸಲಾತಿ ಮಸೂದೆ ಜಾರಿಗೆ ನಿಜವಾದ ರಾಜಕೀಯ ಇಚ್ಛಾಶಕ್ತಿ ಅಗತ್ಯವಿದೆ. ಬಿಜೆಪಿ ಸರ್ಕಾರ ಕೇವಲ ಪ್ರಚಾರಕ್ಕಾಗಿ ವಿಷಯವನ್ನು ಬಳಸಿಕೊಳ್ಳುತ್ತಿದ್ದು, ತಕ್ಷಣ ಪರಿಣಾಮಕಾರಿ ಜಾರಿಗೆ ಕ್ರಮ ಕೈಗೊಳ್ಳಬೇಕು ಎಂದು ಒತ್ತಾಯಿಸಿದರು.

ಎಐಸಿಸಿ ಮಹಿಳಾ ವಿಭಾಗದ ಪ್ರಧಾನ ಕಾರ್ಯದರ್ಶಿ ಎಂ. ಕಮಲಾಕ್ಷಿ ರಾಜಣ್ಣ ಅವರು, ಮಹಿಳೆಯರ ಮತಗಳಿಂದ ಅಧಿಕಾರಕ್ಕೆ ಬಂದ ಬಿಜೆಪಿ ಸರ್ಕಾರ ಮಹಿಳೆಯರ ಅಭಿವೃದ್ಧಿಗೆ ತಕ್ಕ ಮಟ್ಟಿನ ಯೋಜನೆಗಳನ್ನು ಜಾರಿಗೆ ತರಲು ವಿಫಲವಾಗಿದೆ ಎಂದು ಟೀಕಿಸಿದರು. ಪ್ರಧಾನಮಂತ್ರಿ ನರೇಂದ್ರ ಮೋದಿ ಹಾಗೂ ಬಿಜೆಪಿ ಮುಖಂಡರ ಹೇಳಿಕೆಗಳನ್ನು ಕಾಂಗ್ರೆಸ್ ಮಹಿಳಾ ನಾಯಕಿಯರು ತೀವ್ರವಾಗಿ ಖಂಡಿಸಿ, ಮಹಿಳಾ ಮೀಸಲಾತಿ ವಿಚಾರದಲ್ಲಿ ಜನರನ್ನು ತಪ್ಪು ದಾರಿಗೆಳೆಯುವ ರಾಜಕೀಯ ನಿಲ್ಲಿಸಬೇಕು ಎಂದು ಆಗ್ರಹಿಸಿದರು. ಪತ್ರಿಕಾ ಗೋಷ್ಠಿಯಲ್ಲಿ ಮುನ್ನಿ ಕಾಸಿಂ, ಕನಕಮ್ಮ, ಮುಮ್ತಾಜ್ ಬೇಗಂ, ನಿಂಬಗಲ್ ರಾಮಕೃಷ್ಣ, ಇಂದುಮತಿ, ಲಕ್ಷ್ಮೀ ಸೇರಿದಂತೆ ಹಲವರು ಉಪಸ್ಥಿತರಿದ್ದರು. ಮಹಿಳಾ ಮೀಸಲಾತಿ ವಿಷಯದಲ್ಲಿ ಬಿಜೆಪಿ ಸರ್ಕಾರ ನಿಜವಾದ ಬದ್ಧತೆ ತೋರಿಸಬೇಕು. ರಾಜಕೀಯ ಲಾಭಕ್ಕಾಗಿ ಪ್ರಚಾರ ಮಾಡದೆ, ಮಹಿಳೆಯರ ಹಕ್ಕುಗಳು ಮತ್ತು ಪ್ರತಿನಿಧಿತ್ವಕ್ಕಾಗಿ ಕ್ರಮ ಕೈಗೊಳ್ಳಬೇಕು. ಮಹಿಳಾ ಸಬಲೀಕರಣಕ್ಕಾಗಿ ನಮ್ಮ ಹೋರಾಟ ಮುಂದುವರಿಯುತ್ತದೆ -ಕವಿತಾ ಈಶ್ವರ ಸಿಂಗ್ ಮಹಿಳೆಯರ ರಾಜಕೀಯ ಸಬಲೀಕರಣಕ್ಕಾಗಿ ಕಾಂಗ್ರೆಸ್ ದಶಕಗಳಿಂದ ಹೋರಾಟ ನಡೆಸುತ್ತಿದೆ. ಬಿಜೆಪಿ ಸರ್ಕಾರ ತನ್ನ ವೈಫಲ್ಯಗಳನ್ನು ಮರೆಮಾಚಲು ಸುಳ್ಳು ಆರೋಪಗಳನ್ನು ಮಾಡುತ್ತಿದೆ. ಜನರ ಮೂಲಭೂತ ಸಮಸ್ಯೆಗಳಿಂದ ಗಮನ ಬೇರೆಡೆಗೆ ತಿರುಗಿಸುವ ರಾಜಕೀಯವನ್ನು ಜನರು ಅರ್ಥಮಾಡಿಕೊಂಡಿದ್ದಾರೆ.

ಮಹಿಳಾ ಮೀಸಲಾತಿ ಮಸೂದೆಗೆ ಆಗ್ರಹಿಸಿ ಮಹಿಳಾ ಜನಾಕ್ರೋಶ ಸಭೆ

ಹೊಸಪೇಟೆ / ವಿಜಯನಗರ ,ಏ.27-

ವಿಜಯನಗರ ಜಿಲ್ಲೆಯ ಹೊಸಪೇಟೆ ನಗರದ ಥಿಯೊಸಾಫಿಕಲ್ ಕಾಲೇಜಿನಲ್ಲಿ ಬಿಜೆಪಿ ಜಿಲ್ಲಾ ಘಟಕ, ಮಂಡಲ ಹಾಗೂ ನಗರ ಘಟಕದ ವತಿಯಿಂದ ನಾರಿ ಶಕ್ತಿ ವಂದನಾ ಅಧಿನಿಯಮ (ಮಹಿಳಾ ಮೀಸಲಾತಿ ಮಸೂದೆ) ಜಾರಿಗೆ ಆಗ್ರಹಿಸಿ ಮಹಿಳಾ ಜನಾಕ್ರೋಶ ಸಭೆ ನಡೆಯಿತು.

ಸಭೆಯಲ್ಲಿ ಪ್ರಬುದ್ಧ ಮಹಿಳೆಯರು, ಕಾಲೇಜು ವಿದ್ಯಾರ್ಥಿನಿಯರು, ಉದ್ಯೋಗಸ್ಥ ಮಹಿಳೆಯರು ಹಾಗೂ ಗೃಹಿಣಿಯರು ಸೇರಿದಂತೆ ನೂರಾರು ಮಹಿಳೆಯರು ಭಾಗವಹಿಸಿ ತಮ್ಮ ಅಭಿಪ್ರಾಯಗಳನ್ನು ವ್ಯಕ್ತಪಡಿಸಿದರು.



ಸಭೆಯನ್ನುದ್ದೇಶಿಸಿ ಬಿಜೆಪಿ ಜಿಲ್ಲಾ ಮಹಿಳಾ ಮೋರ್ಚಾ ಅಧ್ಯಕ್ಷೆ ಆರುಂಡಿ ಸುವರ್ಣ ಮಾತನಾಡಿ, ''ಮಹಿಳೆ ಸರ್ವ ಸಮರ್ಥಳು. ಇತಿಹಾಸದಲ್ಲಿ ಝಾನ್ಸಿ ರಾಣಿ ಲಕ್ಷ್ಮೀಬಾಯಿ, ಕಿತ್ತೂರು ರಾಣಿ ಚೆನ್ನಮ್ಮ, ಒನಕೆ ಓಬವ್ವ ಅವರಂತಹ ಧೀರ ಮಹಿಳೆಯರು ದೇಶಕ್ಕಾಗಿ ಅಪಾರ ತ್ಯಾಗ ಮಾಡಿದ್ದಾರೆ. ಇಂದಿನ ಯುಗದಲ್ಲಿ ಕಲ್ಪನಾ ಚಾವ್ಲಾ ಹಾಗೂ ಸುನೀತಾ ವಿಲಿಯಮ್ಸ್ ಅವರು ವಿಶ್ವ ಮಟ್ಟದಲ್ಲಿ ಸಾಧನೆ ಮಾಡಿದ್ದಾರೆ'' ಎಂದು ಹೇಳಿದರು.

ಇಂದು ರಾಷ್ಟ್ರಪತಿಗಳಾಗಿ ದ್ರೌಪದಿ ಮುರ್ಮು ಅವರು ದೇಶವನ್ನು ಮುನ್ನಡೆಸುತ್ತಿದ್ದು, ಕೇಂದ್ರ ಹಣಕಾಸು ಸಚಿವೆ ನಿರ್ಮಲಾ ಸೀತಾರಾಮನ್ ಅವರು ಆರ್ಥಿಕ ಕ್ಷೇತ್ರದಲ್ಲಿ ಪ್ರಮುಖ ಪಾತ್ರವಹಿಸುತ್ತಿದ್ದಾರೆ. ಆದರೂ ಮಹಿಳೆಯರಿಗೆ ರಾಜಕೀಯ ಕ್ಷೇತ್ರದಲ್ಲಿ ಸಮರ್ಪಕ ಅವಕಾಶಗಳು ಸಿಗದಿರುವುದು ವಿಷಾದನೀಯ ಎಂದರು.

ಸಭೆಯ ಬಳಿಕ ಥಿಯೊಸಾಫಿಕಲ್ ಕಾಲೇಜಿನಿಂದ ಆರಂಭವಾದ ಪ್ರತಿಭಟನಾ ಮೆರವಣಿಗೆ ಹೊಸಪೇಟೆಯ ಪ್ರಮುಖ ರಸ್ತೆಗಳಲ್ಲಿ ಸಂಚರಿಸಿ ಲಕ್ಷ್ಮೀ ಟಾಕೀಸ್ ಬಳಿ ಅಂತ್ಯಗೊಂಡಿತು. ಪ್ರತಿಭಟನಾಕಾರರು ಮಹಿಳಾ ಮೀಸಲಾತಿ ಮಸೂದೆಯನ್ನು ವಿರೋಧಿಸಿದವರ ವಿರುದ್ಧ ಘೋಷಣೆಗಳನ್ನು ಕೂಗಿ ತಮ್ಮ ಆಕ್ರೋಶ ವ್ಯಕ್ತಪಡಿಸಿದರು.

ಈ ಸಂದರ್ಭದಲ್ಲಿ ನಗರಸಭೆಯ ಮಾಜಿ ಅಧ್ಯಕ್ಷೆಸುಂಕಮ್ಮ, ವಿಜಯಲಕ್ಷ್ಮಿ, ಹೇಮಾ, ಕಮಲ, ರೇಣುಕಾ ಗವಿ ಸೇರಿದಂತೆ ಅನೇಕರು ಉಪಸ್ಥಿತರಿದ್ದರು.

ಪುರಾತನ ಕಲ್ಯಾಣಿಯನ್ನು ಸ್ವಚ್ಛತೆ ಮೂಲಕ ಮಾನವೀಯತೆ ಮೆರೆದ ಸಂಸ್ಕೃತಿ ಸೇವಾ ಟ್ರಸ್ಟ್

ರಾಯಚೂರು ಜಿಲ್ಲೆಯಲ್ಲಿ ನಿರಂತರವಾಗಿ ಎರಡು ಮೂರು ವರ್ಷಗಳಿಂದ ವಿವಿಧ ರೀತಿಯ ಸಾಮಾಜಿಕ ಕಾರ್ಯಗಳನ್ನು ಮಾಡುವುದರ ನಿಸ್ವಾರ್ಥ ಸೇವೆಗೆ ನಿಜವಾದ ಅರ್ಥವನ್ನು ತಂದೊಡ್ಡಿದ ಸಂಸ್ಕೃತಿ ಸೇವಾ ಟ್ರಸ್ಟ್ (ರಿ)ರಾಯಚೂರು ತಂಡದ ಕಾರ್ಯ ನಿಜಕ್ಕೂ ಸಮಾಜಕ್ಕೆ ಮಾದರಿ ಯಾಕೆ ಅಂದರೆ ಈ ಸಮಾಜದಲ್ಲಿ ಜನರು ಜನರ ಮಧ್ಯ ಮಾತನಾಡುವುದಕ್ಕೂ ಸಮಯವಿಲ್ಲದಂತ ಸಮಯ ಬಂದೊದಿಗಿದೆ ಅಂತದರಲ್ಲಿ ಸಂಸ್ಕೃತಿ ಸೇವಾ ಟ್ರಸ್ (ರಿ)ರಾಯಚೂರ ಇವರು ರಾಯಚೂರು ಜಿಲ್ಲೆಯಾದ್ಯಂತ ಹೊಸ ಅಭಿಯಾನ (   ) ಎನ್ನುವ ವಾಕ್ಯದೊಂದಿಗೆ ಪ್ರತಿ ಭಾನುವಾರ ಇತಿಹಾಸಿಕ ಗುಡಿ ಗುಂಡಾರಗಳು ಬಾವಿಗಳು ಬಸ್ ತಂಗು ದಾಣಗಳು ಸಾರ್ವಜನಿಕ ಸ್ಥಳಗಳು ಪ್ರಾಣಿ ಪಕ್ಷಿಗಳಿಗಾಗಿ ನೀರಿನರ ಒಟ್ಟಿಗೆ ಸಾರ್ವಜನಿಕರಿಗೆ ನೀರಿನ ಅರವಟ್ಟಿಗೆ ಅನ್ನದಾಸೋಹ ಸೇವೆ ಗ್ರಾಮೀಣ ಭಾಗದ ಮಕ್ಕಳಿಗೆ ನೋಟ್ ಬುಕ್ ವಿತರಣೆ ಬಡ ಬಗ್ಗರಿಗೆ ದಿನಸಿಗಳು ನೀಡುವಂತದ್ದು ಅಂದ ಅಂಗವಿಕಲರಿಗೆ ಆರೋಗ್ಯ ಸಲಕರಣೆ ನೀಡುವುದು ಇನ್ನು ಹಲವು ಸಾಮಾಜಿಕ ಕಾರ್ಯಗಳನ್ನು ನಿತ್ಯ ನಿರಂತರ ಮಾಡುವುದರ ಜೊತೆಗೆ ಈ ದಿನ 17ನೇ ಭಾನುವಾರದ   ) ಜವಾರನಗರದಲ್ಲಿರುವ ಶ್ರೀಗುರು ರಾಘವೇಂದ್ರರ ಮಠ ಪಕ್ಕದಲ್ಲಿರುವಂತ ಎರಡು ನೂರು ವರ್ಷ ಇತಿಹಾಸವುಳ್ಳ ಪ್ರಸಿದ್ಧವಾದ ಹಂಪಿಯ ಶೈಲಿಯನ್ನು ಹೋಲುವ ಕಲ್ಯಾಣಿ ಮತ್ತು ದೇವಸ್ಥಾನವನ್ನು ಸ್ವಚ್ಛತೆ ಮಾಡುವ ಮೂಲಕ ಕಲ್ಯಾಣಿ ಮತ್ತು ದೇವಸ್ಥಾನಕ್ಕೆ ಹೊಸ ರೂಪವನ್ನು ನೀಡಿ ಮಾನವೀಯತೆಗೆ ಮುಂದಾದ ಸಂಸ್ಕೃತಿ ಸೇವಾ ಟ್ರಸ್ಟ್ (ರಿ) ರಾಯಚೂರು ಇವರ ತಂಡದ ಕಾರ್ಯಕ್ಕೆ ಇಡೀ ರಾಯಚೂರಿನ ಸಾರ್ವಜನಿಕರು ಮೆಚ್ಚಿಗೆ ವ್ಯಕ್ತಪಡಿಸಿದ್ದಾರೆ ಈ ಸಂದರ್ಭದಲ್ಲಿ ಸಂಸ್ಕೃತಿ ಸೇವಾ ತಂಡದ ವತಿಯಿಂದ ಮಾತನಾಡಿ ಈ ತಂಡದ ಮುಖ್ಯ ಉದ್ದೇಶ ಆರು ದಿನಗಳ ಕಾಲ ಕುಟುಂಬಕ್ಕಾಗಿ ದುಡಿದರೆ ಒಂದು ದಿನವಾದರೂ ಸಮಾಜಕ್ಕೆ ಮೀಸಲಿರಲಿ ಎನ್ನುವ ಮಹತ್ವದ ಸಂಕಲ್ಪ ನಮ್ಮದು ಎಂದರು ಪ್ರತಿಯೊಬ್ಬ ಸಾರ್ವಜನಿಕರು ನಮ್ಮೂರು ನಮ್ಮ ಜಿಲ್ಲೆ ಎನ್ನುವ ಹೆಮ್ಮೆಯೊಂದಿಗೆ ಐತಿಹಾಸಿಕ ಗುಡಿ ಗುಂಡಾರುಗಳ ಉಳಿವಿಗೆ ಕೈಜೋಡಿಸಬೇಕು ನಮ್ಮ ತಂಡ ಮಾಡುವಂತಹ ಪ್ರತಿಯೊಂದು ಕಾರ್ಯಕ್ಕೂ ಪ್ರತಿಯೊಬ್ಬರ ಸಹಾಯ ಸಹಕಾರ ತನುಮನ ದನದಿಂದ ನಮ್ಮೊಂದಿಗೆ ಬೆಂಬಲಿಸಬೇಕು ನಮ್ಮ ಪ್ರತಿಯೊಂದು ಸಾರ್ವಜನಿಕ ಆಸ್ತಿಯನ್ನು ಕಾಪಾಡಿಕೊಂಡು ಹೋಗುವುದು ಪ್ರತಿಯೊಬ್ಬ ನಾಗರಿಕರ ಜವಾಬ್ದಾರಿ ಜೊತೆಗೆ ನಮ್ಮ ಹಿಂದಿನ ಐತಿಹಾಸಿಕ ಪರಂಪರೆ ಸಂಸ್ಕಾರ ಸಂಪ್ರದಾಯಗಳನ್ನು ಉಳಿಸುವಂತ ಕೆಲಸ ಯುವಕರು ಮುಂದಾಗಬೇಕು ನಮ್ಮ ತಂಡದ ಸೇವೆ ನಿರಂತರ ವಿರುತ್ತೆ ಎಲ್ಲಿಯಾದರೂ ಐತಿಹಾಸಿಕ ಗುಡಿ ಗುಂಡಾರಗಳ ಸ್ವಚ್ಛತೆಯ ಅವಶ್ಯಕತೆ ಇದ್ದಲ್ಲಿ ನಮ್ಮನ್ನು ಸಂಪರ್ಕಿಸಬಹುದು 7899959811 8147885291 ಜೊತೆಗೆ ರಾಯಚೂರು ಜಿಲ್ಲೆಯ ಜಿಲ್ಲಾಧಿಕಾರಿಗಳು ಮತ್ತು ಮಹಾನಗರ ಪಾಲಿಕೆ ಆಯುಕ್ತರು ಈ ತಂಡದ ಕಾರ್ಯವನ್ನು ಗುರುತಿ ಸಹಾಯ ಸಹಕಾರದೊಂದಿಗೆ ಬೆಂಬಲವಾಗಿ ನಿಲ್ಲುವ ಕೆಲಸಕ್ಕೆ ಮುಂದಾಗಬೇಕು ಎಂದು ಕೇಳಿಕೊಂಡರು ಸೇವೆ ಮಾಡುವಂತಹ ಮನೋಭಾವವುಳ್ಳವರು ಸ್ವಯಂಸೇವಕರಾಗಿ ತಂಡದ ಜೊತೆ ಬಂದು ಸೇರಬಹುದು ಈ ಕಲ್ಯಾಣಿ ಸ್ವಚ್ಛತೆಯಲ್ಲಿ ಗುರು ರಾಘವೇಂದ್ರ ಮಠದ ವ್ಯವಸ್ಥಾಪಕರಾದ ರಾಮಾಚಾರ್ಯ ಗರಗ್ ರವರು ಮಾತನಾಡಿ ಇಡೀ ಪ್ರಪಂಚ ಸ್ವಾರ್ಥದಿಂದ ತುಂಬಿ ತುಳುಕುತ್ತಿರುವಾಗ ಇಲ್ಲೊಂದು ಸಂಸ್ಥೆ ಯಾವುದೇ ಆಸೆ ಆಕಾಂಕ್ಷೆಗಳಿಲ್ಲದೆ ನಿಸ್ವಾರ್ಥವಾಗಿ ಸಮಾಜಕ್ಕೆ ಪ್ರೇರಣೆ ರೂಪದಲ್ಲಿ ಪ್ರತಿಯೊಬ್ಬರೂ ಇಂಥ ಐತಿಹಾಸಿಕ ಗುಡಿ ಗುಂಡಾರಗಳ ಸ್ವಚ್ಛತೆಯಲ್ಲಿ ಇಳಿದಿರುವುದು ಮಾನವನ ಕುಲಕ್ಕೆ ಮಾದರಿ ಇವರಿಗೆ ಭಗವಂತನ ಕೃಪೆ ಇರಲಿ ಎಲ್ಲರೂ ತಮ್ಮ ತಮ್ಮ ಕುಟುಂಬಕ್ಕಾಗಿ ದುಡಿಯುವವರುಉಂಟು ಯುವಕರ ತಂಡ ಸಮಾಜಕ್ಕೆ ದುಡಿತ ಇದ್ದಾರೆ ಈ ತಂಡಕ್ಕೆ ಎಲ್ಲರು ತನುಮನ ದನದಿಂದ ಬೆಂಬಲವನ್ನು ನೀಡಿ ಇನ್ನು ಹೆಚ್ಚಿನ ಯುವಕರು ಇಂಥ ಕಾರ್ಯದಲ್ಲಿ ಭಾಗಿಯಾಗಿ ಎಂದು ಕೇಳಿಕೊಂಡರು ಕಲ್ಯಾಣಿಯ ಸ್ವಚ್ಛತಾ ಕಾರ್ಯದಲ್ಲಿ ಸಂಸ್ಕೃತಿ ಸೇವಾ ತಂಡದ ಮರೆಪ್ಪ ನಾಯಕ ವಿಜಯಲಕ್ಷ್ಮಿ ಪ್ರಸನ್ನ ಕುಮಾರ್ ವಿಶ್ವ ಶಿವು ಜಾಬೀರ್ ವೆಂಕಟೇಶ್ ಆನಂದ್ ನಾಗರಾಜ್ ತಿಮ್ಮಪ್ಪ ಗೌತಮ್ ಸಂಧ್ಯಾ ಮಠದ ವ್ಯವಸ್ಥಾಪಕರು ರಾಮಾಚಾರಿ ಗರಗ್ ರಾಘವೇಂದ್ರ ಸರ್ ಉಪಸ್ಥಿತರಿದ್ದರು



ಬಳ್ಳಾರಿಯಲ್ಲಿ ಡಾ.ರಾಜ್‌ಕುಮಾರ್ ಜನ್ಮದಿನಾಚರಣೆ ಅಂಗವಾಗಿ ಕನ್ನಡ ಚಲನಚಿತ್ರ ಗೀತೆಗಳ ಗಾಯನ ರಸದೌತಣ

ಡಾ.ರಾಜ್‌ಕುಮಾರ್ ಸಂತನಂತೆ ಬದುಕಿದ ಮಹಾನ್ ಚೇತನ: ಕೆ.ಇ.ಚಿದಾನಂದಪ್ಪ

ಬಳ್ಳಾರಿ,ಏ.27-

ಡಾ. ರಾಜ್‌ಕುಮಾರ ಅವರು ಕೇವಲ ಒಬ್ಬ ನಟರಾಗಿರದೆ, ಸಂತನಂತೆ ಬದುಕಿದ ಮಹಾನ್ ಚೇತನ. ಸರಳ ಸಜ್ಜನಿಕೆಯ ಸಾಕಾರಮೂರ್ತಿಯಾಗಿದ್ದರು ಎಂದು ಜಿಲ್ಲಾ ಗ್ಯಾರಂಟಿ ಯೋಜನೆಗಳ ಅನುಷ್ಠಾನ ಪ್ರಾಧಿಕಾರದ ಅಧ್ಯಕ್ಷ ಕೆ.ಇ.ಚಿದಾನಂದಪ್ಪ ಅವರು ಹೇಳಿದರು.

ಜಿಲ್ಲಾಡಳಿತ, ಜಿಲ್ಲಾ ಪಂಚಾಯತ್, ವಾರ್ತಾ ಮತ್ತು ಸಾರ್ವಜನಿಕ ಸಂಪರ್ಕ ಇಲಾಖೆ ಇವರ ಸಂಯುಕ್ತಾಶ್ರಯದಲ್ಲಿ ಡಾ.ರಾಜ್‌ಕುಮಾರ್ ಜನ್ಮದಿನಾಚರಣೆಯ ಅಂಗವಾಗಿ ನಗರದ ಡಾ.ಜೋಳದರಾಶಿ ದೊಡ್ಡನಗೌಡ ರಂಗಮಂದಿರದಲ್ಲಿ ಶುಕ್ರವಾರ ಏರ್ಪಡಿಸಿದ್ದ ಕನ್ನಡ ಚಲನಚಿತ್ರ ಗೀತೆಗಳ ಗಾಯನ ಕಾರ್ಯಕ್ರಮ ಉದ್ಘಾಟಿಸಿ ಅವರು ಮಾತನಾಡಿದರು.

ಡಾ.ರಾಜ್ ಕುಮಾರ್ ಅವರಿಗೆ ಹಣ, ಅಧಿಕಾರ, ಯೌವನ ಮತ್ತು ರೂಪದಂತಹ ಎಲ್ಲ 'ಮದ'ಗಳು ಲಭ್ಯವಿದ್ದರೂ, ಅವುಗಳನ್ನು ಧಿಕ್ಕರಿಸಿ ವಿನಯವಂತಿಕೆಯಿಂದ ಬದುಕಿದವರು. ಅವರ ವ್ಯಕ್ತಿತ್ವವು ಎಲ್ಲ ಕಾಲಕ್ಕೂ ಎಲ್ಲ ಕಲಾವಿದರಿಗೂ ಮಾದರಿಯಾಗಿದೆ ಎಂದು ಬಣ್ಣಿಸಿದರು.

ಸಮಾಜದಲ್ಲಿ ಇಂದು ಜಾತಿ ರಾಜಕಾರಣ ಮತ್ತು ಪ್ರತಿಯೊಂದು ಸಾಧನೆಯ ಹಿಂದೆ ಜಾತಿಯನ್ನು ಹುಡುಕುವ ಪ್ರವೃತ್ತಿ ಹೆಚ್ಚಾಗಿದೆ. ಆದರೆ ಡಾ. ರಾಜ್‌ಕುಮಾರ್ ಅವರು ಜಾತಿಯನ್ನು ಮೀರಿ ಬೆಳೆದ 'ಜಾತ್ಯತೀತ ಜ್ಯೋತಿ'ಯಾಗಿದ್ದರು. ಅಧಿಕಾರದ ಆಸೆಗಾಗಿ ಅವರು ಎಂದೂ ರಾಜಕೀಯಕ್ಕೆ ಬರಲಿಲ್ಲ, ಬದಲಾಗಿ ಕನ್ನಡ ನಾಡಿನ ಕಲೆ ಮತ್ತು ಸಂಸ್ಕೃತಿಯ ಪ್ರತಿಬಿಂಬವಾಗಿ ಉಳಿದರು ಎಂದು ಸ್ಮರಿಸಿದರು.

ರಾಜ್‌ಕುಮಾರ ಅವರು ತಮ್ಮ ಸಿನಿಮಾಗಳ ಮೂಲಕ ನಾಡಿಗೆ ಯೋಗದ ಮಹತ್ವವನ್ನು ತಿಳಿಸಿಕೊಟ್ಟವರು. 'ಬಂಗಾರದ ಮನುಷ್ಯ' ಚಿತ್ರದ ಮೂಲಕ ಕೃಷಿಯ ಮಹತ್ವವನ್ನು ಸಾರಿದ್ದರಿಂದ ಅನೇಕ ಯುವಕರು ಕೃಷಿಯತ್ತ ಆಕರ್ಷಿತರಾಗಿದ್ದರು. ಅವರು ಸಿನಿಮಾದಲ್ಲಿ ತೋರಿದ ಆದರ್ಶಗಳನ್ನು ತಮ್ಮ ನಿಜ ಜೀವನದಲ್ಲೂ ಪಾಲಿಸಿಕೊಂಡು ಬಂದವರು ಎಂದು ತಿಳಿಸಿದರು.



ಭಕ್ತ ಕುಂಬಾರ, ಭಕ್ತ ಕನಕದಾಸ, ಸಂತ ತುಕಾರಾಂ, ಬೇಡರ ಕಣ್ಣಪ್ಪ ಮತ್ತು ರಾಘವೇಂದ್ರ ಸ್ವಾಮಿಗಳ ಪಾತ್ರಗಳಲ್ಲಿ ನಟಿಸುವ ಮೂಲಕ ಆ ವ್ಯಕ್ತಿತ್ವಗಳ ಬಗ್ಗೆ ಸಾಮಾನ್ಯ ಜನರಿಗೂ ತಿಳಿಯುವಂತೆ ಮಾಡಿದರು. ಅವರ ಸರಳ ಸಜ್ಜನಿಕೆಯೇ ಅವರಿಗೆ ಇಂದಿಗೂ ಅಪಾರ ಅಭಿಮಾನಿಗಳನ್ನು ಗಳಿಸಿಕೊಟ್ಟಿದೆ ಎಂದರು.

ಬಳ್ಳಾರಿಯ ಆಕಾಶವಾಣಿ ಎಫ್‌ಎಂ ಕೇಂದ್ರದ ಉದ್ಘೋಷಕರಾದ ಬಸವರಾಜ ಅಮಾತಿ ಅವರು ವಿಶೇಷ ಉಪನ್ಯಾಸ ನೀಡಿ, ಡಾ. ರಾಜ್‌ಕುಮಾರ್ ಅವರು ಏಪ್ರಿಲ್ 24, 1929 ರಂದು ಜನಿಸಿದರು. ಅವರ ತಂದೆ ಸಿಂಗಾನಲ್ಲೂರು ಪುಟ್ಟಸ್ವಾಮಯ್ಯನವರು ಅಪ್ರತಿಮ ರಂಗಭೂಮಿ ಕಲಾವಿದರಾಗಿದ್ದರು. ರಾಜ್ ಕುಮಾರ್ 'ಬೇಡರ ಕಣ್ಣಪ್ಪ' (1954) ಚಿತ್ರದ ಮೂಲಕ ಬೆಳ್ಳಿತೆರೆಗೆ ಪಾದಾರ್ಪಣೆ ಮಾಡಿದರು. ಅಲ್ಲಿಂದ ಆರಂಭವಾದ ಅವರ ಸಿನಿ ಪಯಣ ಸುಮಾರು 200 ರಿಂದ 205 ಚಿತ್ರಗಳಲ್ಲಿ ನಟಿಸಿದ್ದಾರೆ ಎಂದು ತಿಳಿಸಿದರು.

ಬಳ್ಳಾರಿಯೊಂದಿಗೆ ಸಂಬಂಧ:

ಡಾ. ರಾಜ್ ಅವರು ಕೇವಲ ನಟರಾಗಿರದೆ ಸಮಾಜ ಸೇವಕರಾಗಿಯೂ ಗುರುತಿಸಿಕೊಂಡಿದ್ದರು. 1995 ರಲ್ಲಿ ಬಳ್ಳಾರಿಯಲ್ಲಿ ರಸಮಂಜರಿ ಕಾರ್ಯಕ್ರಮ ನಡೆಸಿ, ಅದರಿಂದ ಬಂದ ಹಣವನ್ನು ರಂಗಮಂದಿರ ನಿರ್ಮಾಣಕ್ಕೆ ದೇಣಿಗೆ ನೀಡಿದ್ದರು. ಸರ್ಕಾರ ಪ್ರಶಸ್ತಿ ಘೋಷಿಸಿದಾಗ, ತಮಗಿಂತ ಮೊದಲು ಕುವೆಂಪು ಅವರಿಗೆ ಈ ಗೌರವ ಸಿಗಬೇಕು ಎಂದು ಅವರು ಬಯಸಿದ್ದರು. ನಂತರ ಇಬ್ಬರಿಗೂ ಜಂಟಿಯಾಗಿ ಈ ಪ್ರಶಸ್ತಿ ನೀಡಲಾಯಿತು. ದಾದಾಸಾಹೇಬ್ ಫಾಲ್ಕೆ ಪ್ರಶಸ್ತಿಯೊಂದಿಗೆ ಬಂದ ಹಣವನ್ನೆಲ್ಲಾ ಅವರು ಕನ್ನಡ ಸಾಹಿತ್ಯ ಪರಿಷತ್ತಿಗೆ ದತ್ತಿಯಾಗಿ ನೀಡಿದರು ಎಂದರು.

ಡಾ.ರಾಜ್ ಕುಮಾರ್ ಅವರು ಸಹಕಲಾವಿದರಿಗೆ ಗೌರವ ನೀಡುತ್ತಿದ್ದರು. ಚಿತ್ರೀಕರಣದ ಸೆಟ್ ಅನ್ನು ದೇವಸ್ಥಾನವೆಂದು ಭಾವಿಸುತ್ತಿದ್ದ ಅವರು, ಅಲ್ಲಿ ಧೂಮಪಾನ ಅಥವಾ ಮದ್ಯಪಾನಕ್ಕೆ ಅವಕಾಶ ನೀಡುತ್ತಿರಲಿಲ್ಲ. ಸ್ವತಃ ಅವರೂ ಕೂಡ ತೆರೆಯ ಮೇಲೆ ಇಂತಹ ದೃಶ್ಯಗಳಲ್ಲಿ ನಟಿಸಲು ನಿರಾಕರಿಸುತ್ತಿದ್ದರು ಎಂದರು.

ಅಭಿಮಾನಿಗಳೇ ದೇವರು:

ತಿರುಪತಿಯಲ್ಲಿ ಸಾಮಾನ್ಯ ಸರತಿಯಲ್ಲಿ ನಿಂತು ದರ್ಶನ ಪಡೆದ ಘಟನೆಯ ನಂತರ, ಅವರು ತಮ್ಮ ಅಭಿಮಾನಿಗಳನ್ನು 'ಅಭಿಮಾನಿ ದೇವರುಗಳು' ಎಂದು ಕರೆಯಲು ಆರಂಭಿಸಿದರು. ಗೋಕಾಕ್ ಚಳವಳಿಯಲ್ಲಿ ಸಕ್ರಿಯವಾಗಿ ಪಾಲ್ಗೊಂಡು ಕನ್ನಡ ಭಾಷೆಯ ಹಿತಾಸಕ್ತಿಗಾಗಿ ಶ್ರಮಿಸಿದರು. 'ಸಂಪತ್ತಿಗೆ ಸವಾಲ್' ಚಿತ್ರದ ಮೂಲಕ ಪೂರ್ಣ ಪ್ರಮಾಣದ ಗಾಯಕರಾದ ಅವರು, ಶಾಸ್ತ್ರೀಯ ಸಂಗೀತ ಮತ್ತು ಭಕ್ತಿಗೀತೆಗಳಿಗೂ ಧ್ವನಿಯಾದರು. ಅವರ 'ನಾದಮಯ' ಹಾಡು ಇಂದಿಗೂ ಜನಪ್ರಿಯವಾಗಿದೆ. ವಿಶೇಷವೆಂದರೆ, ಭಕ್ತಿಗೀತೆಗಳ ಗಾಯನದಿಂದ ಬಂದ ಹಣವನ್ನು ಅವರು ಎಂದಿಗೂ ಸ್ವಂತಕ್ಕೆ ಬಳಸದೆ ಮಠ-ಮಾನ್ಯಗಳಿಗೆ ನೀಡುತ್ತಿದ್ದರು ಎಂದು ತಿಳಿಸಿದರು.

ಕನ್ನಡ ನಾಡು, ನುಡಿ ಮತ್ತು ಸಂಸ್ಕೃತಿಗೆ ಡಾ. ರಾಜ್‌ಕುಮಾರ ಅವರು ನೀಡಿದ ಕೊಡುಗೆ ಅನನ್ಯ. ಅವರ ಸರಳತೆ ಮತ್ತು ಆದರ್ಶಗಳು ಇಂದಿನ ತಲೆಮಾರಿಗೆ ದಾರಿದೀಪವಾಗಿವೆ ಎಂದು ಅಭಿಪ್ರಾಯಪಟ್ಟರು.

ಕಾರ್ಯಕ್ರಮದಲ್ಲಿ ಕೊಪ್ಪಳದ ಕ್ಷಿತಿ ಮ್ಯೂಸಿಕಲ್ ಈವೆಂಟ್ಸ್ ನ ತಂಡದವರು ಡಾ.ರಾಜ್ ಕುಮಾರ್ ನಟಿಸಿದ ಕನ್ನಡ ಚಲನಚಿತ್ರ ಗೀತೆಗಳ ಗಾಯನ ರಸದೌತಣವನ್ನು ಕಲಾಭಿಮಾನಿಗಳಿಗೆ ಉಣಬಡಿಸಿದರು. ಸಂವಿಧಾನ ಪ್ರಸ್ತಾವನೆ ಬೋಧಿಸಲಾಯಿತು.

ಈ ಸಂದರ್ಭದಲ್ಲಿ ಕನ್ನಡ ಸಾಹಿತ್ಯ ಪರಿಷತ್ತಿನ ಜಿಲ್ಲಾಧ್ಯಕ್ಷ ನಿಷ್ಠಿ ರುದ್ರಪ್ಪ, ಕನ್ನಡಪರ ಹೋರಾಟಗಾರರು ಹಾಗೂ ಕಲ್ಯಾಣ ಕರ್ನಾಟಕ ಹೋರಾಟ ಸಮಿತಿಯ ಜಿಲ್ಲಾಧ್ಯಕ್ಷ ಸಿರಿಗೇರಿ ಪನ್ನರಾಜ್, ಕನ್ನಡ ಮತ್ತು ಸಂಸ್ಕೃತಿಯ ಇಲಾಖೆಯ ಸಹಾಯಕ ನಿರ್ದೇಶಕ ಬಿ.ನಾಗರಾಜ, ವಾರ್ತಾ ಮತ್ತು ಸಾರ್ವಜನಿಕ ಸಂಪರ್ಕ ಇಲಾಖೆಯ ವಾರ್ತಾ ಸಹಾಯಕ ವಿ.ಸಿ.ಗುರುರಾಜ ಸೇರಿದಂತೆ ವಿವಿಧ ಕನ್ನಡ ಪರ ಸಂಘಟನೆಗಳ ಪದಾಧಿಕಾರಿಗಳು, ಡಾ.ರಾಜ್ ಕುಮಾರ್ ಕಲಾಭಿಮಾನಿಗಳು, ಸಾರ್ವಜನಿಕರು, ಹಾಗೂ ಇತರರು ಉಪಸ್ಥಿತರಿದ್ದರು.

ವಿಚಾರಣೆಗೆ ನ್ಯಾಯಾಲಯದ ಮುಂದೆ ಹಾಜರಾಗದಿರಲು ಕೇಜ್ರಿವಾಲ್ ನಿರ್ಧಾರ

ನವದೆಹಲಿ, ಏ.27-

ದೆಹಲಿ ಅಬಕಾರಿ ನೀತಿ ಹಗರಣಕ್ಕೆ ಸಂಬಂಧಿಸಿದಂತೆ ದೆಹಲಿ ಮಾಜಿ ಮುಖ್ಯಮಂತ್ರಿ ಅರವಿಂದ ಕೇಜ್ರಿವಾಲ್ ಅವರು ಹೈಕೋರ್ಟ್ ವಿಚಾರಣೆಯಿಂದ ದೂರ ಉಳಿಯಲು ನಿರ್ಧರಿಸಿದ್ದಾರೆ.

ನ್ಯಾಯಮೂರ್ತಿ ಸ್ವರ್ಣ ಕಾಂತ ಶರ್ಮಾ ಅವರ ಪೀಠದ ಮುಂದೆ ನಡೆಯುತ್ತಿರುವ ವಿಚಾರಣೆಗೆ ತಾವು ಅಥವಾ ತಮ್ಮ ಪರ ವಕೀಲರು ಹಾಜರಾಗುವುದಿಲ್ಲ ಎಂದು ಕೇಜ್ರಿವಾಲ್ ಲಿಖಿತವಾಗಿ ತಿಳಿಸಿದ್ದಾರೆ. ಪತ್ರದಲ್ಲಿ ಕೇವಲ ಸತ್ಯಾಗ್ರಹದ ಘೋಷಣೆಯಷ್ಟೇ ಅಲ್ಲದೆ ತಮ್ಮ ನಿರ್ಧಾರದ ಹಿಂದಿನ ನೈತಿಕ ಮತ್ತು ವೈಯಕ್ತಿಕ ಕಾರಣಗಳನ್ನು ಸವಿಸ್ತಾರವಾಗಿ ವಿವರಿಸಿದ್ದಾರೆ. ವಿಚಾರಣೆಗೆ ಹಾಜರಾಗದಿದ್ದರೆ ಕಾನೂನಾತ್ಮಕವಾಗಿ ತನಗೆ ತೊಂದರೆಯಾಗಬಹುದು ಮತ್ತು ಏಕಪಕ್ಷೀಯ ಆದೇಶ ಹೊರಬರಬಹುದು ಎಂಬ ಅರಿವು ತನಗಿದೆ. ಹೀಗಿದ್ದರೂ ತಪ್ಪು ವ್ಯವಸ್ಥೆಯ ಮುಂದೆ ಮಂಡಿಯೂರುವುದಕ್ಕಿಂತ ಆ ಶಿಕ್ಷೆಯನ್ನು ಅನುಭವಿಸಲು ಸಿದ್ಧ ಎಂದು ಹೇಳಿದ್ದಾರೆ.

ನಾಡಿನ ಪ್ರಗತಿಯಲ್ಲಿ ಮಠಗಳ ಕೊಡುಗೆ ಅನನ್ಯ: ಸಚಿವ ಈಶ್ವರ್ ಖಂಡ್ರೆ



ಕಾಳಗಿ,ಏ.27-

ನಾಡಿನ ಪ್ರಗತಿಯಲ್ಲಿ ಮಠಮಾನ್ಯಗಳ ಕೊಡುಗೆ ಅಪಾರವಾಗಿದೆ. ಧರ್ಮ ಪ್ರಚಾರದ ಜೊತೆಗೆ ಶೈಕ್ಷಣಿಕ ಅಭಿವೃದ್ಧಿಯಲ್ಲಿ ಮಠಗಳ ಸೇವೆ ಮರೆಯಲಾಗದು ಎಂದು ಅರಣ್ಯ ಮತ್ತು ಪರಿಸರ ಸಚಿವ ಹಾಗೂ ಅಖಿಲ ಭಾರತ ವೀರಶೈವ ಲಿಂಗಾಯತ ಮಹಾಸಭಾದ ರಾಷ್ಟ್ರೀಯ ಅಧ್ಯಕ್ಷ ಈಶ್ವರ್ ಖಂಡ್ರೆ ಹೇಳಿದರು.

ತಾಲೂಕಿನ ರಟಕಲ್ ಗ್ರಾಮದ ಶ್ರೀ ಮುರುಘೇಂದ್ರ ಶಿವಯೋಗಿಗಳ ವಿರಕ್ತ ಮಠದಲ್ಲಿ ಪೂಜ್ಯ ಶ್ರೀ ನೀಲಕಂಠ ದೇವರ ನಿರಂಜನ ಚರ ಪಟ್ಟಾಧಿಕಾರ ಮಹೋತ್ಸವದ ಅಂಗವಾಗಿ ಆಯೋಜಿಸಲಾದ ಲಿಂ. ಶ್ರೀ ಹಾನಗಲ್ ಕುಮಾರ ಶಿವಯೋಗಿಗಳ ಪುರಾಣ ಸಮಾರಂಭವನ್ನು ಉದ್ಘಾಟಿಸಿ ಅವರು ಮಾತನಾಡಿದರು.

12ನೇ ಶತಮಾನದ ಬಸವಾದಿ ಶರಣರು ಸಾರಿದ ಸರ್ವರಿಗೂ ಸಮಪಾಲು, ಸರ್ವರಿಗೂ ಸಮಬಾಳು ಎಂಬ ತತ್ವದಂತೆ ಜಾತಿ-ಧರ್ಮ ಭೇದ ಮೀರಿ ಸಮಾನ ಸಮಾಜ ನಿರ್ಮಾಣಕ್ಕೆ ಅಖಿಲ ಭಾರತ ವೀರಶೈವ ಲಿಂಗಾಯತ ಮಹಾಸಭಾ ಕಾರ್ಯನಿರ್ವಹಿಸುತ್ತಿದೆ ಎಂದು ಹೇಳಿದರು.

ವೀರಶೈವ ಸಮಾಜವು ಧರ್ಮಪ್ರಚಾರದ ಜೊತೆಗೆ ಎಲ್ಲ ಸಮುದಾಯದ ವಿದ್ಯಾರ್ಥಿಗಳಿಗೆ ಶಿಕ್ಷಣ, ಅನ್ನದಾಸೋಹ ಹಾಗೂ ಸಂಸ್ಕಾರಗಳನ್ನು ನೀಡುವ ಮೂಲಕ ಜ್ಞಾನ ಬೆಳಗಿಸುವ ಕಾರ್ಯ ಮಾಡುತ್ತಿದೆ ಎಂದು ಹೇಳಿದರು.

ಇಂದಿನ ದಿನಗಳಲ್ಲಿ ಸಾಮಾಜಿಕ, ರಾಜಕೀಯ ಹಾಗೂ ಧಾರ್ಮಿಕ ಕ್ಷೇತ್ರಗಳಲ್ಲಿ ಕಲುಷಿತತೆ ಹೆಚ್ಚುತ್ತಿದೆ. ಮಾನವೀಯ ಮತ್ತು ನೈತಿಕ ಮೌಲ್ಯಗಳು ಕುಸಿಯುತ್ತಿವೆ. ಪಾಶ್ಚಾತ್ಯ ಸಂಸ್ಕೃತಿಯ ಅತಿಯಾದ ಅನುಕರಣೆಯಿಂದ ಯುವ ಸಮುದಾಯ ದಾರಿ ತಪ್ಪುತ್ತಿದೆ ಎಂದು ಅವರು ಕಳವಳ ವ್ಯಕ್ತಪಡಿಸಿದರು.

ಪಾಲಕರು ಮಕ್ಕಳಿಗೆ ಉತ್ತಮ ಸಂಸ್ಕಾರ ಮತ್ತು ಸಂಸ್ಕೃತಿ ನೀಡಬೇಕು. ಯುವಕರು ದುಶ್ಚಟಗಳಿಗೆ ಒಳಗಾಗದೆ ಉತ್ತಮ ಹವ್ಯಾಸಗಳನ್ನು ರೂಢಿಸಿಕೊಳ್ಳಬೇಕು ಎಂದು ಸಲಹೆ ನೀಡಿದರು. ಶಾಸಕ ಡಾ.ಅವಿನಾಶ ಜಾಧವ್, ಮಾಜಿ ಜಿ.ಪಂ ಸದಸ್ಯ ರಾಜೇಶ ಗುತ್ತೇದಾರ ಮಾತನಾಡಿದರು.

ಜೈ ಭಾರತ ಮಾತಾ ಸೇವಾ ಸಮಿತಿ ಸಂಸ್ಥಾಪಕ ಡಾ.ಹವಾ ಮಲ್ಲಿನಾಥ ಮಹಾರಾಜರು, ಕಲಬುರಗಿಯ ಸುಲಫಲ ಮಠದ ಡಾ. ಸಾರಂಗಧರ. ದೇಶಿಕೇಂದ್ರ ಸ್ವಾಮೀಜಿ, ಹುಲಸೂರಿನ ಡಾ.ಶಿವಾನಂದ ಮಹಾಸ್ವಾಮಿಗಳು, ರಟಕಲ್ ನ ರೇವಣಸಿದ್ಧ ಶಿವಾಚಾರ್ಯರು, ವಿರಕ್ತ ಮಠದ ನೀಲಕಂಠ ದೇವರು, ಗೌರಿಗುಡ್ಡದ ರೇವಣಸಿದ್ದ ಶರಣರು, ಅಷ್ಠಗಿಯ ನಿಜಲಿಂಗ ಶಿವಾಚಾರ್ಯರು, ಚನ್ನಬಸವ ದೇವರು ಸಾನಿಧ್ಯ ವಹಿಸಿದ್ದರು.

ಬಾಲಭವನ ರಾಜ್ಯ ಉಪಧ್ಯಕ್ಷ ಅನೀಲಕುಮಾರ ಜಮಾದರ, ಕೆಪಿಸಿಸಿ ರಾಜ್ಯ ಉಪಾಧ್ಯಕ್ಷ ಸುಭಾಷ ರಾಠೋಡ, ವೀರಶೈವ ಲಿಂಗಾಯತ ಮಹಾಸಭಾ ಜಿಲ್ಲಾಧ್ಯಕ್ಷ ಶರಣಕುಮಾರ ಮೋದಿ, ಶರಣು ಪಾಟೀಲ್ ಮೋತಕಪಳ್ಳಿ, ಉದ್ಯಮಿ ವಿಶ್ವನಾಥ ವನಮಾಲಿ, ವಿಜಯಕುಮಾರ ಚೇಂಗಟಿ, ವೀರಣ್ಣ ಗಂಗಾಣಿ, ಶರಣಬಸಪ್ಪ ಮಮಶೆಟ್ಟಿ, ಗುರುರಾಜ ಮದ್ದೂರ, ಶರಣಪ್ಪ ಬೇಲೂರ, ಸಂತೋಷ ಪತಂಗೆ, ಬಸಯ್ಯಸ್ವಾಮಿ ಪ್ಯಾಟಿಮಠ, ನೀಲಕಂಠ ಮಡಿವಾಳ, ಭರತ ಬುಳ್ಳಾ, ಬಸವರಾಜ ಮಡಿವಾಳ, ಸಂತೋಷ ನರನಾಳ, ಸಂತೋಷ ಕಡಬೂರ, ಪ್ರಕಾಶ ಯಲಾಲ್ಕಾರ, ಸತೀಷ ಕಮಲಾಪೂರ, ಹೀರಾಲಾಲ್ ಸಾಬನೆ ಸೇರಿದಂತೆ ಅನೇಕರು ಇದ್ದರು. ಗೌರಿಶಂಕರ ಕಿಣ್ಣಿ ನಿರುಪಿಸಿ ವಂದಿಸಿದರು.



ಜನರ ಹಿತರಕ್ಷಣೆ, ಹಕ್ಕುಗಳಿಗಾಗಿ ನ್ಯಾಯಾಲಯ: ನ್ಯಾ.ಆರ್.ನಟರಾಜ

ಬಳ್ಳಾರಿ,ಏ.27-

ಜನರ ಹಿತರಕ್ಷಣೆ ಹಾಗೂ ಹಕ್ಕುಗಳನ್ನು ಒದಗಿಸಿಕೊಡುವ ಜೊತೆಗೆ ಸಕಾಲದಲ್ಲಿ ಜನತೆಗೆ ನ್ಯಾಯ ಒದಗಿಸಿಕೊಡುವುದು ನ್ಯಾಯಾಲಯದ ಮುಖ್ಯ ಉದ್ದೇಶವಾಗಿದೆ ಎಂದು ಕರ್ನಾಟಕ ಉಚ್ಚನ್ಯಾಯಾಲಯ ಮತ್ತು ಆಡಳಿತಾತ್ಮಕ ನ್ಯಾಯಾಧೀಶರಾದ ಆರ್.ನಟರಾಜ ಅವರು ಹೇಳಿದರು.

ಕಂಪ್ಲಿ ಪಟ್ಟಣದ 20ನೇ ವಾರ್ಡಿನ ಶಿಬಿರದಿನ್ನಿ (ಮಾರುತಿನಗರ)ಯಲ್ಲಿ ಭಾನುವಾರ ಹಮ್ಮಿಕೊಂಡಿದ್ದ ನೂತನ ಸಿವಿಎಲ್ ಮತ್ತು ಜೆಎಂಎಫ್‌ಸಿ ನ್ಯಾಯಾಲಯ ಉದ್ಘಾಟಿಸಿ ಅವರು ಮಾತನಾಡಿದರು.

ಜನರು ಕೇಸ್ ವಿಚಾರಣೆಗಾಗಿ ಕಂಪ್ಲಿಯಿಂದ ದೂರದ ಬಳ್ಳಾರಿ ಕೋರ್ಟ್‌ಗೆ ಹೋಗಬೇಕಾಗಿತ್ತು. ಕಂಪ್ಲಿಯಲ್ಲಿ ಕೋರ್ಟ್ ಆಗದಿದ್ದರೆ, ಅಪೂರ್ಣವಾಗುತ್ತಿತ್ತು. ಕೋರ್ಟ್ ಸ್ಥಾಪನೆಯೊಂದಿಗೆ ಹೂ ಅರಳಿದಂತಾಗಿದೆ ಎಂದು ತಿಳಿಸಿದರು. ಇಲ್ಲಿನ ಜನರು ಹಕ್ಕು ಭಾದಿತರಾಗಿದ್ದಾರೆ. ಇಲ್ಲಿನ ಜನತೆಗೆ ಕೋರ್ಟ್ ಅತ್ಯವಶ್ಯಕವಾಗಿದೆ. ಇಲ್ಲಿನ ಪುರಸಭೆಗೆ ಒಳಪಡುವ ಕಟ್ಟಡದಲ್ಲಿ ಕೋರ್ಟ್ ಗೆ ಅವಕಾಶ ಮಾಡಿಕೊಟ್ಟಿದ್ದಾರೆ. ಇಲ್ಲಿನ ನಗದಿತ ಸ್ಥಳದಲ್ಲಿರುವ ಕಟ್ಟಡಕ್ಕೆ ಹೊಸ ರೂಪುರೇಷೆ ನೀಡಲಾಗುತ್ತದೆ. ಸರ್ಕಾರ ಅನುಮತಿ ನೀಡಿದರೆ, ಭವ್ಯ ಕಟ್ಟಡ ಮಾಡಲಿದ್ದೇವೆ ಎಂದರು.

ಕರ್ನಾಟಕ ರಾಜ್ಯ ಬಾರ್ ಕೌನ್ಸಿಲ್ ಸದಸ್ಯ ಅನೀಲ್ ಕುಮಾರ್ ಅವರು ಮಾತನಾಡಿ, ಕಂಪ್ಲಿಯಲ್ಲಿ ಈಗ ನ್ಯಾಯಾಲಯ ಸ್ಥಾಪನೆಗೊಂಡಿದೆ. ಕಂಪ್ಲಿ ಬಳಿಯಲ್ಲಿ ಮೀಸಲಿಸಿರುವ 3.12 ಎಕರೆ ಜಾಗದಲ್ಲಿ ಸುಮಾರು 25 ಕೋಟಿ ರೂ. ಅನುದಾನ ಮಂಜೂರು ಮಾಡಿಸಿ, ಭವ್ಯ ಕಟ್ಟಡ ನಿರ್ಮಿಸಿಕೊಡುವ ಭರವಸೆಯನ್ನು ಶಾಸಕ ಜೆ.ಎನ್.ಗಣೇಶ ನೀಡಿದ್ದಾರೆ. ಸಕಾಲದಲ್ಲಿ ಕಕ್ಷಿದಾರರಿಗೆ ನ್ಯಾಯ ಒದಗಿಸಿಕೊಡುವ ನಿಟ್ಟಿನಲ್ಲಿ ವಕೀಲರು ಮುಂದಾಗಬೇಕು ಎಂದರು.

ಈ ಸಂದರ್ಭದಲ್ಲಿ ಬಳ್ಳಾರಿ ಜಿಲ್ಲಾ ಪ್ರಧಾನ ಜಿಲ್ಲಾ ಮತ್ತು ಸತ್ರ ನ್ಯಾಯಾಧೀಶರಾದ ಕೆ.ಜಿ.ಶಾಂತಿ, ಎಸ್.ಇಸ್ಮಾಯಿಲ್ ಜಬಿವುಲ್ಲಾ, ಕರ್ನಾಟಕ ರಾಜ್ಯ ವಕೀಲರ ಪರಿಷತ್ ಸದಸ್ಯ ಜೆ.ಎಂ.ಅನಿಲ್ ಕುಮಾರ, ಲೋಕೋಪಯೋಗಿ ಇಇ ಬಿ.ವಿಜಯ ಭಾಸ್ಕರ್, ವಕೀಲರಾದ ಪ್ರಭಾಕರ, ಹರೀಶ್, ರುದ್ರಪ್ಪ, ಶಿವಪ್ಪ, ಯಂಕಪ್ಪ, ನಟರಾಜ, ಹುಲುಗಪ್ಪ, ವೀರಣ್ಣ, ಮಾರುತಿಸಿಂಗ್, ಮೋಹನ್ ಕುಮಾರ್ ದಾನಪ್ಪ, ಮುಂಖಡರಾದ ಕೆ.ಎಂ.ಹೇಮಯ್ಯಸ್ವಾಮಿ, ಹೊಸಕೋಟೆ ಜಗದೀಶ, ಜಿ.ರಾಮಣ್ಣ, ಬಿ.ಸಿದ್ದಪ್ಪ ಸೇರಿದಂತೆ ಅನೇಕರಿದ್ದರು.



ಬಯಲು ಆಂಜನೇಯ ದೇವಸ್ಥಾನದಲ್ಲಿ ಶ್ರೀ ಶಾಮ ಸುಂದರ ದಾಸರ ಆರಾಧನೆ

ರಾಯಚೂರು,ಏ.26-

ಜವಾಹರ ನಗರದ ಬಯಲು ಆಂಜನೇಯ ದೇವಸ್ಥಾನದಲ್ಲಿ ನಿನ್ನೆ ಸಂಜೆ ವರಕವಿಗಳು ದಾಸ ಶ್ರೇಷ್ಠರಾದ ಶ್ರೀ ಶಾಮಸುಂದರ ದಾಸರ ಆರಾಧನೆಯನ್ನು ದಾಸರ ಭಾವ ಚಿತ್ರಕ್ಕೆ ಪೂಜೆ ಸಲ್ಲಿಸುವ ಮೂಲಕ ವಿಜ್ರಂಭಣೆಯಿಂದ ಆಚರಿಸಲಾಯಿತು.

ಆರಾಧನೆಯ ಕಾರ್ಯಕ್ರಮದಲ್ಲಿ ಉಪನ್ಯಾಸಗಳು ದಾಸವಾಣಿ ಕಾರ್ಯಕ್ರಮಗಳು ಭಜನಾ ಮಂಡಳಿಯಿಂದ ಭಜನೆ ಕಾರ್ಯಕ್ರಮಗಳು ಜರಗಿದವು. ಶೃತಿ ಸಾಹಿತ್ಯ ಮೇಳ ರಾಯಚೂರು ಇದರ ಅಧ್ಯಕ್ಷ ಮುರಳಿಧರ ಕುಲಕರ್ಣಿ ಅವರು ಉಪನ್ಯಾಸ ನೀಡಿ ಶ್ರೀ ಶಾಮ ಸುಂದರ ದಾಸರು ಮಾನವೀಯ ಗುಂಡಾಚಾರ್ಯರೆಂದು ಪ್ರಸಿದ್ಧಿಯಾ ಗಿದ್ದರು. ಇವರು ಜಗನ್ನಾಥ ದಾಸರಿಂದ ಸ್ವಪ್ನಾಂಕಿತವನ್ನು ಪಡೆದು ಶಾಮ ಸುಂದರ ವಿಠಲ ಎಂಬ ಅಂಕಿತದಿಂದ ನೂರಾರು ಸಂಕೀರ್ತನೆಗಳನ್ನು, ಸುಳಾದಿಗಳನ್ನು, ಬಯಲಾಟಗಳನ್ನು, ಲಾವಣಿ ಪದಗಳನ್ನು, ಗೀಗಿ ಪದಗಳನ್ನು, ಶೋಬಾನಗೀತೆಗಳನ್ನು, ಜೋಗುಳ ಗೀತೆಗಳನ್ನು, ಕೋಲಾಟ ಪದಗಳನ್ನು ರಚಿಸಿ ಹರಿದಾಸ ಶ್ರೇಷ್ಠ ಆಗಿದ್ದಾರೆ.ಇವರು ರಚಿಸಿದ ಒಂದೊಂದು ಕೃತಿಗಳು ಸಹ ಅತ್ಯಂತ ಮೌಲ್ಯಯುಕ್ತವಾಗಿದೆ. ಮತ್ತು ಪ್ರಸಿದ್ಧಿಯನ್ನು ಪಡೆದಿವೆ.

ಇವರು ಅಕ್ಕಿಹಾಳ ಗೋವಿಂದ ದಾಸರು, ಶ್ರೀ ಗುರು ಜಗನ್ನಾಥದಾಸರ ಸಮಕಾಲಿನ ದಾಸರಾಗಿದ್ದರು. ಇವರು ಮಾನವಿಯಲ್ಲಿ ಜಾತ್ಯತೀತವಾಗಿ ಹರಿದಾಸ ದೀಕ್ಷೆ ನೀಡಿ ದಾಸ ಪರಂಪರೆಯನ್ನು ಬೆಳೆಸಿದ ಮಹನೀಯರಾಗಿದ್ದಾರೆ,ಎಂದು ಹೇಳಿದರು.

ಪತ್ರಕರ್ತ ಜಯ ಕುಮಾರ್ ದೇಸಾಯಿ ಮಾತನಾಡಿ ಶಾಮಸುಂದರ ದಾಸರು ಕನ್ನಡದ ವರ ಕವಿಯಗಳಾದ ದ.ರಾ. ಬೇಂದ್ರೆ ಅವರ ಮೇಲೆ ಕೃತಿ ರಚಿಸಿ ಅವರಿಂದ ಪ್ರಶಂಸಿಗೆ ಒಳಪಟ್ಟು ಅವರಿಂದ ವರಕವಿಗಳು ಎಂದು ಬಿರದನ್ನು ಪಡೆದ ಹರಿದಾಸರಾಗಿದ್ದಾರೆ ಎಂದರು. ಕಾರ್ಯಕ್ರಮವನ್ನು ಬ್ರಾಹ್ಮಣ ಸಮಾಜದ ಹಿರಿಯ ಮುಖಂಡರಾದ ಪ್ರಸನ್ನ ಆಲಂಪಲ್ಲಿ ಅವರು ಉದ್ಘಾಟಿಸಿದರು. ಶಾಮಸುಂದರ ದಾಸರ ಕೀರ್ತನೆಗಳನ್ನು ಹಿರಿಯ ದಾಸವಾಣಿ ಕಲಾವಿದ ಸುರೇಶ್ ಕಲ್ಲೂರ ಅವರು ಹಾಡುವುದರ ಮೂಲಕ ಕಾರ್ಯಕ್ರಮಕ್ಕೆ ಚಾಲನೆಯನ್ನು ನೀಡಿದರು. ಶಾಮಸುಂದರ ದಾಸರ ಭಾವಚಿತ್ರಕ್ಕೆ ಬಯಲು ಆಂಜನೇಯ ದೇವಸ್ಥಾನದ ಅರ್ಚಕರಾದ ಶ್ರೀಧರ ಆಚಾರ್ ಮುಂಗಲಿ ಅವರು ಪೂಜೆಯನ್ನು ಸಲ್ಲಿಸಿ ಮಂಗಳಾರತಿಯನ್ನು ಮಾಡಿದರು.

ಈ ಸಂದರ್ಭದಲ್ಲಿ ವೆಂಕಟೇಶ್ ಕೋಲಾರ್, ಗುಂಡಾಚಾರ್ಯ ಹೊಳಗುಂದಿ, ಶ್ರೀಕಾಂತ,ವಾಸುಕಿ ಕರಣಂ ಅದಿತಿಕರಣಂ, ನರಸಿಂಹ ಇವರಿಂದ ದಾಸವಾಣಿ ಜರಗಿತು.

ಕಾರ್ಯಕ್ರಮದಲ್ಲಿ ನಿವೃತ್ತ ಪ್ರಾಚಾರ್ಯರಾದ ವೆಂಕಟರಾವ್ ಕುಲಕರ್ಣಿ,ಕೇಶವ ರಾವ್, ಮೋಹನ್ ಪೂಜಾರ್, ಕೃಷ್ಣಮೂರ್ತಿ ಹುಣಸಗಿ, ಲಕ್ಷ್ಮಿಕಾಂತ್ ಕರ್ಣಂ ತುಂಗಭದ್ರ, ನಾಗರತ್ನ ಕಲ್ಲೂರ್, ಹಾಗೂ ಪ್ರತಿಭಾ ಕುಲ್ಕರ್ಣಿ ಉಪಸ್ಥಿತರಿದ್ದರು.

ಮೊದಲನೇ ಪುಟದಿಂದ

ವಿದ್ಯಾರ್ಥಿಗಳು ನಿರಂತರ ಅಧ್ಯಯನಶೀಲರಾಗಬೇಕು: ಜಿಲ್ಲಾಧಿಕಾರಿ ನಿತೀಶ್ ಕೆ. ಸಲಹೆ

ಆಗಿದ್ದು, ಅದನ್ನು ಒಳ್ಳೆ ಕೆಲಸಗಳಿಗೆ ಮತ್ತು ಶಿಕ್ಷಣದ ವಿಚಾರವಾಗಿ ಬಳಸಿದರೇ ಮಾತ್ರ ಉಪಯೋಗವಾಗುತ್ತದೆ. ಕೇವಲ ಸಾಮಾಜಿಕ ಜಾಲತಾಣದಲ್ಲಿ ಕಾಲಕಳೆಯುವುದರಿಂದ ಸಮಯವೂ ವ್ಯರ್ಥವಾಗುತ್ತದೆ ಎಂದರು.

ವಿದ್ಯಾರ್ಥಿಗಳ ಪಾಲಕರ ಪರಿಶ್ರಮಕ್ಕೆ ಪ್ರತಿಫಲವೆಂದರೇ ಅದು ವಿದ್ಯಾರ್ಥಿ ಉತ್ತಮ ಫಲಿತಾಂಶವನ್ನು ತೆಗೆವುದು ಮಾತ್ರ ಆಗಿರುತ್ತದೆ. ಶಿಕ್ಷಣ ಇಲಾಖೆ ಈ ಬಾರಿ ಉತ್ತಮವಾಗಿ ಕಾರ್ಯ ನಿರ್ವಹಿಸಿದ್ದು, ಇದೀಗ ಶಿಕ್ಷಣ ಇಲಾಖೆಯ ಜವಾಬ್ದಾರಿ ಇನ್ನೂ ಹೆಚ್ಚಾಗಿದ್ದು, ನಿರಂತರ ಶ್ರಮದಿಂದ ಕಾರ್ಯ ನಿರ್ವಹಿಸುವ ಮೂಲಕ ರಾಜ್ಯದಲ್ಲಿ ಇನ್ನೂ ಉನ್ನತ ಸ್ಥಾನಕ್ಕೆ ತಲುಪಬಹುದು, ಮುಂದಿನ ದಿನಗಳಲ್ಲಿ ಇದೇ ರೀತಿ ಶ್ರಮವಹಿಸಿ ಕೆಲಸ ಮಾಡಿದರೇ ಮೊದಲನೇ ಸ್ಥಾನಕ್ಕೆ ಬರುವುದರಲ್ಲಿ ಸಂದೇಹವೇ ಇಲ್ಲ ಎಂದು ಹೇಳಿದರು.

ವಿದ್ಯಾರ್ಥಿಗಳಿಗೆ ಸನ್ಮಾನ: ಕಾರ್ಯಕ್ರಮದಲ್ಲಿ ಎಸ್.ಎಸ್.ಎಲ್.ಸಿ.ಯಲ್ಲಿ ಅತಿ ಹೆಚ್ಚು ಅಂಕಗಳಿಸಿದ ಜಿಲ್ಲೆಯ ಮಾನ್ವಿ ತಾಲೂಕಿನ ಸುಖದೇವ (625), ಸಿಂಧನೂರಿನ ನಿಖಿಲ್ ಮೇಟಿ (622), ಲಿಂಗಸುಗೂರಿನ ಪ್ರವೀಣ್ (622), ದೇವದುರ್ಗದ ಮಲ್ಲಿಕಾರ್ಜುನ ಸ್ವಾಮಿ (622) ಹಾಗೂ ರಾಯಚೂರಿನ ಸೌಮ್ಯ ಪ್ಯಾಟಿ (619) ವಿದ್ಯಾರ್ಥಿಗಳಿಗೆ ಸನ್ಮಾನಿಸಿ ಗೌರವಿಸಲಾಯಿತು.

ವಿದ್ಯಾರ್ಥಿಗಳ ಅನಿಸಿಕೆ: ಎಸ್.ಎಸ್.ಎಲ್.ಸಿ.ಪರೀಕ್ಷೆಯಲ್ಲಿ 625ಕ್ಕೆ 625 ಅಂಕಗಳನ್ನು ಪಡೆದು, ರಾಜ್ಯಕ್ಕೆ ಪ್ರಥಮ ಸ್ಥಾನ ಪಡೆದಿರುವ ಜಿಲ್ಲೆಯ ಮಾನ್ವಿಯ ಬಿವಿಆರ್ ಪ್ರೌಢ ಶಾಲೆಯ ವಿದ್ಯಾರ್ಥಿ ಸುಖದೇವ ಅವರು ಮಾತನಾಡಿ, ಐಐಟಿ ಪದವಿ ಪಡೆದು ತಂತ್ರಜ್ಞಾನ ಕ್ಷೇತ್ರದಲ್ಲಿ ಸಾಧನೆ ಮಾಡುವ ಗುರಿ ಇದೆ. ಇನ್ನೂ ಹೆಚ್ಚಿನ ಮಟ್ಟದಲ್ಲಿ ಸಾಧನೆ ಮಾಡುವ ಆಶೆ ಇದೆ ಎಂದರು.

ನನ್ನ ಈ ಸಾಧನೆಗೆ ತಂದೆ-ತಾಯಿ ಹಾಗೂ ಶಿಕ್ಷಕರ ಪಾತ್ರ ಹೆಚ್ಚಾಗಿದೆ. ಜಿಲ್ಲಾಡಳಿತದಿಂದ ಸನ್ಮಾನಿಸಿದ್ದು, ಇನ್ನೂ ಹೆಚ್ಚಿನ ಸಾಧನೆ ಮಾಡಲು ಪ್ರೇರಣೆಯಾಗಿದೆ ಎಂದು ಶಕ್ತಿನಗರ ಕೆ.ಪಿ,ಸಿ.ಎಲ್ ಪ್ರೌಢ ಶಾಲೆಯ ವಿದ್ಯಾರ್ಥಿ ಸೌಮ್ಯ ಪ್ಯಾಟಿ ಅವರು ಅಭಿಪ್ರಾಯಪಟ್ಟರು.

ಜಿಲ್ಲೆಯ ಮಾನ್ವಿಯ ಬಿವಿಆರ್ ಪ್ರೌಢ ಶಾಲೆಯ ವಿದ್ಯಾರ್ಥಿ ಸುಖದೇವ ಅವರಿಗೆ ಜಿಲ್ಲಾಧಿಕಾರಿಗಳಿಂದ 10 ಸಾವಿರ ರೂಪಾಯಿ ಚೆಕ್ ಅನ್ನು ವಿತರಣೆ ಮಾಡಲಾಯಿತು. ಇದೇ ಸಂದರ್ಭದಲ್ಲಿ ಅಪರ ಜಿಲ್ಲಾಧಿಕಾರಿ ಶಿವಾನಂದ, ಜಿಲ್ಲಾ ಪಂಚಾಯತ್ ಮುಖ್ಯ ಲೆಕ್ಕಾಧಿಕಾರಿ ವಿಜಯ ಶಂಕರ್ ರಾಯಚೂರು ತಹಶೀಲ್ದಾರ್ ಸುರೇಶ ವರ್ಮಾ, ಸಾರ್ವಜನಿಕ ಶಿಕ್ಷಣ ಇಲಾಖೆಯ ಉಪನಿರ್ದೇಶಕ ಕೆ.ಡಿ.ಬಡಿಗೇರ, ಅಭಿವೃದ್ಧಿ ವಿಭಾಗದ ಉಪ ನಿರ್ದೇಶಕ ಚಂದ್ರಶೇಖರ ಭಂಡಾರಿ ಸೇರಿದಂತೆ ಜಿಲ್ಲೆಯ ವಿವಿಧ ತಾಲೂಕಿನ ಕ್ಷೇತ್ರ ಶಿಕ್ಷಣಾಧಿಕಾರಿಗಳು ಇತರರು ಇದ್ದರು.

ರಕ್ತಲೇಪನ ಪರೀಕ್ಷೆ ಮಾಡಿಸಿ, ಮಲೇರಿಯಾ ತಡೆಗೆ ಸಹಕರಿಸಿ: ಡಾ.ಶಾಕೀರ್

ಮನೆಯ ಸುತ್ತಲಿನ ಜಾಗಗಳಲ್ಲಿ ಶಾಶ್ವತ ನೀರು ನಿಲ್ಲುವ ಸ್ಥಳಗಳಿದ್ದರೆ. ನೀರು ನಿಲ್ಲದಂತೆ ನಿಗಾ ವಹಿಸಲು ಜನತೆಗೆ ಜಾಗೃತಿ ನೀಡಲು ತಿಳಿಸಿದರು. ಮುಖ್ಯವಾಗಿ ಮಲೇರಿಯಾ ಹರಡುವ ಅನಾಪಿಲಿಸ್ ಸೊಳ್ಳೆ ಉತ್ಪತ್ತಿ ತಾಣಗಳನ್ನು ಗುರ್ತಿಸುವುದು, ಕೀಟ ನಾಶಕ ಸಿಂಪರಣೆಗೆ ಸಾರ್ವಜನಿಕರ ಸಹಕಾರ ಅಗತ್ಯವಿದೆ ಎಂದು ತಿಳಿಸಿದರು.

ಜಿಲ್ಲಾ ಡಿಪಿಡಿಓ ಡಾ ಚಂದ್ರಶೇಖರಯ್ಯ ಸ್ವಾಮಿ ಅವರು ಮಾತನಾಡಿ, ಮಲೇರಿಯಾ ಜ್ವರವು ಪ್ಲಾಸ್ಮೋಡಿಯಂ ಎಂಬ ಪರಾವಲಂಭಿ ಸೂಕ್ಷ್ಮಾಣುವಿನಿಂದ ಉಂಟಾಗಬಹುದಾಗಿದ್ದು, ಹೆಣ್ಣು ಅನಾಫಿಲೀಸ್ ಸೊಳ್ಳೆಯ ಕಚ್ಚುವಿಕೆಯಿಂದ ಒಬ್ಬರಿಂದ ಒಬ್ಬರಿಗೆ ಹರಡುತ್ತದೆ ಎಂದರು.

ಮಲೇರಿಯಾ ರೋಗ ಲಕ್ಷಣಗಳು: ಚಳಿ, ನಡುಕ, ಬಿಟ್ಟು ಬಿಟ್ಟು ಜ್ವರ ಬರುವುದು, ವಾಕರಿಕೆ, ಮೈ ಬೆವರುವುದು ಲಕ್ಷಣಗಳಾಗಿವೆ. ಈ ಲಕ್ಷಣಗಳು ಕಂಡು ಬಂದಲ್ಲಿ ಮಲೇರಿಯಾ ಜ್ವರ ಇರಬಹುದು ಎಂದು ಭಾವಿಸಿ ಹತ್ತಿರದ ಸರ್ಕಾರಿ ಆಸ್ಪತ್ರೆಯಲ್ಲಿ ರಕ್ತ ಲೇಪನ ಪರೀಕ್ಷೆಗೆ ಒಳಪಟ್ಟು ಖಚಿತಪಟ್ಟಲ್ಲಿ ಸೂಕ್ತ ಉಚಿತ ಚಿಕಿತ್ಸೆ ಪಡೆದು ಗುಣ ಹೊಂದಬಹುದಾಗಿದೆ ಎಂದು ಹೇಳಿದರು.

ನಿಯಂತ್ರಣಕ್ಕೆ ಸಹಕಾರ: ಮಲೇರಿಯಾ ಪ್ರಕರಣಗಳ ತಡೆಗೆ ಮನೆಯ ಒಳಭಾಗ ಆರೋಗ್ಯ ಇಲಾಖೆಯಿಂದ ಕೈಗೊಳ್ಳುವ ಕೀಟನಾಶಕ ಸಿಂಪರಣೆಗೆ ಸಾರ್ವಜನಿಕರು ಸಹಕರಿಸಬೇಕು. ಸ್ವಯಂ ರಕ್ಷಣಾ ಕ್ರಮಗಳಾದ ಮಲಗುವಾಗ ಸೊಳ್ಳೆ ಪರದೆ ಬಳಕೆ ಮಾಡಬೇಕು. ಕಿಟಕಿಗಳಿಗೆ ಸೊಳ್ಳೆಗಳು ನುಸುಳದಂತೆ ಜಾಲರಿ ಅಳವಡಿಸುವುದು. ಆರೋಗ್ಯ ಇಲಾಖೆಯಿಂದ ನೀಡಲ್ಪಡುವ ಲಾರ್ವಾಹಾರಿ ಗಪ್ಪಿ ಮತ್ತು ಗಂಬೂಷಿಯಾ ಮೀನುಗಳನ್ನು ಶಾಶ್ವತವಾಗಿ ನೀರು ನಿಲ್ಲುವ ಸ್ಥಳಗಳಲ್ಲಿ ಬಿಡಲು ಉಚಿತವಾಗಿ ಪಡೆಯಬಹುದಾಗಿದೆ ಎಂದರು.

ಇದೇ ಸಂದರ್ಭದಲ್ಲಿ ಪಾಲಿಕೆಯ ಪರಿಸರ ಅಭಿಯಂತರರು ಜಯಪಾಲ ರೆಡ್ಡಿ, ಬಿಹೆಚ್ಇಓ ಸರೋಜಾ ಕೆ, ಎಮ್‌ಟಿಎಸ್ ಸಂಧ್ಯಾ ಸೇರಿದಂತೆ ಮಹಾನಗರ ಪಾಲಿಕೆ ಹಾಗೂ ಆರೋಗ್ಯ ಇಲಾಖೆಯ ಸಿಬ್ಬಂದಿಯವರು ಇದ್ದರು.

ಮಾಡಲಾಗುವುದು: ಸಚಿವ ಎಸ್. ಮಧು ಬಂಗಾರಪ್ಪ

ಮಾತನಾಡುವುದಿಲ್ಲ ಎಂದು ಹೇಳಿದರು.

ವಿಶ್ವನಾಥ್ ಎಲ್ಲಿದ್ದಾರೆಂದು ಯಾರಿಗೂ ತಿಳಿಯುತ್ತಿಲ್ಲ. ಅವರು ಯಾವ ಪಕ್ಷದಲ್ಲಿದ್ದಾರೆಂದು ತಿಳಿಯುತ್ತಿಲ್ಲ. ಮೈಸೂರು ಜಿಲ್ಲೆಗೆ ವಿಶ್ವನಾಥ್ ಅವಮಾನ ಮಾಡಿದ್ದಾರೆ. ಹೀನಾಯವಾಗಿ ಸೋತು, ಪುಕ್ಸಟ್ಟೆಯಾಗಿ ಪರಿಷತ್ ಸದಸ್ಯರಾಗಿದ್ದಾರೆ. ವಿಶ್ವನಾಥ್‌ಗೆ ವಯಸ್ಸಾಗಿದೆ. ಅವರನ್ನು ಕ್ಷಮಿಸಿ ಬಿಡೋಣ ಎಂದು ಹೇಳಿದರು.

ಅಂಬೇಡ್ಕರ್ ಅವರ ವಿಚಾರಧಾರೆಯನ್ನು ನಾನು ನನ್ನ ಇಲಾಖೆಯಲ್ಲಿ ಜಾರಿ ಮಾಡಿದ್ದೇನೆ. ಎಸ್ಸಿ / ಎಸ್ಟಿ ಅವರು ಹೆಚ್ಚು ಪಾಸಾಗಿದ್ದಾರೆ. ಅವರಿಗೆ ಇಲಾಖೆಯಲ್ಲಿ ನಮ್ಮ ಮನೆ ಮಕ್ಕಳಂತೆ ಪಾಠ ಹೇಳಿ ಕೊಟ್ಟಿದ್ದಾರೆ. ನಮ್ಮ ಇಲಾಖೆಯ ಮೇಲೆ ಟೀಕೆ ಮಾಡಿದಾಗ ನೋವಾಗುತ್ತದೆ. ಆದರೆ ಮಕ್ಕಳು ಪಾಸ್ ಆಗಿ ಅವರಿಗೆಲ್ಲ ತಕ್ಕ ಉತ್ತರ ನೀಡಿದ್ದಾರೆ ಎಂದರು.

ಸಚಿವ ಪ್ರಿಯಾಂಕ್ ಖರ್ಗೆ ಕುರಿತು ಕೆಲವರು ಟೀಕೆ ಮಾಡಿದ್ದಾರೆ. ಅವರು ಅತಿ ಹೆಚ್ಚು ಅಭಿವೃದ್ಧಿ ಮಾಡಿದ್ದಾರೆ. ನಾವು ಚೋಟಾ ಸಹಿ ಮಾಡಿ ಯಾರನ್ನು ಜೈಲಿಗೆ ಕಳುಹಿಸಿಲ್ಲ. 29% ರಷ್ಟು ಯಾದಗಿರಿ, ಕಲಬುರಗಿ 28% ಮಕ್ಕಳು ಜಿಗಿತ ಕಂಡಿದ್ದಾರೆ. ಅಂದ್ರೆ ರಾಜ್ಯದಲ್ಲಿ ಎರಡನೇ ಸ್ಥಾನಕ್ಕೆ ಜಿಗಿತ ಕಂಡಿದ್ದಾರೆ. ಮಂಗಳೂರು- ಉಡುಪಿಯಲ್ಲಿ 3.3 % ರಷ್ಟು ಹೆಚ್ಚು ಅಂಕ ಪಡೆದುಕೊಂಡಿದ್ದಾರೆ. ಆದರೆ, ಇದು ಕಡಿಮೆ ಅಲ್ಲ ಎಂದು ಹೇಳಿದರು.

ಸಂಸದ ಬಸವರಾಜ ಬೊಮ್ಮಾಯಿ ಅವರು ಸಹ ಮಾತನಾಡಿದ್ದಾರೆ. ಇವರು 35 ರಿಂದ 33 ಅಂಕ ನೀಡಿದ್ದರಿಂದ ಪಾಸ್ ಆಗಿದ್ದಾರೆ ಎಂದು ಹೇಳಿದ್ದಾರೆ. ನಾವು ವೆಬ್ ಕಾಸ್ಟ್ ಮೂಲಕ ಪರೀಕ್ಷೆ ನಡೆಸಿದ್ದೇವೆ. ವೆಬ್ ಕಾಸ್ಟಿಂಗ್ ಅನ್ನು ದೇಶದಲ್ಲಿಯೇ ನಾವೇ ಮೊದಲು ಮಾಡಿದ್ದೇವೆ. ಈಗ ನಮ್ಮ ವೆಬ್‌ಕಾಸ್ಟ್ ಅನ್ನು ದೆಹಲಿಯವರು ಕೇಳಿ ಪಡೆದುಕೊಂಡಿದ್ದಾರೆ. ಸಿಬಿಎಸ್‌ಸಿಯಲ್ಲೂ ಎರಡನೇ ಪರೀಕ್ಷೆಯನ್ನು ತಂದಿದ್ದಾರೆ. ನೀವು ನಿಮ್ಮ ಮಗನನ್ನು ಚುನಾವಣೆಯಲ್ಲಿ ಹೀನಾಯವಾಗಿ ಸೋಲಿಸಿದ್ದೀರಿ ಎಂದರು.

1,482 ಮಕ್ಕಳು ಮಾತ್ರ 35 ರಿಂದ 33ಕ್ಕೆ ಇಳಿಸಿದ್ದರಿಂದ ಪಾಸ್ ಆಗಿದ್ದಾರೆ ಅಷ್ಟೇ ಎಂದು ಬೊಮ್ಮಾಯಿ ಅವರಿಗೆ ಸಚಿವ ಮಧು ಬಂಗಾರಪ್ಪ ತಿರುಗೇಟು ನೀಡಿದರು.

ಡಿಡಿಪಿಐ ಹಾಗೂ ಬಿಇಓಗೆ ಶಬ್ಬಾಶ್ ಗಿರಿ : ತಂದೆ ಕಳೆದುಕೊಂಡ ವಿದ್ಯಾರ್ಥಿಗೆ ನೋವಿನಲ್ಲೂ ಅವರನ್ನು ಒಪ್ಪಿಸಿ, ಡಿಡಿಪಿಐ ಹಾಗೂ ಬಿಇಓ ಅವರು ಅವರ ಮನವೊಲಿಸಿ ಪರೀಕ್ಷೆ ಬರೆಯಿಸಿದ್ದಾರೆ. ಅವರಿಬ್ಬರಿಗೆ ಸೆಲ್ಯೂಟ್ ಮಾಡುತ್ತೇನೆ ಎಂದರು.

ಜನಿವಾರ ತೆಗೆಸಿದವರಿಗೆ ಕಠಿಣ ಶಿಕ್ಷೆ ಆಗಬೇಕು : ಜನಿವಾರ, ಹಿಜಾಬ್ ಬಗ್ಗೆ ಅವಮಾನ ಮಾಡುವುದು ಸರಿಯಲ್ಲ. ಇಂತಹ ಕೃತ್ಯ ಮಾಡಿದವರಿಗೆ ಕಠಿಣ ಶಿಕ್ಷೆ ಬಗ್ಗೆ ತಿಳಿಸಲಾಗುವುದು. ಈ ಕುರಿತು ಸಚಿವ ಸುಧಾಕರ್ ಅವರು ಪ್ರತಿಕ್ರಿಯಿಸಿದ್ದಾರೆ ಎಂದು ಹೇಳಿದರು. ಡಾ. ರಾಜ್ ಸಮಾಧಿ ಕುರಿತು ನಟ ಚೇತನ್ ಹೇಳಿಕೆಯ ಕುರಿತ ಶಿವಣ್ಣನ ಮಾತಿಗೆ ನಾನು ಬದ್ಧವಾಗಿದ್ದೇನೆ. ನಾನು ಬಾಯಿ ಮುಚ್ಚಿಕೊಂಡು ಇರುತ್ತೇನೆ. ಡಾ. ರಾಜ್ ಕುಮಾರ್ ಅಂದ್ರೆ ನಮಗೆಲ್ಲ ದೇವರಿದ್ದಂತೆ. ಇದರಿಂದ ಶಿವಣ್ಣ ಏನ್ ಹೇಳಿದ್ದರೂ ನಾನು ಅದಕ್ಕೆ ಸಹಮತ ವ್ಯಕ್ತಪಡಿಸುತ್ತೇನೆ ಎಂದರು. ಮಳೆ ಹಾನಿ ವರದಿ ಪಡೆಯುವೆ : ನಿನ್ನೆ ಹೊಳೆಹೊನ್ನೂರು ಭಾಗದಲ್ಲಿ ಮಳೆಗೆ ಬಹಳ ಹಾನಿಯಾಗಿದೆ. ಇದರ ಬಗ್ಗೆ ಜಿಲ್ಲಾ ಪಂಚಾಯತ್ ಸಿಇಓ ಅವರಿಂದ ಮಾಹಿತಿ ಪಡೆದುಕೊಳ್ಳುತ್ತೇನೆ. ನನ್ನ ಕ್ಷೇತ್ರದಲ್ಲೂ ಸಹ ಮಳೆ ಗಾಳಿ ಬಹಳ ಹಾನಿ ಉಂಟು ಮಾಡಿತ್ತು. ಮನೆಗಳಿಗೆ ಹಾಕಿರುವ ತಗಡಿನ ಶೀಟುಗಳು ಹಾರಿ ಹೋಗಿ ಸಾಕಷ್ಟು ಹಾನಿ ಉಂಟು ಮಾಡುತ್ತಿದೆ. ಈಗ ತಹಶೀಲ್ದಾರ್, ಇಓಗಳಿಂದ ಮಾಹಿತಿ ಪಡೆದುಕೊಂಡು ಹಾನಿಯ ಪರಿಹಾರದ ಬಗ್ಗೆ ಚರ್ಚೆ ನಡೆಸಲಾಗುತ್ತದೆ ಎಂದು ತಿಳಿಸಿದರು. ದ್ವಿತೀಯ ಪಿಯುಸಿ ಹಾಗೂ ಎಸ್‌ಎಸ್‌ಎಲ್‌ಸಿಯಲ್ಲಿ ಅತಿ ಹೆಚ್ಚು ಅಂಕ ಪಡೆದವರಿಗೆ ಸಚಿವರು ಸನ್ಮಾನ ಮಾಡಿದರು .ಈ ವೇಳೆ ಜಿಲ್ಲೆಯಲ್ಲಿ ದ್ವಿತೀಯ ಪಿಯುಸಿ ಹಾಗೂ ಎಸ್‌ಎಸ್‌ಎಲ್‌ಸಿಯಲ್ಲಿ ಅತಿ ಹೆಚ್ಚು ಅಂಕ ಪಡೆದವರಿಗೆ ಸಚಿವರು ಸನ್ಮಾನ ಮಾಡಿದರು. ಈ ವೇಳೆ ಕಾಂಗ್ರೆಸ್ ಮುಖಂಡರು ಹಾಜರಿದ್ದರು.

ಸದಸ್ಯರಾದ ಎಎಪಿಯ 7 ರಾಜ್ಯಸಭಾ ಸಂಸದರು

ಸಹ್ನಿ, ಸ್ವಾತಿ ಮಲಿವಾಲ್ ಮತ್ತು ರಾಜಿಂದರ್ ಗುಪ್ತಾ ಅವರು ವಿಲೀನಗೊಂಡ ಏಳು ಸಂಸದರಾಗಿದ್ದಾರೆ.

ರಾಜ್ಯಸಭಾ ವೆಬ್‌ಸೈಟ್ ಈಗ ಏಳು ಸಂಸದರು ಬಿಜೆಪಿ ಸದಸ್ಯರ ಪಟ್ಟಿಯ ಭಾಗವಾಗಿದ್ದಾರೆ ಎಂದು ತೋರಿಸುತ್ತದೆ.ವಿಲೀನದ ನಂತರ ಏಳು ಸಂಸದರು ರಾಜ್ಯಸಭಾ ಅಧ್ಯಕ್ಷರನ್ನು ಬಿಜೆಪಿ ಸಂಸದರೆಂದು ಪರಿಗಣಿಸುವಂತೆ ಶುಕ್ರವಾರ ಮನವಿ ಮಾಡಲಾಗಿತ್ತು. ಮತ್ತು ಅದನ್ನು ಅಂಗೀಕರಿಸಲಾಗಿದೆ ಎಂದು ಮೂಲಗಳು ತಿಳಿಸಿವೆ.

ಪಕ್ಷ ಬದಲಾಯಿಸಿದ ಏಳು ಸಂಸದರ ಸದಸ್ಯತ್ವವನ್ನು ರದ್ದುಗೊಳಿಸುವಂತೆ ಕೋರಿ ಎಎಪಿ ರಾಜ್ಯಸಭಾ ಅಧ್ಯಕ್ಷರ ಮುಂದೆ ಅರ್ಜಿ ಸಲ್ಲಿಸಿತ್ತು.ಇತ್ತೀಚೆಗೆ ಎಎಪಿ ತೊರೆದು ಬಿಜೆಪಿಯೊಂದಿಗೆ ವಿಲೀನಗೊಳ್ಳುವುದಾಗಿ ಘೋಷಿಸಿದ ಮೇಲ್ಮನೆಯ ಏಳು ಪಕ್ಷದ ಸಂಸದರನ್ನು ಅನರ್ಹಗೊಳಿಸುವಂತೆ ಕೋರಿ ಆಮ್ ಆದ್ಮಿ ಪಕ್ಷದ ಸಂಸದ ಸಂಜಯ್ ಸಿಂಗ್ ಅವರು ಅಧ್ಯಕ್ಷ ರಾಧಾಕೃಷ್ಣನ್ ಅವರಿಗೆ ಅರ್ಜಿಯನ್ನು ಸಲ್ಲಿಸಿದ್ದಾರೆ.

ಕಳೆದ ಶುಕ್ರವಾರ, ಕೇಜ್ರಿವಾಲ್ ನೇತೃತ್ವದ ಪಕ್ಷವು ತನ್ನ ತತ್ವಗಳು, ಮೌಲ್ಯಗಳು ಮತ್ತು ಮೂಲ ನೈತಿಕತೆಗಳಿಂದ ದೂರ ಸರಿದಿದೆ ಎಂದು ಆರೋಪಿಸಿ, ಏಳು ರಾಜ್ಯಸಭಾ ಸಂಸದರು ರಾಜೀನಾಮೆ ನೀಡಿ ಬಿಜೆಪಿಯೊಂದಿಗೆ ವಿಲೀನಗೊಳ್ಳುವುದಾಗಿ ಘೋಷಿಸಿದಾಗ ಎಎಪಿ ಆಘಾತಕ್ಕೊಳಗಾಯಿತು.

ಜೆಸ್ಕಾಂ: ಏ.29ರಂದು ಗ್ರಾಮೀಣ ಭಾಗದಲ್ಲಿ ವಿದ್ಯುತ್ ವ್ಯತ್ಯಯ

ರಾಯಚೂರು ,ಏ.27-

ಜೆಸ್ಕಾಂ ಕಾರ್ಯ ಮತ್ತು ಪಾಲನೆ ಗ್ರಾಮೀಣ ಉಪ ವಿಭಾಗದ ವ್ಯಾಪ್ತಿ ಗೆ ಬರುವ 110/11 ಕೆವಿ ಯರ ಗೇರಾ ವಿದ್ಯುತ್ ಉಪ ಕೇಂದ್ರದ ಯರಗೇರಾ, ಮಲ್ಲಾ ಪೂರು, ಎಲ್.ಕೆ.ದೊಡ್ಡಿ, ಜಂಬ ಲದಿನ್ನಿ ಫೀಡರ್‌ಗಳಲ್ಲಿ ತುರ್ತು ನಿರ್ವಹಣ ಕಾರ್ಯ ಹಮ್ಮಿ ಕೊಂಡಿ ರು ಪ್ರಯುಕ್ತ ಏಪ್ರಿಲ್ 29ರ ಬುಧ ವಾರ ಬೆಳಿಗ್ಗೆ 10ರಿಂದ ಸಂಜೆ 5 ಗಂಟೆವರೆಗೆ ವಿದ್ಯುತ್ ಪೂರೈಕೆಯಲ್ಲಿ ವ್ಯತ್ಯಯವಾ ಗಲಿದ್ದು, ವಿದ್ಯುತ್‌ಗ್ರಾ ಹಕರು ಸಹಕರಿಸುವಂತೆ ಜೆಸ್ಕಾಂ ಕಾರ್ಯ ಮತ್ತು ಪಾಲನೆ ಗ್ರಾಮೀಣ ಉಪ ವಿಭಾಗದ ಸಹಾಯಕ ಕಾರ್ಯ ನಿರ್ವಾಹಕ ಅಭಿಯಂತರರು ಪ್ರಕಟ ಣೆಯಲ್ಲಿ ತಿಳಿಸಿದ್ದಾರೆ.

ನಮ್ಮ ಭಾಗದ ನಿರ್ದೇಶಕರನ್ನು ಮತ್ತು ಕಲಾವಿದರನ್ನು ಬೆಳೆಸಿರಿ,ಪ್ರೋತ್ಸಾಹಿಸಿರಿ-ಡಾ. ಬಿರಾದಾರ

ರಾಯಚೂರು,ಏ.27-

ಕಲೆ ಎಂಬುದು ಯಾರ ಸ್ವತ್ತು ಅಲ್ಲ. ಹಲವಾರು ರಂಗಭೂಮಿ ಕಲಾವಿದರು ಪ್ರಸಿದ್ಧ ಚಲನಚಿತ್ರ ನಟರಾಗಿ ಇಂದು ಬೆಳೆದಿದ್ದಾರೆ.ಗ್ರಾಮೀಣ ಪ್ರದೇಶದ ಪ್ರತಿಭೆಗಳು ಇಂದು ಚಲನಚಿತ್ರ ಕ್ಷೇತ್ರದಲ್ಲಿ ಕಾರ್ಯ ಮಾಡುತ್ತಿರುವ ಸಂತೋಷದ ಸಂಗತಿ.ನಮ್ಮ ಉತ್ತರ ಕರ್ನಾಟಕದ ಹಲವಾರು ಯುವಕರು ಚಲನಚಿತ್ರ ರಂಗದಲ್ಲಿ ಪಾದರ್ಪಣೆ ಮಾಡಿ.ನಟನೆ ಮತ್ತು ಚಿತ್ರ ನಿರ್ದೇಶನ ನಿರ್ಮಾಪಕ ಸಂಯೋಜನೆ ಮಾಡುವಂತಹ ಮಹತ್ವ ಕಾರ್ಯದಲ್ಲಿದಲ್ಲಿ ತೊಡಗಿದ್ದಾರೆ.ಇಂದು ಈ ಒಂದು ರಂಗಮಂದಿರದಲ್ಲಿ ವ0ದಲಿಯ ಮಾರುತೇಶ್ವರ ಮಹಿ.ಮೆ ಈ ಒಂದು ಚಲನಚಿತ್ರ ಬಹಳ ಭಕ್ತಿ ಪ್ರಧಾನವಾಗಿದ್ದು.ಇಂಥ ಒಂದು ಚಲನಚಿತ್ರದಲ್ಲಿ ನಮ್ಮ ಭಾಗದ ಹಲವಾರು ಕಲಾವಿದರು ನಟನೆಯ ಮಾಡಿದ್ದಾರೆ. ಇದೊಂದು ಅತ್ಯಂತ ಆಕರ್ಷಣೆಯಾದ ಭಕ್ತಿ ಪ್ರಧಾನವಾದ ಅತ್ಯಂತ ಅಚ್ಚುಕಟ್ಟಾಗಿ ಈ ಒಂದು ಚಲನಚಿತ್ರವು ಮೂಡಿಬಂದಿದೆ. ಈ ಒಂದು ಚಲನಚಿತ್ರವನ್ನು ನಮ್ಮ ರಾಯಚೂರಿನ ಭೀಮೇಶ್ ಅವರ ಅದ್ಬುತವಾಗಿ ನಿರ್ದೇಶನವನ್ನು ಮಾಡಿದ್ದಾರೆ. ಒಳ್ಳೆ ಗ್ರಾಫಿಕ್ಸು ಒಳ್ಳೆಯ ದೃಶ್ಯಾವಳಿಗಳನ್ನ ಸಂಯೋಜನೆ ಮಾಡಿ.



ಈ ಚಿತ್ರವು ವಂದಲಿ ಗ್ರಾಮದ ಶ್ರೀ ಮಾರುತೇಶ್ವರ ದೇವರ ಮಹಿಮೆ ಇತಿಹಾಸ ಹಾಗೂ ಸಂಸ್ಕೃತಿಕ ವೈಶಿಷ್ಟ್ಯಗಳನ್ನ ಪ್ರತಿಬಿಂಬಿಸುವ ರೀತಿಯಲ್ಲಿ ನಿರ್ಮಾಣಗೊಂಡಿದ್ದು. ಜೊತೆಗೆ ನಮ್ಮ ಸ್ಥಳೀಯ ಭಕ್ತರ ಭಾವನೆಗಳಿಗೆ ಸ್ಪಂದಿಸುವಂತಹ ಒಂದು ಚಲನಚಿತ್ರವಾಗಿದೆ.ಈ ಒಂದು ಚಲನಚಿತ್ರವನ್ನ ನಿರ್ಮಾಣದ ನಮ್ಮ ಭಾಗದ ಕಲಾವಿದರನ್ನೇ ಹಾಕಿಕೊಂಡು ಈ ಚಲನಚಿತ್ರವನ್ನು ನಿರ್ಮಿಸಿದ್ದು ನಿಜವಾಗಲೂ ಮೆಚ್ಚುವಂಥದ್ದು ಈ ಚಲನಚಿತ್ರವನ್ನು ನೋಡಲು ಬಹಳಷ್ಟು ಯುವಕರು ಇಂದು ಬಂದಿದ್ದೀರಿ.ಇದು ಸಂತೋಷದ ಸಂಗತಿ. ಭೀಮೇಶ ಇವರ ನಿರ್ದೇಶನದಲ್ಲಿ ನಮ್ಮ ಭಾಗದ ಕಲಾವಿದರನ್ನು ಹಾಕಿಕೊಂಡು ಚಲನಚಿತ್ರವನ್ನು ಮಾಡಿದ್ದಾರೆ ಅ.ದಕ್ಕೆ ನಿರ್ದೇಶಕರನ್ನು ನಮ್ಮ ಭಾಗದ ಕಲಾವಿದರನ್ನು ಗುರುತಿಸಿ ಪ್ರೋತ್ಸಾ ಹಿಸಿ ಬೆಳೆಸುವುದು ನಮ್ಮೆಲ್ಲರ ಆದ್ಯ ಕರ್ತವ್ಯ ಎಂದು ದಿನಾಂಕ 26 /4/ 2026 ರಂದು ರಾಯಚೂರಿನ ಪಂಡಿತ್ ಸಿದ್ದರಾಮ ಜಂಬಲ ದಿನ್ನಿ ರಂಗಮಂದಿರದಲ್ಲಿ ಪ್ರದರ್ಶನಗೊಂಡ ಒಂದಲಿ ಮಾರುತೇಶ್ವರ ಮಹಿಮೆ ಈ ಚಿತ್ರದ ನಿರ್ದೇಶಕರಾದ ಭೀಮೇಶ್ ಅವರಿಗೆ ಸನ್ಮಾನಿಸಿ ಗೌರವಿಸಿ ಜಿಲ್ಲಾ ಕನ್ನಡ ಸಾಹಿತ್ಯ ಪರಿಷತ್ತಿನ ಸಹ ಕಾರ್ಯದರ್ಶಿ , ಡಾ. ದಂಡಪ್ಪ ಬಿರಾದಾರ್ ಮಾತನಾಡಿದರು. ಜೊತೆಗೆ ಇದರಲ್ಲಿ ಕಾರು ನಿರ್ವಹಿಸಿದ ಎಲ್ಲರಿಗೂ ತಮ್ಮ ಕಡೆಯಿಂದ ಉಚಿತವಾಗಿ ಪುಸ್ತಕಗಳನ್ನು ನೀಡಿ ಅಭಿನಂದಿಸಿದರು.ಈ ಚಿತ್ರವನ್ನು ಕುರಿತು ನಗರಸಭೆಯ ಮಾಜಿ ಸದಸ್ಯರಾದ ಎಸ್ ರಾಜು ಅವರು ಮಾತನಾಡುತ್ತಾ.ಇದೊಂದು ಒಳ್ಳೆ ಅದ್ಬುತವಾದ ಚಲನಚಿತ್ರ ನಮ್ಮ ಭಾಗದ ಯುವಕರು ನಿರ್ದೇಶನ ಮಾಡಿದ್ದಾರೆ ನಮ್ಮ ಜಿಲ್ಲೆಯ ಕಲಾವಿದರು ನಟನೆ ಮಾಡಿದ್ದಾರೆ ಇವರ ಕಾರ್ಯ ನಿಜವಾಗಲೂ ಮೆಚ್ಚುವಂಥದ್ದು ಎಂದು ಹೇಳಿದರು ಈ ಸಂದರ್ಭದಲ್ಲಿ. ಕವಿಗಳಾದ ತಿಮ್ಮಯ್ಯ ಪ್ರಭು. ವೆಂಕಟೇಶ ಚಂದ್ರಶೇಖರ್ ಸೇರಿದಂತೆ ಇನ್ನಿತರರು ಉಪಸ್ಥಿತರಿದ್ದರು.

ಮನೆಪಟ್ಟಿ ತಯಾರಿಯಲ್ಲಿ ಶೇ 100 ರಷ್ಟು ಪ್ರಗತಿ ಸಾಧಿಸಿದ ಮೇಲ್ವಿಚಾರಕರಿಗೆ ಸನ್ಮಾನ



ಮಾನ್ವಿ,ಏ.27-

ಪಟ್ಟಣದ ತಹಶೀಲ್ದಾರ್ ಕಚೇರಿ ಆವರಣದಲ್ಲಿ 2026-27 ನೇ ಸಾಲಿನ ಭಾರತ ಸರಕಾರದ ಜನ ಗಣತಿ ಅಂಗವಾಗಿ ನಡೆದ ಮನೆಪಟ್ಟಿ ತಯಾರಿಯಲ್ಲಿ ಶೇ 100 ರಷ್ಟು ಪ್ರಗತಿಸಾಧಿಸುವುದಕ್ಕೆ ಶ್ರಮಿಸಿದ ಮೇಲ್ವಿಚಾರಕರನ್ನು ಮಾನ್ವಿ ಗ್ರಾಮೀಣ ಜನಗಣತಿ ಚಾರ್ಜ ಅಧಿಕಾರಿ ಹಾಗೂ ತಹಶೀಲ್ದಾರ್ ಭೀಮರಾಯ ಬಿ.ರಾಮಸಮುದ್ರ ರವರು ಸನ್ಮಾನಿಸಿ ಗೌರವಿಸಿ ಮಾತನಾಡಿ ಮಾನ್ವಿ ಗ್ರಾಮೀಣ ಭಾಗದಲ್ಲಿ ಮೊದಲ ಹಂತದಲ್ಲಿ ಗಣತಿದಾರರು ಯಶಸ್ವಿಯಾಗಿ ಶೇ100 ರಷ್ಟು ಪ್ರಗತಿಯನ್ನು ಸಾಧಿಸಿದ್ದಾರೆ ಮಾನ್ವಿ ಗ್ರಾಮಾಂತರ ಭಾಗದಲ್ಲಿ ಒಟ್ಟು ಜನಗಣತಿ ಕಾರ್ಯಕ್ಕಾಗಿ ಒಟ್ಟು 251 ಗಣತಿದಾರರು.38 ಮೇಲ್ವಿಚಾರಕರು, 4 ಮಾಸ್ಟರ್ ತರಬೇತಿ ದಾರರನ್ನು ನೇಮಕಮಾಡಲಾಯಿತು. ಮಾನ್ವಿ ಗ್ರಾಮೀಣ ಭಾಗದಲ್ಲಿ 1ಲಕ್ಷ 49 ಸಾವಿರ ಜನಸಂಖ್ಯೆಗೆ ಅನುಗುಣವಾಗಿ 40 ಸಾವಿರ ಮನೆಪಟ್ಟಿಯನ್ನು ಗಣತಿದಾರು ಮೇಲ್ವಿಚಾರಕರ ಮಾರ್ಗದರ್ಶನದಲ್ಲಿ ತಯಾರಿಸುವ ಮೂಲಕ ಮೊದಲ ಹಂತದ ಮನೆಪಟ್ಟಿ ತಯಾರಿಕೆಯನ್ನು ಪೂರ್ಣಗೊಳಿಸಿದ್ದಾರೆ ಎರಡನೆ ಹಂತದ ಜನಗಣತಿಯನ್ನು ಕೂಡ ಗಣತಿದಾರರು ಯಶಸ್ವಿಯಾಗಿ ಪೂರ್ಣಗೊಳಿಸಲಿದ್ದಾರೆ ಎಂದು ತಿಳಿಸಿದರು.

ಮಾನ್ವಿ ಗ್ರಾಮೀಣ ಭಾಗದಲ್ಲಿ ಶೇ 100 ರಷ್ಟು ಮನೆಪಟ್ಟಿ ತಯಾರಿ ಪೂರ್ಣಗೊಳಿಸಿದ 38 ಗಣತಿ ಮೇಲ್ವಿಚಾರಕರನ್ನು ಸನ್ಮಾನಿಸಿ ಗೌರವಿಸಲಾಯಿತು.

ಮದುವೆ ಅರ್ಥಪೂರ್ಣ ಆಚರಣೆಗೆ ಸಾಧಕರಿಗೆ ಸನ್ಮಾನ -ಭರತ ಸಾಗರ



ರಾಯಚೂರು, ಏ.27-ಸಾಮಾನ್ಯವಾಗಿ ಮದುವೆ ಸಮಾರಂಭಗಳು ವೈಯಕ್ತಿಕ ಸಂತಸದ ಆಚರಣೆಗಳಿಗೆ ಸೀಮಿತವಾಗಿರುತ್ತವೆ. ಆದರೆ ಸಮಾಜ ಸೇವೆಗೆ ತಮ್ಮನ್ನು ಅರ್ಪಿಸಿಕೊಂಡಿರುವ ಸಾಧಕರನ್ನು ಗೌರವಿಸುವ ಮೂಲಕ ಮದುವೆಯನ್ನು ಅರ್ಥಪೂರ್ಣ ಆಚರಣೆಗೆ ವಿವಿಧ ಕ್ಷೇತ್ರದಲ್ಲಿ ಸಾಧಕರಿಗೆ ತಮ್ಮ ಮದುವೆ ಸಮಾರಂಭದಲ್ಲಿ ಸನ್ಮಾನ ಕಾರ್ಯಕ್ರಮ ಹಮ್ಮಿಕೊಳ್ಳಲಾಗಿದೆ ಎಂದು ಯುವಕ ಭರತ ಸಾಗರ ಅವರು ಹೇಳಿದರು.

ಅವರಿಂದು ನಗರದ ಸುದ್ದಿಗಾರರೊಂದಿಗೆ ಮಾತನಾಡಿ,ನಗರದ ಯುವಕ ಭರತ ಸಾಗರ ಅವರು ತಮ್ಮ ವಿವಾಹ ಸಮಾರಂಭದ ಅಂಗವಾಗಿ ವಿವಿಧ ಕ್ಷೇತ್ರಗಳಲ್ಲಿ ಸೇವೆ ಸಲ್ಲಿಸುತ್ತಿರುವ ಸಾಧಕರಿಗೆ ಸನ್ಮಾನ ಕಾರ್ಯಕ್ರಮ ಹಮ್ಮಿಕೊಂಡಿದ್ದಾರೆ. ಇದೇ 29ರಂದು ಬುಧವಾರ ಚಿಕ್ಕಸೂಗೂರು ಗ್ರಾಮದ ಶ್ರೀ ಆಂಜನೇಯ ದೇವಸ್ಥಾನದಲ್ಲಿ ನಡೆಯುವ ಮದುವೆ ಸಮಾರಂಭದಲ್ಲಿ ಈ ವಿಶಿಷ್ಟ ಸನ್ಮಾನ ನಡೆಯಲಿದೆ ಎಂದರು.

ಸೋಮವಾರ ನಗರ ಪತ್ರಿಕಾ ಭವನದಲ್ಲಿ ನಡೆದ ಪತ್ರಿಕಾ ಗೋಷ್ಠಿಯಲ್ಲಿ ಮಾತನಾಡಿದ ಭರತ ಸಾಗರ, ''ಒಳ್ಳೆಯವರಿಂದ ಒಳ್ಳೆಯವರಿಗಾಗಿ ಒಳ್ಳೆಯವರಿಗೋಸ್ಕರ'' ಎಂಬ ಆಶಯದೊಂದಿಗೆ ಈ ಕಾರ್ಯಕ್ರಮವನ್ನು ಆಯೋಜಿಸಲಾಗಿದೆ ಎಂದರು. ದೇಶರಕ್ಷಣೆಗಾಗಿ ಸೇವೆ ಸಲ್ಲಿಸುವ ಸೈನಿಕರು, ಅನ್ನದಾತರಾದ ರೈತರು, ವೈದ್ಯರು, ಶಿಕ್ಷಕರು, ಪೊಲೀಸ್ ಸಿಬ್ಬಂದಿ, ನ್ಯಾಯವಾದಿಗಳು ಹಾಗೂ ಮಾಧ್ಯಮ ಪ್ರತಿನಿಧಿಗಳನ್ನು ಗುರುತಿಸಿ ಸನ್ಮಾನಿಸಲಾಗುವುದು ಎಂದು ವಿವರಿಸಿದರು.

ಸಮಾಜಕ್ಕಾಗಿ ನಿಸ್ವಾರ್ಥವಾಗಿ ದುಡಿಯುವ ಅನೇಕ ಸಾಧಕರು ಗುರುತಿಸದೇ ಉಳಿಯುತ್ತಿರುವುದು ವಿಷಾದನೀಯ. ಇಂತಹವರನ್ನು ಗೌರವಿಸುವ ಮೂಲಕ ಇತರರಿಗೂ ಪ್ರೇರಣೆ ನೀಡಬೇಕು ಎಂಬ ಉದ್ದೇಶದಿಂದ ಮದುವೆಯಂತಹ ವೈಯಕ್ತಿಕ ಕಾರ್ಯಕ್ರಮವನ್ನೇ ಸಮಾಜಮುಖಿ ವೇದಿಕೆಯಾಗಿ ರೂಪಿಸಿದ್ದೇನೆ ಎಂದು ಹೇಳಿದರು.

ಈ ರೀತಿಯ ವಿಭಿನ್ನ ಪ್ರಯತ್ನಗಳು ಸಮಾಜದಲ್ಲಿ ಸೇವಾಭಾವನೆಗೆ ಉತ್ತೇಜನ ನೀಡುವ ಜೊತೆಗೆ, ಸಾಧಕರಿಗೆ ಗೌರವ ನೀಡುವ ಸಂಸ್ಕೃತಿಯನ್ನು ಬೆಳೆಸಲು ಸಹಕಾರಿಯಾಗಲಿ ಎಂದು ಭರತ ಸಾಗರ ತಿಳಿಸಿದರು.

ಪಠಾಣ್ ಹತ್ಯೆ ಪ್ರಕರಣ: ನಾಲ್ವರಿಗೆ ಜೀವಾವಧಿ ಶಿಕ್ಷೆ

ಸರಕಾರಿ ಅಭಿಯೋಜಕ ಆರ್.ಎ. ಗಡ್ಕರಿ ವಾದ ಮಂಡಿಸಿದರು. ಮಾಳಮಾರುತಿ ಪೊಲೀಸ್ ಠಾಣೆಯಲ್ಲಿ ಪ್ರಕರಣ ದಾಖಲಾಗಿತ್ತು.

ಆರೋಪಿಗಳಾದ ಲಕ್ಷ್ಮಣ ದಡ್ಡಿ, ಸವೀನ ದಡ್ಡಿ, ಬಸವರಾಜ ದಡ್ಡಿ ಹಾಗೂ ಬಸವಣ್ಣಿ ನಾಯಕರನ್ನು ನ್ಯಾಯಾಲಯ ದೋಷಿಗಳೆಂದು ಘೋಷಿಸಿದೆ. ಇದೇ ವೇಳೆ, ಇವರ ವಿರುದ್ಧ ಇಬ್ಬರ ಮೇಲಿನ ಕೊಲೆ ಯತ್ನ ಪ್ರಕರಣದ ಆರೋಪವೂ ಸಾಬೀತಾಗಿದೆ.

2020ರಲ್ಲಿ ನಡೆದ ಈ ಘಟನೆಯಲ್ಲಿ, ಶಹಬಾಝ್ ಪಠಾಣ್ ಸ್ನೇಹಿತನ ಜನ್ಮದಿನ ಕಾರ್ಯಕ್ರಮದಿಂದ ಮನೆಗೆ ಬೈಕಿನಲ್ಲಿ ಹಿಂದಿರುಗುತ್ತಿದ್ದ ವೇಳೆ, ಆರೋಪಿಗಳು ವಾಹನದ ಮೂಲಕ ಅವರ ಬೈಕಿಗೆ ಢಿಕ್ಕಿ ಹೊಡೆದು ದಾಳಿ ನಡೆಸಿದ್ದರು.

ಪ್ರಾಣ ಉಳಿಸಿಕೊಳ್ಳಲು ಶಹಬಾಝ್ ಸಮೀಪದ ನಿವೃತ್ತ ಡಿವೈಎಸ್ಪಿಯವರ ಮನೆಗೆ ಓಡಿ ಹೋಗಿದ್ದರೂ, ಆರೋಪಿಗಳು ಅವರನ್ನು ಬೆನ್ನಟ್ಟಿ ಮಾರಕಾಸ್ತ್ರಗಳಿಂದ ಹಲ್ಲೆ ನಡೆಸಿ ಕೊಲೆಗೈದಿದ್ದರು.

ಗಂಭೀರವಾಗಿ ಗಾಯಗೊಂಡ ಶಹಬಾಝ್ ಪಠಾಣ್ ಸ್ಥಳದಲ್ಲೇ ಸಾವನ್ನಪ್ಪಿದರು.

ತನಿಖೆ ವೇಳೆ ಪೊಲೀಸರು 30 ಮಂದಿ ಸಾಕ್ಷಿದಾರರ ಹೇಳಿಕೆಗಳು ಮತ್ತು 128ಕ್ಕೂ ಹೆಚ್ಚು ದಾಖಲೆ ಸಾಕ್ಷ್ಯಾಧಾರಗಳನ್ನು ನ್ಯಾಯಾಲಯಕ್ಕೆ ಮಂಡಿಸಿದ್ದರು. ಈ ಎಲ್ಲ ಸಾಕ್ಷ್ಯಗಳನ್ನು ಪರಿಶೀಲಿಸಿದ ಬಳಿಕ ನ್ಯಾಯಾಲಯ ಆರೋಪಿಗಳ ವಿರುದ್ಧದ ಆರೋಪಗಳು ಸಾಬೀತಾಗಿವೆ ಎಂದು ತೀರ್ಮಾನಿಸಿದೆ.

ಇದಲ್ಲದೆ, ನ್ಯಾಯಾಲಯ ಆರೋಪಿಗಳಿಗೆ ಒಟ್ಟು 9.60 ಲಕ್ಷ ರೂ. ದಂಡ ವಿಧಿಸಿದ್ದು, ಅದರಲ್ಲಿ ಎಂಟು ಲಕ್ಷ ರೂ.ವನ್ನು ಮೃತ ಶಹಬಾಝ್ ಪಠಾಣ್ ಅವರ ಕುಟುಂಬಕ್ಕೆ ಪರಿಹಾರವಾಗಿ ನೀಡಲು ಹಾಗೂ 1.60 ಲಕ್ಷ ರೂ.ವನ್ನು ದೂರುದಾರರಿಗೆ ನೀಡಲು ಆದೇಶಿಸಿದೆ.

ಕೊಡಗು: 2,000 ಅಕ್ರಮ ಹೋಮ್ ಸ್ಟೇಗಳ ವಿರುದ್ಧ ಕ್ರಮ ಕೈಗೊಳ್ಳುವಂತೆ ರೆಸಾರ್ಟ್ ಮಾಲೀಕರ ಒತ್ತಾಯ

ಅಮಾನತುಗೊಳಿಸಬಹುದಿತ್ತು ಎಂದು ಅವರು ವಾದಿಸಿದರು. ಕೊಡಗು ಎಸ್ಪಿ ಕೆ. ಬಿಂದು ಮಣಿ ಅವರು ಪ್ರವಾಸಿಗರ ಸುರಕ್ಷತಾ ಪ್ರೋಟೋಕಾಲ್ ಗಳನ್ನು ಬಲಪಡಿಸಲು ಹೋಟೆಲ್‌ಗಳು, ರೆಸಾರ್ಟ್‌ಗಳು, ಹೋಂಸ್ಟೇಗಳು ಮತ್ತು ಟ್ರಾವೆಲ್ ಏಜೆನ್ಸಿ ಗಳ ಮಾಲೀಕರೊಂದಿಗೆ ಸಭೆ ನಡೆಸಿದರು. ಎಸ್‌ಪಿ ಮಾಲೀಕರಿಗೆ ಕಾನೂನನ್ನು ಪಾಲಿಸುವಂತೆ ಸೂಚಿಸಿದರು ಮತ್ತು ಅವರ ಆವರಣದಲ್ಲಿ ಯಾವುದೇ ಕಾನೂನುಬಾಹಿರ ಅಥವಾ ಕ್ರಿಮಿನಲ್ ಚಟುವಟಿಕೆಗೆ ಅವರನ್ನು ಹೊಣೆಗಾರರನ್ನಾಗಿ ಮಾಡಲಾಗುವುದು ಎಂದು ಎಚ್ಚರಿಸಿದರು.

ರಾಹುಲ್‌ಗಾಂಧಿಗೆ ಪಪ್ಪು ಎನ್ನುವುದರಲ್ಲಿ ತಪ್ಪಿಲ್ಲ ; ಟಿಎಂಸಿ ನಾಯಕ ಘೋಷ್

ಸುಗಮಗೊಳಿಸುತ್ತಿದ್ದಾರೆ ಎಂದು ಹೇಳಿದರು. ಬಿಜೆಪಿ ನಾಯಕರು ರಾಹುಲ್ ಗಾಂಧಿಯವರನ್ನು ಪಪ್ಪು ಎಂದು ಕರೆಯುವುದರಲ್ಲಿ ಯಾವುದೇ ತಪ್ಪಿಲ್ಲ. ಅವರ ಸರಣಿ ರಾಜಕೀಯ ವೈಫಲ್ಯಗಳು ಮತ್ತು ಪ್ರಸ್ತುತ ನಡೆಯನ್ನು ನೋಡಿದರೆ ಆ ಹೆಸರು ಅವರಿಗೆ ಸಂಪೂರ್ಣವಾಗಿ ಸೂಕ್ತವಾಗಿದೆ ಎಂದು ಘೋಷ್ ವ್ಯಂಗ್ಯವಾಡಿದರು.

ಪಶ್ಚಿಮ ಬಂಗಾಳದಲ್ಲಿ ಮಮತಾ ಬ್ಯಾನರ್ಜಿ ನೇತೃತ್ವದ ಸರ್ಕಾರ ಮತ್ತು ಟಿಎಂಸಿ ಪಕ್ಷವು ಭ್ರಷ್ಟಾಚಾರದಲ್ಲಿ ಮುಳುಗಿದೆ ಎಂದು ರಾಹುಲ್ ಗಾಂಧಿ ಇತ್ತೀಚೆಗೆ ತೀವ್ರ ವಾಗ್ದಾಳಿ ನಡೆಸಿದ್ದರು. ರಾಹುಲ್ ಅವರ ಈ ಹೇಳಿಕೆಗೆ ತಿರುಗೇಟು ನೀಡುವ ಭಾಗವಾಗಿ ಕುನಾಲ್ ಘೋಷ್ ಈ ಕಠಿಣ ಮಾತುಗಳನ್ನು ಆಡಿದ್ದಾರೆ.

ಸೋಮವಾರಪೇಟೆದ ಶಿಲಾಮಂಟಪ ಕಾಮಗಾರಿಗೆ ಚಾಲನೆ

ಶಿಲಾ ಮಂಟಪದ ಭದ್ರ ಬುನಾಧಿಯ ಮೇಲೆ ಶಿಲಾ ಬಂಡೆಗಳನ್ನು ಜೋಡಿಸುವ ಕಾಮಗಾರಿ ಪ್ರಗತಿಯಲ್ಲಿದೆ, ನಾಲ್ಕೈದು ದಿನಗಳ ನಂತರ ಶ್ರೀಮಠದ ಸರ್ವ ಹಿರಿಯ ಸದ್ಭಕ್ತರ ಸಮ್ಮುಖದಲ್ಲಿ ಶಿಲಾಗಂಬಗಳನ್ನು ಜೋಡಿಸುವ ಕಾಮಗಾರಿ ಜರುಗುವುದು. ವಡ್ಡೆಪಲ್ಲಿ ಮಂಡಲದ ಕೊಂಕಲ ಗ್ರಾಮದ ವರದರಾಜುರವರ ಸುಮಾರು ಹತ್ತು ಜನರ ತಂಡದವರಿಂದ ಶಿಲಾ ಮಂಟಪ ಜೋಡಣೆ ಕಾಮಗಾರಿ ಜರುತ್ತಿದೆ. ಇನ್ನೂ ನಾಲ್ಕೈದು ದಿನಗಳಲ್ಲಿ ಬುನಾಧಿಗೆ ಬಂಡೆ ಹಾಸುವ ಕಾಮಗಾರಿಯ ನಂತರ ಶಿಲಾಗಂಬಗಳನ್ನು ನಿಲ್ಲಿಸಲಾಗುವುದು. ಈ ಸಂದರ್ಭದಲ್ಲಿ ಶ್ರೀಮಠದ ಸರ್ವ ಶಿಷ್ಯ ವೃಂಧದವರು ಉಪಸ್ಥಿತರಿದ್ದರು.

ಹೃದಯದಲ್ಲಿ ಸ್ಟಂಟ್ ಅಳವಡಿಕೆಯಾಗಿದ್ದರೂ ಛಲಬಿಡದ ತ್ರಿವಿಕ್ರಮ ಈ ನಮ್ಮ ಶಿವಕುಮಾರ ಉಪ್ಪಾರ

ಹಾವೇರಿ,ಏ.27-

ಕಳೆದ ಐದು ದಿನಗಳ ಹಿಂದೆ ಅಂದರೆ ದಿನಾಂಕ:-22/04/2026 ರಂದು ಬೆಳಿಗ್ಗೆ 11.30 ಕ್ಕೆ ಹಾವೇರಿ ಜಿಲ್ಲಾ ರಟ್ಟಿಹಳ್ಳಿ ತಾಲೂಕು ರಟ್ಟಿಹಳ್ಳಿ ನಗರದ ಕೋಟೆ ಪ್ರದೇಶದ ಉಪ್ಪಾರ ಓಣಿಯಲ್ಲಿ ನನ್ನ ಆತ್ಮೀಯ ಮಾಧ್ಯಮ ಮಿತ್ರ ಹಾಗೂ ಕಾನಿಪ ಧ್ವನಿ ರಟ್ಟಿಹಳ್ಳಿ ತಾಲೂಕು ಅಧ್ಯಕ್ಷರಾದ ಶಿವಕುಮಾರ ಉಪ್ಪಾರ ಇವರ ನೇತೃತ್ವದಲ್ಲಿ ಟ್ರಸ್ಟ್ ರಚನೆ ಮಾಡಿಕೊಂಡು ಜನಾಂಗ ಕಡಿಮೆ ಸಂಖ್ಯೆಯಲ್ಲಿದ್ದರೂ ಕೂಡ ಎಲ್ಲಾ ಸಮಾಜ ಜನಾಂಗದ ಪ್ರೀತಿ ಗಳಿಸಿ ಅಂದಾಜು 75 ಲಕ್ಷ ರೂ ಗಳ ವೆಚ್ಚದಲ್ಲಿ ಶ್ರೀ ರಾಜರ್ಷಿ ಭಗೀರಥ ಹಾಗೂ ದುರ್ಗಾದೇವಿಯ ದೇವಸ್ಥಾನದ ಉದ್ಘಾಟನೆ ಜೊತೆಗೆ ಪ್ರತಿಷ್ಠಾಪನಾ ಸಮಾರಂಭದಲ್ಲಿ ಕಾನಿಪ ಧ್ವನಿ ರಾಜ್ಯಾಧ್ಯಕ್ಷರಾದ ಬಂಗ್ಲೆ ಮಲ್ಲಿಕಾರ್ಜುನ ರವರು ಮುಖ್ಯ ಅತಿಥಿಯಾಗಿ ಭಾಗವಹಿಸಿದಂತ ಈ ಕಾರ್ಯಕ್ರಮದ ಸಾನಿಧ್ಯವನ್ನು ಉಪ್ಪಾರ ಸಮುದಾಯದ ಜಗದ್ಗುರು ಪರಮಪೂಜ್ಯರಾದ ಡಾ.ಶ್ರೀಪುರುಷೋತ್ತಮಾನಂದಪುರಿ ಮಹಾಸ್ವಾಮಿಗಳ ಜೊತೆ ಇನ್ನೂ ಮೂರು ಜನ ಮಠಾಧಿಪತಿಗಳು ವಹಿಸಿದಂತ ಈ ಅರ್ಥಪೂರ್ಣ ಕಾರ್ಯಕ್ರಮಕ್ಕೆ ಹಾವೇರಿ ಜಿಲ್ಲಾ ಕೆ.ಎಂ.ಎಫ್. ಎಂ.ಡಿ.ಯವರು ಜಿಲ್ಲಾ ಪಂಚಾಯತ್ನ ಉಪ ಕಾರ್ಯದರ್ಶಿಗಳು,ಪುರಸಭೆ ಅಧ್ಯಕ್ಷರು,ಸರ್ಕಾರದ ಮಾಜಿ ಸಚೇತಕರು ಜೊತೆಗೆ ಅನೇಕ ಅಧಿಕಾರಿಗಳು,ಸಾಹಿತಿಗಳು,ಹಿರಿಯ ರಾಜಕಾರಣಿಗಳು ಪತ್ರಕರ್ತರು ಊರಿನ ಬಹುತೇಕ ಸಾರ್ವಜನಿಕರು ಭಾಗವಹಿಸಿದ್ದರು. ಅನೇಕ ಸಾಧಕರಿಗೆ ಪ್ರತಿಭಾವಂತ ವಿದ್ಯಾರ್ಥಿಗಳಿಗೆ ಸನ್ಮಾನದ ಜೊತೆಗೆ ರಾಜ್ಯಾಧ್ಯಕ್ಷರಾದ ಬಂಗ್ಲೆ ಮಲ್ಲಿಕಾರ್ಜುನ ರವರಿಗೂ ಉಪ್ಪಾರ ಸಮುದಾಯದ ಜಗದ್ಗುರುಗಳಾದ ಡಾ.ಶ್ರೀಪುರುಷೋತ್ತಮಾನಂದಪುರಿ ಮಹಾಸ್ವಾಮಿಗಳಿಂದ ಸನ್ಮಾನಗೊಂಡಿದ್ದು ವಿಶೇಷ. ಈ ಅರ್ಥಪೂರ್ಣ ಕಾರ್ಯಕ್ರಮವನ್ನು ಉದ್ದೇಶಿಸಿ ಮಾತನಾಡಿದ ಬಂಗ್ಲೆ ಮಲ್ಲಿಕಾರ್ಜುನ ರವರು ಕಡಿಮೆ ಸಂಖ್ಯೆ ಜನಾಂಗ ಹೊಂದಿದ್ದರೂ ತನ್ನ ಕಷ್ಟಾರ್ಜಿತ ಕಾಯಕದೊಂದಿಗೆ ಎಲ್ಲರ ಪ್ರೀತಿ ವಿಶ್ವಾಸಕ್ಕೆ ಪಾತ್ರರಾಗಿರುವುದಲ್ಲದೇ ತನಗೆ ಈ ಹಿಂದೆ ಹಾರ್ಟ್ ಅಟ್ಯಾಕ್ ಸಂಭವಿಸಿ ಸ್ಟಂಟ್ ನ್ನು ಹೃದಯದಲ್ಲಿ ಅಳವಡಿಸಿದ್ದರೂ ಕೂಡ ಲೆಕ್ಕಿಸದೇ ಛಲಬಿಡದೆ ಪತ್ರಿಕೋಧ್ಯಮದ ಜೊತೆಗೆ ಸಮಾಜ ಸೇವೆಯನ್ನು ಕೈಗೊಂಡಿರುವುದರ ಫಲವಾಗಿ ಕಳೆದ ಆರು ತಿಂಗಳ ಹಿಂದೆ ನಡೆದ ರಟ್ಟಿಹಳ್ಳಿ ಪುರಸಭೆಯ ಚುನಾವಣೆಯಲ್ಲಿ ಯಾವೊಂದು ಪಕ್ಷವೂ ಟಿಕೆಟ್ ನೀಡದಿದ್ದರೂ ಸ್ವತಂತ್ರ ಅಭ್ಯರ್ಥಿಯಾಗಿ ಸ್ಪರ್ಧಿಸಿ ಬಲಾಢ್ಯ ಕಾಂಗ್ರೆಸ್ ಹಾಗೂ ಬಿ.ಜೆ.ಪಿ. ಅಭ್ಯರ್ಥಿಗಳನ್ನು ಮಣ್ಣುಮುಕ್ಕುಸಿ ವಿಜಯದ ಮಾಲೆಯನ್ನು ರಟ್ಟಿಹಳ್ಳಿಯ ಜನತೆ ಶಿವಕುಮಾರ ರವರಿಗೆ ಹಾಕಿದ್ದು ನಿಜಕ್ಕೂ ನಿಸ್ವಾರ್ಥ ಸೇವೆಗೆ ಸಂದ ಹೃತೂರ್ವಕ ಗೌರವವೇ ಸರಿ.

Printed and Published by: SUNDAR and Owned by: SUNDAR Printed at: SHILPA PUBLICATIONS AND PRINTING PRESS, No. 5-122/2,Ward No.20, Vidya Nagara Colony, Sirwar-584129, Raichur Dist, Karnataka. Published at: No. 5-122/2,Ward No.20, Vidya Nagara Colony, Sirwar-584129, Raichur Dist, Karnataka. Editor: SUNDAR